23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 295 | ನವದೆಹಲಿ | ಬೆಲೆ ₹10 | ಮೇ 1, 2026, ಶುಕ್ರವಾರ

## ಒಳಪುಟಗಳಲ್ಲಿ

ಪ್ರಧಾನಿ ನರೇಂದ್ರ ಮೋದಿ ಜಾತಿ ಸಮೀಕ್ಷೆಯನ್ನು ಮುಂದೂಡಲು ಬಯಸಿದ್ದಾರೆ: ಕಾಂಗ್ರೆಸ್ ಆರೋಪ - ಪು.4

ಮಾಧ್ಯಮಗಳ ವಿರುದ್ಧ ಕ್ರಮ ಕೋರಿದ್ದ ದರ್ಶನ್ ಕೋರಿದ್ದ ಮನವಿ ಭಾಗಶಃ ಪುರಸ್ಕರಿಸಿದ ಹೈಕೋರ್ಟ್ - ಪು.5

8,000 ಪೊಲೀಸ್ ಸಿಬ್ಬಂದಿ ಶೀಘ್ರ ನೇಮಕ - ಪು.6

# ಕಾರ್ಯಪಾಲಕ ಇಂಜಿನಿಯರ್ ಅಮಾನತಿಗೆ ಸಿಎಂ ಸಿದ್ದರಾಮಯ್ಯ ಸೂಚನೆ

## ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಅವಘಡ ಬೆನ್ನಲ್ಲೇ ಜಿಬಿಎ ಆಯುಕ್ತರೊಂದಿಗೆ ಸಿಎಂ ಸಭೆ

**ಬೆಂಗಳೂರು, ಏ.30:** ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಗೋಡೆ ಕುಸಿದು ಏಳು ಜನರ ಸಾವಿಗೆ ಕಾರಣವಾಗಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಕಾರ್ಯಪಾಲಕ ಇಂಜಿನಿಯರ್ ಅವರನ್ನು ಅಮಾನತುಗೊಳಿಸಿ, ನೋಟೀಸ್ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು.

ಭಾರಿ ಮಳೆಯಿಂದ ಬೌರಿಂಗ್ ಆಸ್ಪತ್ರೆ ದುರಂತದ ಹಿನ್ನೆಲೆಯಲ್ಲಿ ಗುರುವಾರ ನಡೆದ ಜಿಬಿಎ ಆಯುಕ್ತರ ಸಭೆಯಲ್ಲಿ ಬೆಂಗಳೂರಿನಲ್ಲಿ ಮಳೆಯಿಂದ ಉಂಟಾಗಿರುವ ಹಾನಿ ಹಾಗೂ ಬೌರಿಂಗ್ ಆಸ್ಪತ್ರೆ ಗೋಡೆ ಕುಸಿತದಿಂದ ಬುಧವಾರ ಏಳು ಜನ ಮೃತಪಟ್ಟ ಘಟನೆ ಕುರಿತು ಜಿಬಿಎ ಆಯುಕ್ತರೊಂದಿಗೆ ಚರ್ಚಿಸಿದ ಮುಖ್ಯಮಂತ್ರಿಗಳು, ಗೋಡೆಗೆ ಹಾನಿ ಆಗಲಿದೆ ಎಂದು ತಿಳಿದಿದ್ದರೂ ಕಾಮಗಾರಿ ನಡೆಯುವಾಗ ಮಣ್ಣು ಸುರಿದದ್ದು ಏಕೆ ಎಂದು ಪ್ರಶ್ನಿಸಿದರು. ಗೋಡೆಗೆ ಹಾನಿಯಾಗುವಂತೆ ಮಣ್ಣು ಸುರಿದದ್ದು, ನೀವು ಏಕೆ ನೋಡಿಕೊಳ್ಳಲಿಲ್ಲ ಎಂದು ಆಸ್ಪತ್ರೆ ಮುಖ್ಯಸ್ಥರನ್ನು ಮುಖ್ಯಮಂತ್ರಿಗಳು ಪ್ರಶ್ನಿಸಿದರು. ಬೌರಿಂಗ್ ಆಸ್ಪತ್ರೆ ಮುಖ್ಯಸ್ಥರಿಗೆ ನೋಟಿಸ್ ನೀಡಲು ಸೂಚಿಸಿದ ಮುಖ್ಯಮಂತ್ರಿಗಳು ಬೆಂಗಳೂರಿನಲ್ಲಿ ಗುಂಡಿಗಳನ್ನು ಮುಚ್ಚಲು ಕೂಡಲೇ ಕ್ರಮ ಕೈಗೊಳ್ಳಬೇಕು ಎಂದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಶಾಸಕ ರಿಜ್ವಾನ್ ಅರ್ಷದ್, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಜಿಬಿಎ ಆಯುಕ್ತ ಮಹೇಶ್ವರ್‌ರಾವ್, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಅಂಜುಮ್ ಪರ್ವೇಜ್ ಮೊದಲಾದವರು ಉಪಸ್ಥಿತರಿದ್ದರು.



### ಅಪಾಯಕಾರಿ ಮರ ತೆರವುಗೊಳಿಸಿ, ಅಂಡರ್‌ಪಾಸ್ ಬಳಸದಂತೆ ಬ್ಯಾರಿಕೇಡ್ ಹಾಕಿ

ಬೆಂಗಳೂರಿನಲ್ಲಿ ಉಂಟಾದ ಮಳೆಯಲ್ಲಿ ಸಾಕಷ್ಟು ಹಾನಿಯಾಗಿದ್ದು, 250ಕ್ಕೂ ಹೆಚ್ಚು ಮರಗಳು ಬಿದ್ದಿವೆ. ಮುಂಗಾರು ಮಳೆ ಪ್ರಾರಂಭವಾಗುವ ಮೊದಲೇ ಸಿದ್ಧತೆ ಕೈಗೊಳ್ಳಿ. ಬೆಂಗಳೂರಿನ ಐದೂ ವಲಯಗಳ ಆಯುಕ್ತರು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು . ಒಣಗಿರುವ ಅಪಾಯಕಾರಿ ಮರಗಳ ರೆಂಬೆಗಳನ್ನು ಕತ್ತರಿಸಬೇಕು ಎಂದು ಮುಖ್ಯಮಂತ್ರಿಗಳು ಸೂಚಿಸಿದರು. ಮುಂದಿನ ದಿನಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಗಳಿದ್ದು ರಾಜಕಾಲುವೆಗಳಲ್ಲಿ ಹೂಳು ತೆಗೆಯುವುದು, ಪ್ರವಾಹ ಉಂಟಾಗದಂತೆ ಕ್ರಮ ತೆಗೆದುಕೊಳ್ಳಬೇಕು ಎಂದರು. ಮಳೆಯಿಂದ ರಸ್ತೆಯಲ್ಲಿ ಬಿದ್ದಿರುವ ಕಸ, ರೆಂಬೆಗಳನ್ನು ಕೂಡಲೇ ತೆರವು ಮಾಡಲು ಸೂಚಿಸಿದರು. ಅಂಡರ್ ಪಾಸ್‌ಗಳಲ್ಲಿ ಮಳೆ ನೀರು ನಿಲ್ಲದಂತೆ ಹಾಗೂ ಜನ ಅಂಡರ್‌ಪಾಸ್ ಬಳಸದಂತೆ ಕೂಡಲೇ ಬ್ಯಾರಿಕೇಡ್ ಹಾಕಿ ಎಂದು ಸಿದ್ದರಾಮಯ್ಯ ಸೂಚಿಸಿದರು.

## ಬೆಂಗಳೂರು ಮಳೆ ದುರಂತದಲ್ಲಿ ಮೃತಪಟ್ಟವರಿಗೆ ಪ್ರಧಾನಿ ಸಂತಾಪ



**ನವದೆಹಲಿ, ಏ.30:** ಬೆಂಗಳೂರು ಮಳೆಗೆ ಗೋಡೆ ಕುಸಿದು 6 ವರ್ಷದ ಬಾಲಕಿ ಸೇರಿದಂತೆ ಏಳು ಜನರು ಮೃತಪಟ್ಟ ಘಟನೆಗೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ವ್ಯಕ್ತಪಡಿಸಿದ್ದಾರೆ. ಈ ದುರ್ಘಟನೆ ದುರದೃಷ್ಟಕರ ಎಂದಿದ್ದು, ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಹೇಳಿಕೆ ಹಾಕಿರುವ ಅವರು, ಬೆಂಗಳೂರಿನಲ್ಲಿ ಗೋಡೆ ಕುಸಿದು ಸಂಭವಿಸಿದ ದುರ್ಘಟನೆ ದುರದೃಷ್ಟಕರ. ಮೃತರ ಕುಟುಂಬಗಳ ಜೊತೆ ನಾವಿದ್ದೇವೆ. ಗಾಯಾಳುಗಳು ಆದಷ್ಟು ಬೇಗ ಗುಣಮುಖರಾಗಲಿ ಎಂದು ಪ್ರಾರ್ಥಿಸುತ್ತೇನೆ ಎಂದಿದ್ದಾರೆ. ಘಟನೆಯಲ್ಲಿ ಸಾವನ್ನಪ್ಪಿದ ಸಂತ್ರಸ್ತ ಕುಟುಂಬಗಳಿಗೆ ಪ್ರಧಾನಮಂತ್ರಿಯವರ ಕಚೇರಿ ಪರಿಹಾರಧನ ಘೋಷಿಸಿದೆ. ಮೃತರ ಕುಟುಂಬ ಸದಸ್ಯರಿಗೆ ಪ್ರಧಾನಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ತಲಾ 2 ಲಕ್ಷ ರೂ.ಗಳ ಪರಿಹಾರ ನೀಡಲಾಗುವುದು. ಗಾಯಗೊಂಡವರಿಗೆ 50,000 ರೂ.ಗಳ ಪರಿಹಾರ ನೀಡಲಾಗುವುದು ಎಂದು ತಿಳಿಸಲಾಗಿದೆ.

## ಡಾಲರ್ ಎದುರು ಸಾರ್ವಕಾಲಿಕ ಕುಸಿತ ಕಂಡ ರೂಪಾಯಿ

**ನವದೆಹಲಿ, ಏ.30:** ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯವು ಸಾರ್ವಕಾಲಿಕ ಕನಿಷ್ಠ ಮಟ್ಟಕ್ಕೆ ಕುಸಿದಿದೆ. ಗುರುವಾರದ ಆರಂಭಿಕ ವಹಿವಾಟಿನಲ್ಲಿ ರೂಪಾಯಿ ಮೌಲ್ಯವು 32 ಪೈಸೆಗಳಷ್ಟು ತೀವ್ರ ಕುಸಿತ ಕಂಡು, ಒಂದು ಡಾಲರ್‌ಗೆ ದಾಖಲೆಯ 95.20 ರೂ.ಗಳಿಗೆ ತಲುಪಿದೆ ಎಂದು ವರದಿಯಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿ ವಹಿವಾಟು ಆರಂಭವಾಗುತ್ತಿದ್ದಂತೆಯೇ, ಅಮೆರಿಕನ್ ಕರೆನ್ಸಿಯ ಬಲವರ್ಧನೆ ಮತ್ತು ದೇಶೀಯ ಮಾರುಕಟ್ಟೆಯಲ್ಲಿನ ಒತ್ತಡ ರೂಪಾಯಿಯ ಮೇಲೆ ತೀವ್ರ ಪರಿಣಾಮ ಬೀರಿದೆ. ಹಿಂದಿನ ದಿನದ ವಹಿವಾಟು ಮುಕ್ತಾಯದ ವೇಳೆಗೆ ಇದ್ದ ಮೌಲ್ಯಕ್ಕೆ ಹೋಲಿಸಿದರೆ, ಒಂದೇ ಬಾರಿಗೆ 32 ಪೈಸೆಗಳಷ್ಟು ಭಾರೀ ಇಳಿಕೆ ಕಂಡಿರುವುದು ಆರ್ಥಿಕ ವಲಯದಲ್ಲಿ ಆತಂಕ ಮೂಡಿಸಿದೆ. ಜಾಗತಿಕ ಮಾರುಕಟ್ಟೆಯಲ್ಲಿ ಡಾಲರ್ ಬೇಡಿಕೆ ಹೆಚ್ಚಾಗಿರುವುದು, ವಿದೇಶಿ ಸಾಂಸ್ಥಿಕ ಹೂಡಿಕೆದಾರರು ನಿರಂತರವಾಗಿ ಬಂಡವಾಳ ಹಿಂತೆಗೆದುಕೊಳ್ಳುತ್ತಿರುವುದು ಹಾಗೂ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿನ ಆರ್ಥಿಕ ಅನಿಶ್ಚಿತ ಪರಿಸ್ಥಿತಿ ರೂಪಾಯಿ ಮೌಲ್ಯದ ಕುಸಿತಕ್ಕೆ ನೈಜ ಕಾರಣಗಳಾಗಿವೆ. ಅಲ್ಲದೆ, ಆಮದುದಾರರು ಮತ್ತು ಪ್ರಮುಖ ತೈಲ ಕಂಪನಿಗಳಿಂದ ಡಾಲರ್‌ಗೆ ಏಕಾಏಕಿ ಬೇಡಿಕೆ ಹೆಚ್ಚಾಗಿರುವುದು ಕೂಡ ರೂಪಾಯಿ ಮೌಲ್ಯ ಇನ್ನಷ್ಟು ಪಾತಾಳಕ್ಕೆ ಇಳಿಯಲು ಕಾರಣವಾಗಿದೆ. ಈ ಸಾರ್ವಕಾಲಿಕ ಕುಸಿತವು ಆಮದು ವೆಚ್ಚವನ್ನು (ಮುಖ್ಯವಾಗಿ ಕಚ್ಚಾ ತೈಲ ಆಮದು) ಗಣನೀಯವಾಗಿ ಹೆಚ್ಚಿಸುವ ಮೂಲಕ ದೇಶದ ಹಣದುಬ್ಬರದ ಮೇಲೂ ನೇರ ಪರಿಣಾಮ ಬೀರುವ ಸಾಧ್ಯತೆಯಿದೆ. 95.20 ರ ಮಟ್ಟವು ಭಾರತೀಯ ರೂಪಾಯಿಯ ಇತಿಹಾಸದಲ್ಲಿಯೇ ಅತ್ಯಂತ ಕನಿಷ್ಠ ಮಟ್ಟವಾಗಿದ್ದು, ಭಾರತೀಯ ರಿಸರ್ವ್ ಬ್ಯಾಂಕ್ ಈ ಕುಸಿತವನ್ನು ತಡೆಯಲು ಮಾರುಕಟ್ಟೆಯಲ್ಲಿ ಮಧ್ಯಪ್ರವೇಶಿಸುವ ನಿರೀಕ್ಷೆಯಿದೆ ಎಂದು ಆರ್ಥಿಕ ತಜ್ಞರು ವಿಶ್ಲೇಷಿಸಿದ್ದಾರೆ.

# ನಾಯಕತ್ವ ಬದಲಾವಣೆ ಇಲ್ಲ ಗೊಂದಲಗಳಿಗೆ ಖರ್ಗೆ ತೆರೆ



**ಕಲಬುರಗಿ, ಏ.30:** ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ವಿಚಾರವಾಗಿ ಮಾತನಾಡಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸದ್ಯಕ್ಕೆ ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಇಲ್ಲ. ಈಗಾಗಲೇ ಸಿಎಂ ಇದ್ದಾರೆ. ಹಾಗಾಗಿ ಬದಲಾವಣೆ ವಿಚಾರವಿಲ್ಲ ಎಂದು ಹೇಳುವ ಮೂಲಕ ಗೊಂದಲಗಳಿಗೆ ತೆರೆ ಎಳೆದಿದ್ದಾರೆ. ಇದೇ ವೇಳೆ ಖರ್ಗೆ ಅವರೇ ಸಿಎಂ ಆದರೆ ಉತ್ತಮ ಎಂಬ ಗೃಹ ಸಚಿವ ಪರಮೇಶ್ವರ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ್ದಾರೆ. ಕಲಬುರಗಿಯಲ್ಲಿ ಸುದ್ದಿಗಾರರೊಂಗಿದೆ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ, ನಾಯಕತ್ವ ಬದಲಾವಣೆ ವಿಚಹರವಾಗಿ ರಾಜ್ಯದಲ್ಲಿನ ಗೊಂದಲಗಳನ್ನು ಆದಷ್ಟು ಬೇಗನೆ ಬಗೆಹರಿಸುವುದಾಗಿ ತಿಳಿಸಿದ್ದಾರೆ. ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರ ಇತ್ತೀಚೆಗೆ ಕಾಂಗ್ರೆಸ್‌ನ 40–50 ಶಾಸಕರು ದೆಹಲಿಗೆ ಟಿಕೆಟ್ ಕಾಯ್ದಿರಿಸಿದ್ದಾರೆ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿದ ಖರ್ಗೆ, ಅವರ ಹೇಳಿಕೆಯನ್ನು ತಳ್ಳಿಹಾಕಿದ್ದಾರೆ. ಖರ್ಗೆ ಅವರೇ ಸಿಎಂ ಆದರೆ ಉತ್ತಮ ಎಂಬ ಗೃಹ ಸಚಿವ ಪರಮೇಶ್ವರ್ ಹೇಳಿಕೆಗೂ ಉತ್ತರಿಸಿದ ಅವರು, ನಾನಾದರೆ ಉತ್ತಮ ಅಂತ ನೀವು ಹೇಳ್ತೀರಿ, ಅವರು ಹೇಳ್ತಾರೆ, ಮೇಲಿನವರು ಹೇಳ್ತಾರೆ. ಈಗಾಗಲೇ ಇಲ್ಲಿ ಮುಖ್ಯಮಂತ್ರಿ ಇದ್ದಾರೆ. ಬದಲಾವಣೆ ಆಗಬೇಕೆಂದರೆ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಅಥವಾ ನಾವು ಸೇರಿ ನಿರ್ಣಯ ತೆಗೆದುಕೊಳ್ಳಬೇಕಾಗುತ್ತದೆ. ಅದಕ್ಕೆ ಸ್ವಲ್ಪ ಸಮಯ ಹಿಡಿಯುತ್ತದೆ, ನೋಡೋಣ ಎಂದಿದ್ದಾರೆ. ಈ ಮೂಲಕ ಮಲ್ಲಿಕಾರ್ಜುನ ಖರ್ಗೆ ಅವರೂ ಕರ್ನಾಟಕ ಸಿಎಂ ರೇಸ್‌ಗೆ ಎಂಟ್ರಿ ಕೊಟ್ಟಿದ್ದಾರಾ ಎಂಬ ಚರ್ಚೆ ಆರಂಭವಾಗಿದೆ.

# ಸಶಸ್ತ್ರ ಪಡೆಗಳಿಗೆ ಸಾವಯವ ಆಹಾರ ಪೂರೈಕೆ: ಜೋಶಿ



- ಸಚಿವ ಪ್ರಲ್ಹಾದ ಜೋಶಿ ನೇತೃತ್ವದಲ್ಲಿ ಸೇನೆ ಅಧಿಕಾರಿಗಳ ಸಭೆ
- ಭಾರತ್ ಬ್ರ್ಯಾಂಡ್, ಪೌಷ್ಟಿಕ ಧಾನ್ಯ; ಬಾಸ್ಮತಿ ಅಕ್ಕಿ, ಗೋದಿ ಪೂರೈಕೆಗೆ ಕ್ರಮ

**ನವದೆಹಲಿ, ಏ.30:** ದೇಶದ ಸಶಸ್ತ್ರ ಪಡೆಗಳಿಗೆ ಸಾವಯವ ಪೂರಿತ ಆಹಾರ ಪೂರೈಕೆಗೆ ಕೇಂದ್ರ ಸರ್ಕಾರ ಒತ್ತು ನೀಡಿದ್ದು, ಭಾರತ್ ಬ್ರ್ಯಾಂಡ್ ಪೌಷ್ಟಿಕ ಆಹಾರ, ಬಾಸ್ಮತಿ ಅಕ್ಕಿ ಪೂರೈಕೆಗೆ ಕ್ರಮ ಕೈಗೊಂಡಿದೆ. ದೆಹಲಿಯ ಕೃಷಿ ಭವನದಲ್ಲಿ ಗುರುವಾರ, ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರು ಈ ಸಂಬಂಧ ಭಾರತೀಯ ಸೇನೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪೌಷ್ಟಿಕ ಆಹಾರ ಪೂರೈಕೆ ಬಗ್ಗೆ ಚರ್ಚಿಸಿದರು.

ಸಶಸ್ತ್ರ ಪಡೆಗಳಿಗೆ ಗುಣಮಟ್ಟದ ಮತ್ತು ಸಾವಯವ ಪಡಿತರ ಆಹಾರ ಧಾನ್ಯ ಪೂರೈಸುವ ಬಗ್ಗೆ ಗಮನ ಹರಿಸಿದ ಸಚಿವರು, ಭಾರತ್ ಬ್ರ್ಯಾಂಡ್ ಅಕ್ಕಿ ಮತ್ತು ಗೋದಿ ಉತ್ಪನ್ನ ಸರಬರಾಜು ವಿಸ್ತರಣೆಗೆ ಮಹತ್ವದ ಚರ್ಚೆ ನಡೆಸಿದರು.

ಅಕ್ಕಿ ಮತ್ತು ಗೋದಿಯಂತಹ ಭಾರತ್ ಬ್ರಾಂಡ್ ಉತ್ಪನ್ನಗಳ ವಿಸ್ತರಣೆ ಜತೆಗೆ ಉತ್ತಮ ಗುಣಮಟ್ಟದ ಬಾಸ್ಮತಿ ಅಕ್ಕಿ ಸಂಗ್ರಹಣೆ ಸೇರಿದಂತೆ ಸಶಸ್ತ್ರ ಪಡೆಗಳಿಗೆ ಅಗತ್ಯ ವಸ್ತುಗಳ ಖರೀದಿ ಕುರಿತು ಸಚಿವ ಜೋಶಿ ಅವರು ಅಧಿಕಾರಿಗಳಿಗೆ ಸಲಹೆ ಸೂಚನೆ ನೀಡಿದರು.

ಸಶಸ್ತ್ರ ಪಡೆಗಳಿಗೆ ಪರಿಣಾಮಕಾರಿಯಾಗಿ ಪೌಷ್ಟಿಕ ಆಹಾರ ಪೂರೈಕೆ ಮತ್ತು ಸಹಕಾರಿ ಸಂಸ್ಥೆಗಳ ಮೂಲಕ ಸ್ಕೇಲಿಂಗ್ ಸಂಗ್ರಹಣೆ ಕುರಿತು ಸಚಿವರು ಮತ್ತು ಅಧಿಕಾರಿಗಳು ಸಮಾಲೋಚನೆ ನಡೆಸಿದರು.

ಇದೇ ವೇಳೆ ಸಚಿವ ಜೋಶಿ ಅವರು, ರೈತರನ್ನು ಪ್ರೋತ್ಸಾಹಿಸುವಲ್ಲಿ ಮತ್ತು ಬೆಂಬಲಿಸುವಾಗ ಮತ್ತು ಸಶಸ್ತ್ರ ಪಡೆಗಳಿಗೆ ಉತ್ತಮ ಗುಣಮಟ್ಟದ, ಪೌಷ್ಟಿಕ ಆಹಾರ ಪೂರೈಕೆಗೆ ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದರು.




ನವದೆಹಲಿಯಲ್ಲಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಭಾರತ ಮತ್ತು ಇಟಲಿ ದೇಶಗಳ ನಡುವಿನ ಹಲವು ಒಪ್ಪಂದಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು. ಈ ಮಹತ್ವದ ಒಪ್ಪಂದಕ್ಕೆ ರಕ್ಷಣಾ ಸಚಿವ ರಾಜ್‌ನಾಥ್ ಸಿಂಗ್ ಮತ್ತು ಇಟಲಿಯ ರಕ್ಷಣಾ ಸಚಿವ ಗಿಡೋ ಕ್ರೊಸೆಟ್ಟೊ ಸಾಕ್ಷಿಯಾದರು.

# ಒಂದು ವಾರದೊಳಗೆ ಎತ್ತಿನಹೊಳೆ ಬಾಕಿ ಕಾಮಗಾರಿ ಪ್ರಾರಂಭ



**ಬೆಂಗಳೂರು, ಏ.30:** ಕೇಂದ್ರ ಪರಿಸರ ಇಲಾಖೆಯವರು ದಂಡ ಹಾಗೂ ಮಿಟಿಗೇಷನ್ ಪ್ಲಾನ್ ಸೇರಿ 257 ಕೋಟಿ ರೂ. ಪಾವತಿ ಮಾಡಬೇಕು ಎಂದು ಸೂಚಿಸಿದ್ದಾರೆ. ಇಂದೇ ಈ ಹಣ ಪಾವತಿ ಮಾಡಿ ಎಂದು ಮಾರ್ಗದರ್ಶನ ನೀಡಿದ್ದೇನೆ. ಹಣ ಕಟ್ಟಿದ ಕೂಡಲೇ ಈ ವಾರದೊಳಗೆ ಎತ್ತಿನಹೊಳೆ ಕೆಲಸ ಪ್ರಾರಂಭ ಮಾಡಿ ಎಂದು ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ಎತ್ತಿನಹೊಳೆ, ಮೇಕೆದಾಟು, ಭದ್ರಾ ಮೇಲ್ದಂಡೆ ವಿಚಾರವಾಗಿ ವಿಧಾನಸೌಧದಲ್ಲಿ ನಡೆದ ಸಭೆಯ ನಂತರ ಮಾಧ್ಯಮಗಳ ಜತೆ ಮಾತನಾಡಿದ ಅವರು, ತುಮಕೂರು ಭಾಗದಲ್ಲೂ ಭೂಸ್ವಾಧೀನಕ್ಕೆ ಸರ್ವೆ ನಡೆಸಲು ಕ್ರಮ ತೆಗೆದುಕೊಳ್ಳಲಾಗುವುದು. ಆದಷ್ಟು ಬೇಗ ಚಿಕ್ಕಬಳ್ಳಾಪುರ ಹಾಗೂ ಕೋಲಾರಕ್ಕೆ ನೀರನ್ನು ಹರಿಸಲಾಗುವುದು. ಎತ್ತಿನಹೊಳೆ ಯೋಜನೆಗೆ ಕೇಂದ್ರ ಪರಿಸರ ಇಲಾಖೆಯವರು ಒಂದಷ್ಟು ಷರತ್ತುಗಳನ್ನು ವಿಧಿಸಿ ಕಡತವನ್ನು ವಾಪಸ್ ಕಳುಹಿಸಿದ್ದರು. ಕಂದಾಯ ಇಲಾಖೆಯಿಂದ ಅರಣ್ಯ ಇಲಾಖೆಗೆ ಬದಲಿ ಭೂಮಿಯನ್ನು ಹಸ್ತಾಂತರ ಮಾಡಲಾಗುತ್ತಿದೆ. ಶೇ.10ರಷ್ಟು ಭೂಮಿ ವರ್ಗಾವಣೆ ಬಾಕಿಯಿತ್ತು. ಮುಂದಿನ ಒಂದು ವಾರದೊಳಗೆ ಈ ಪ್ರಕ್ರಿಯೆ ನಡೆಯಲಿದೆ ಎಂದರು. ಎತ್ತಿನಹೊಳೆ, ಭದ್ರಾ ಮೇಲ್ದಂಡೆ ಹಾಗೂ ಮೇಕೆದಾಟು ವಿಚಾರವಾಗಿ ಸಂಬಂಧಪಟ್ಟ ಶಾಸಕರ, ಅಧಿಕಾರಿಗಳ ಸಭೆ ನಡೆಸಲಾಯಿತು. ಕಂದಾಯ, ಅರಣ್ಯ ಹಾಗೂ ಗೃಹಸಚಿವರು ಭಾಗವಹಿಸಿದ್ದರು. ಎತ್ತಿನಹೊಳೆ ವಿಚಾರವಾಗಿ ಕೇಂದ್ರ ಸರ್ಕಾರದ ಸಂಬಂಧಪಟ್ಟ ಸಚಿವರನ್ನು ಭೇಟಿಯಾಗಿದ್ದೆ. ಅವರ ಷರತ್ತುಗಳನ್ನು ಒಪ್ಪಿಕೊಂಡು ಮುಂದುವರೆದಿದ್ದೇವೆ ಎಂದರು.

ಬೆಂಗಳೂರು ನಗರ ಪ್ರದಕ್ಷಿಣೆ ಬಗ್ಗೆ ಕೇಳಿದಾಗ, ಈಗಾಗಲೇ ಶಿಥಿಲ ಮರಗಳು, ಹಾಗೂ ಕೊಂಬೆಗಳ ತೆರವಿಗೆ ಸೂಚಿಸಲಾಗಿದೆ. ನೀರು ಹರಿವಿಗೆ ತಡೆಗಳನ್ನು ತೆರವುಗೊಳಿಸಲಾಗುವುದು. ಮೊದಲು ಮಳೆ ಬರಲಿ ಎಂದು ಪ್ರಾರ್ಥನೆ ಮಾಡುತ್ತೇನೆ. ಶುಕ್ರವಾರ ಮಧ್ಯಾಹ್ನ ಬೆಂಗಳೂರು ನಗರ ಸಂಚಾರ ಮಾಡಲಿದ್ದೇನೆ. ಒಂದೆರಡು ಮೇಲ್ಸೇತುವೆಗಳ ಲೋಕಾರ್ಪಣೆಗೂ ಪೂಜೆ ನೆರವೇರಿಸಲಾಗುವುದು ಎಂದರು.

### 5300 ಎಕರೆ ಬದಲಿಯಾಗಿ ಅರಣ್ಯ ಇಲಾಖೆಗೆ

ಮೇಕೆದಾಟು ವಿಚಾರವಾಗಿ ಡಿಪಿಆರ್ ಸಿದ್ಧವಾಗಿದ್ದು ಅದನ್ನು ಸಹ ಸಮಿತಿ ಮುಂದೆ ಸಲ್ಲಿಕೆ ಮಾಡಲಾಗುವುದು. ಮತ್ತೊಮ್ಮೆ ವೆಚ್ಚ ಪರಿಷ್ಕರಣೆ ಮಾಡಿದ್ದೇವೆ. ಸುಮಾರು 5,300 ಎಕರೆ ಜಮೀನನ್ನು ಅರಣ್ಯ ಇಲಾಖೆಗೆ ನೀಡಬೇಕಿದೆ. ಇದರ ಬಗ್ಗೆಯೂ ಕಂದಾಯ ಇಲಾಖೆ ಜೊತೆ ಮಾತನಾಡಲಾಗುವುದು ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

# ಅತ್ಯಾಚಾರ ಸಂತ್ರಸ್ತರಿಗೆ 20 ವಾರ ಮೀರಿದ ಗರ್ಭಧಾರಣೆ ಅಂತ್ಯಗೊಳಿಸಲು ಕಾನೂನು ರೂಪಿಸಿ

**ನವದೆಹಲಿ, ಏ.30:** 15 ವರ್ಷದ ಅತ್ಯಾಚಾರ ಸಂತ್ರಸ್ತೆಯ 30 ವಾರಗಳ ಗರ್ಭಧಾರಣೆಯನ್ನು ಅಂತ್ಯಗೊಳಿಸಲು ಅನುಮತಿ ನೀಡಿದ ಪ್ರಕರಣದ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ಗುರುವಾರ ಕಠಿಣ ನಿಲುವು ತೆಗೆದುಕೊಂಡಿತು. ಈ ನಿರ್ಧಾರವನ್ನು ಪ್ರಶ್ನಿಸಿ ಏಮ್ಸ್ ಸಲ್ಲಿಸಿದ್ದ ಕ್ಯುರೇಟಿವ್ ಅರ್ಜಿಯನ್ನು ಆಕ್ಷೇಪಿಸಿದ ನ್ಯಾಯಾಲಯ, ಅತ್ಯಾಚಾರ ಸಂತ್ರಸ್ತರಿಗೆ 20 ವಾರಗಳನ್ನು ಮೀರಿದ ಗರ್ಭಧಾರಣೆಯನ್ನು ಅಂತ್ಯಗೊಳಿಸಲು ಅವಕಾಶ ನೀಡುವಂತೆ ಕಾನೂನನ್ನು ತಿದ್ದುಪಡಿ ಮಾಡುವುದನ್ನು ಪರಿಗಣಿಸುವಂತೆ ಕೇಂದ್ರ ಸರ್ಕಾರವನ್ನು ಕೇಳಿತು.

ಅತ್ಯಾಚಾರದಿಂದ ಗರ್ಭಧಾರಣೆ ಸಂಭವಿಸಿದಾಗ, ಅದಕ್ಕೆ ಯಾವುದೇ ಸಮಯದ ಮಿತಿ ಇರಬಾರದು ಮತ್ತು ಕಾನೂನು ಕಾಲಕ್ಕೆ ತಕ್ಕಂತೆ ಬದಲಾಗಬೇಕು ಎಂದು ನ್ಯಾಯಾಲಯ ಸ್ಪಷ್ಟವಾಗಿ ಹೇಳಿತು. ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ನ್ಯಾಯಮೂರ್ತಿ ಜೋಯ್‌ಮಾಲ್ಯ ಬಾಗ್ಚಿ ಅವರಿದ್ದ ಪೀಠವು, ಇದು ಮಕ್ಕಳ ಮೇಲಿನ ಅತ್ಯಾಚಾರದ ಪ್ರಕರಣವಾಗಿದ್ದು, ಗರ್ಭಪಾತವನ್ನು ಅನುಮತಿಸದಿದ್ದರೆ, ಬಲಿಪಶು ಜೀವನಪರ್ಯಂತ ಮಾನಸಿಕ ಆಘಾತವನ್ನು ಅನುಭವಿಸಬೇಕಾಗುತ್ತದೆ ಎಂದು ಹೇಳಿತು.

### ಏಮ್ಸ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ವೇಳೆ ಕೇಂದ್ರ ಸರ್ಕಾರಕ್ಕೆ ಸುಪ್ರೀಂ ಸೂಚನೆ

ತಾಯಿಗೆ ಶಾಶ್ವತ ದೈಹಿಕ ಹಾನಿಯಾಗದಿದ್ದರೆ, ಗರ್ಭಪಾತ ಮಾಡಬೇಕು ಎಂದು ನ್ಯಾಯಾಲಯ ಹೇಳಿದೆ. ಅಂತಿಮ ನಿರ್ಧಾರವು ಸಂತ್ರಸ್ತೆ ಮತ್ತು ಆಕೆಯ ಕುಟುಂಬದ ಮೇಲಿರುವುದರಿಂದ, ಸಂತ್ರಸ್ತೆಯ ಪೋಷಕರಿಗೆ ಈ ವಿಷಯದ ಬಗ್ಗೆ ಸೂಕ್ತ ಸಮಾಲೋಚನೆ ನೀಡುವಂತೆ ಏಮ್ಸ್‌ಗೆ ನಿರ್ದೇಶನ ನೀಡಲಾಯಿತು.

ವಿಚಾರಣೆಯ ಸಮಯದಲ್ಲಿ, ದೇಶದಲ್ಲಿ ಈಗಾಗಲೇ ದತ್ತು ಪಡೆಯಲು ಸಾಧ್ಯವಾಗದಷ್ಟು ಮಕ್ಕಳಿದ್ದಾರೆ, ಅನೇಕ ಮಕ್ಕಳನ್ನು ಬೀದಿಗಳಲ್ಲಿ ಬಿಡಲಾಗಿದೆ ಮತ್ತು ಮಾಫಿಯಾ ಕೂಡ ಇದರಲ್ಲಿ ಭಾಗಿಯಾಗಿದೆ ಎಂದು ನ್ಯಾಯಾಲಯ ಗಮನಿಸಿತು. ಇದು 15 ವರ್ಷದ ಹುಡುಗಿಯೊಬ್ಬಳ ಅನಗತ್ಯ ಗರ್ಭಧಾರಣೆಯಾಗಿದೆ. ಅವಳು ಓದಬೇಕು, ಆದರೆ ನಾವು ಅವಳನ್ನು ತಾಯಿಯಾಗಲು ಒತ್ತಾಯಿಸುತ್ತಿದ್ದೇವೆ. ಅವಳು ಅನುಭವಿಸಿದ ನೋವು ಮತ್ತು ಅವಮಾನವನ್ನು ಊಹಿಸಿ ಎಂದು ಹೇಳಿತು.



ಏಮ್ಸ್ ಅನ್ನು ಪ್ರತಿನಿಧಿಸುವ ಹೆಚ್ಚುವರಿ ಸಾಲಿಸಿಟರ್ ಜನರಲ್ ಐಶ್ವರ್ಯ ಭಾಟಿ, ಈ ಹಂತದಲ್ಲಿ ಗರ್ಭಪಾತ ಸಾಧ್ಯವಿಲ್ಲ ಎಂದು ವಾದಿಸಿದರು. 30 ವಾರಗಳ ಹೊತ್ತಿಗೆ, ಭ್ರೂಣವು ಜೀವಂತ ಮಗುವಾಗಿ ಬೆಳೆದಿರುತ್ತದೆ, ಇದು ಗಂಭೀರ ವಿರೂಪಗಳನ್ನು ಹೊಂದಿರಬಹುದು ಎಂದು ಅವರು ಹೇಳಿದರು. ಇದಲ್ಲದೆ, ಅಪ್ರಾಪ್ತ ತಾಯಿಯು ಜೀವಿತಾವಧಿಯ ಆರೋಗ್ಯ ಸಮಸ್ಯೆಗಳನ್ನು ಅನುಭವಿಸಬಹುದು ಮತ್ತು ಗರ್ಭಧರಿಸಲು ಸಾಧ್ಯವಾಗುವುದಿಲ್ಲ. ಜನನದ ನಂತರ ಮಗುವನ್ನು ದತ್ತು ಪಡೆಯಲು ನೀಡಬಹುದು ಎಂದು ಅವರು ಸೂಚಿಸಿದರು. ಗರ್ಭಾವಸ್ಥೆಯನ್ನು ಅಂತ್ಯಗೊಳಿಸುವ ನಿರ್ಧಾರವು ಬಲಿಪಶು ಮತ್ತು ಆಕೆಯ ಪೋಷಕರ ಇಚ್ಛೆಯನ್ನು ಅವಲಂಬಿಸಿರುತ್ತದೆ ಮತ್ತು ಮಾಹಿತಿಯುಕ್ತ ನಿರ್ಧಾರವನ್ನು ತೆಗೆದುಕೊಳ್ಳುವಲ್ಲಿ ಅವರಿಗೆ ಸಹಾಯ ಮಾಡುವುದು ಏಮ್ಸ್ ಪಾತ್ರವಾಗಿರಬೇಕು ಎಂದು ಸುಪ್ರೀಂ ಕೋರ್ಟ್ ಪುನರುಚ್ಚರಿಸಿತು.

ಒಬ್ಬರ ಸ್ವಂತ ದೇಹದ ಬಗ್ಗೆ ವಿಶೇಷವಾಗಿ ಸಂತಾನೋತ್ಪತ್ತಿಗೆ ಸಂಬಂಧಿಸಿದ ನಿರ್ಧಾರಗಳನ್ನು ತೆಗೆದುಕೊಳ್ಳುವ ಹಕ್ಕು, ಸಂವಿಧಾನದ 21ನೇ ವಿಧಿಯ ಅಡಿಯಲ್ಲಿ ವೈಯಕ್ತಿಕ ಸ್ವಾತಂತ್ರ್ಯ ಮತ್ತು ಗೌಪ್ಯತೆಯ ಅವಿಭಾಜ್ಯ ಅಂಗವಾಗಿದೆ. ಈ ಹಕ್ಕನ್ನು ಅಸಮಂಜಸ ನಿರ್ಬಂಧಗಳಿಂದ ದುರ್ಬಲಗೊಳಿಸಲಾಗುವುದಿಲ್ಲ, ವಿಶೇಷವಾಗಿ ಅಪ್ರಾಪ್ತ ವಯಸ್ಕರು ಮತ್ತು ಅನಗತ್ಯ ಗರ್ಭಧಾರಣೆಯ ಪ್ರಕರಣಗಳಲ್ಲಿ ಎಂದು ನ್ಯಾಯಾಲಯ ಹೇಳಿತ್ತು.

ಯಾವುದೇ ನ್ಯಾಯಾಲಯವು ಯಾವುದೇ ಮಹಿಳೆಯನ್ನು, ವಿಶೇಷವಾಗಿ ಅಪ್ರಾಪ್ತ ವಯಸ್ಕಳನ್ನು ಗರ್ಭಿಣಿಯಾಗುವಂತೆ ಒತ್ತಾಯಿಸಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಯಾವುದೇ ಮಹಿಳೆಯನ್ನು, ವಿಶೇಷವಾಗಿ ಅಪ್ರಾಪ್ತ ವಯಸ್ಕಳನ್ನು, ಆಕೆಯ ಇಚ್ಛೆಗೆ ವಿರುದ್ಧವಾಗಿ ಗರ್ಭಿಣಿಯಾಗುವಂತೆ ಒತ್ತಾಯಿಸುವುದು ಆಕೆಯ ಸ್ವಾತಂತ್ರ್ಯವನ್ನು ಉಲ್ಲಂಘಿಸುವುದಲ್ಲದೆ, ಆಕೆಗೆ ಗಂಭೀರ ಮಾನಸಿಕ, ಭಾವನಾತ್ಮಕ ಮತ್ತು ದೈಹಿಕ ಆಘಾತವನ್ನುಂಟು ಮಾಡುತ್ತದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

ಏಪ್ರಿಲ್ 24 ರಂದು ಸುಪ್ರೀಂ ಕೋರ್ಟ್ ತನ್ನ ತೀರ್ಪಿನಲ್ಲಿ, ಯಾವುದೇ ಮಹಿಳೆ, ವಿಶೇಷವಾಗಿ ಅಪ್ರಾಪ್ತ ವಯಸ್ಕಳು, ತನ್ನ ಇಚ್ಛೆಗೆ ವಿರುದ್ಧವಾಗಿ ಗರ್ಭಧಾರಣೆಯನ್ನು ಮುಂದುವರಿಸಲು ಒತ್ತಾಯಿಸಲಾಗುವುದಿಲ್ಲ ಎಂದು ಹೇಳಿದೆ. ಈ ತೀರ್ಪಿನೊಂದಿಗೆ, ಏಳು ತಿಂಗಳಿಗಿಂತ ಹೆಚ್ಚು ಗರ್ಭಿಣಿಯಾಗಿದ್ದ ಅಪ್ರಾಪ್ತ ವಯಸ್ಕಳು ವೈದ್ಯಕೀಯ ಗರ್ಭಪಾತವನ್ನು ಪಡೆಯಲು ಸುಪ್ರೀಂ ಕೋರ್ಟ್ ಅನುಮತಿ ನೀಡಿತ್ತು.

## ನಿತ್ಯ ಪಂಚಾಂಗ 1.05.2026 ಶುಕ್ರವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ ಋತು, ಚಾಂದ್ರಮಾನ, ಚೈತ್ರ–ವೈಶಾಖ ಮಾಸ

ವೈಶಾಖ ಶುದ್ಧ, ಪೂರ್ಣಿಮಾ, ಸ್ವಾತಿ ನಕ್ಷತ್ರ, ಮೇ ದಿನ, ಬುದ್ಧ ಪೂರ್ಣಿಮಾ, ಆಗೀ ಹುಣ್ಣಿಮೆ, ಕೂರ್ಮಾ ಜಯಂತಿ, ಅರ್ಧನಾರೀಶ್ವರ ವ್ರತ.

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಶಕುಂತಲಾ ಹೆಗಡೆ ಭೇಟಿ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ



**ಬೆಂಗಳೂರು, ಏ.30:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಸದಾಶಿವ ನಗರದಲ್ಲಿರುವ ದಿವಂಗತ ರಾಮಕೃಷ್ಣ ಹೆಗಡೆ ಅವರ ನಿವಾಸಕ್ಕೆ ಭೇಟಿ ನೀಡಿ ಶಕುಂತಲಾ ಹೆಗಡೆ ಅವರ ಆರೋಗ್ಯ ವಿಚಾರಿಸಿದರು.

ವಯೋಸಹಜ ಅನಾರೋಗ್ಯದಿಂದ ಬಳಲುತ್ತಿರುವ ಶಕುಂತಲಾ ಹೆಗಡೆ ಅವರ ಜೊತೆ ಸಿದ್ದರಾಮಯ್ಯ ಅವರು ಕೆಲಹೊತ್ತು ಲೋಕಾಭಿರಾಮವಾಗಿ ಮಾತನಾಡಿದರು. ಜನತಾ ಪರಿವಾರದ ನೆನಪುಗಳನ್ನು ಮೆಲಕು ಹಾಕಿದರು. ತಮ್ಮ ಹಾಗೂ ರಾಮಕೃಷ್ಣ ಹೆಗಡೆ ಅವರ ನಡುವಿನ ಒಡನಾಟವನ್ನು ಮೆಲುಕು ಹಾಕಿದರು.

ಹೆಗಡೆ ಅವರ ಪುತ್ರಿಯರಾದ ಮಮತಾ, ಸಮತಾ, ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ, ಮಾಜಿ ಸಚಿವ ಬಿ.ಎಲ್. ಶಂಕರ್ ಮತ್ತಿತರರು ಉಪಸ್ಥಿತರಿದ್ದರು.

# ಕಾಂಪೌಂಡ್ ಕುಸಿದು 7 ಮಂದಿ ದುರ್ಮರಣ ಪ್ರಕರಣ: ಸರ್ಕಾರಕ್ಕೆ ಎಚ್ಚರಿಕೆಯ ಗಂಟೆಯಾಗಲಿ- ಅಶೋಕ್ ಎಚ್ಚರಿಕೆ



ಬೆಂಗಳೂರು, ಏ.30: ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಗೋಡೆ ಕುಸಿತ ಪ್ರಕರಣ ಬೆಂಗಳೂರಿನ ಅವ್ಯವಸ್ಥೆ ಬಗ್ಗೆ ಸರ್ಕಾರ ಎಚ್ಚರಿಕೆ ಗಂಟೆಯಾಗಲಿ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್.ಅಶೋಕ ಹೇಳಿದ್ದಾರೆ.

ಈ ದುರ್ಘಟನೆಯಲ್ಲಿ ಏಳು ಮಂದಿ ಸತ್ತಿರುವುದು ದುರಂತ ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

**ಬೆಂಗಳೂರಿನ ಮೇಲಿನ ನಿರ್ಲಕ್ಷ್ಯ ಮುಂದುವರಿದರೆ ಮುಂದಾಗವು ಅನಾಹುತಗಳಿಗೆ ಕಾಂಗ್ರೆಸ್ ಸರ್ಕಾರವೇ ನೇರ ಹೊಣೆ**

ರಸ್ತೆ ಗುಂಡಿಗೆ, ವಿದ್ಯುತ್ ತಂತಿಗೆ, ಕುಸಿದ ಗೋಡೆಗೆ ಜನ ಮೃತಪಡಬೇಕಾದ ದುಸ್ಥಿತಿ ಯಾವುದೇ ನಾಗರೀಕ ಸಮಾಜಕ್ಕೆ ಶೋಭೆ ತರುವುದಿಲ್ಲ. ಅದರಲ್ಲೂ ಇಡೀ ದೇಶದ ಆರ್ಥಿಕ ಬೆನ್ನೆಲುಬಾಗಿರುವ ಬೆಂಗಳೂರಿನಂತಹ ನಗರದಲ್ಲಿ ಮೂಲಸೌಕರ್ಯ ಇಷ್ಟು ಹದಗೆಟ್ಟಿರುವುದು ರಾಜ್ಯದ ಆಡಳಿತ ಚುಕ್ಕಾಣಿ ಹಿಡಿದಿರುವ ಸರ್ಕಾರ ತಲೆತಗ್ಗಿಸುವ ವಿಷಯ ಎಂದಿದ್ದಾರೆ.

ಬೆಂಗಳೂರಿನಲ್ಲಿ ಸಾಮಾನ್ಯವಾಗಿ ಬೇಸಿಗೆಯಲ್ಲೇ ಮುಂಗಾರು ಪೂರ್ವ ಮಳೆ ಬರುವುದು ವಾಡಿಕೆ. ನಿನ್ನೆ ಬಂದ ಮಳೆ ಆಕಸ್ಮಿಕ, ನಿನ್ನೆ ನಡೆದಿದ್ದು ಪ್ರಕೃತಿ ವಿಕೋಪ ಎಂದು ಯಾರಾದರೂ ವಾದಿಸಿದರೆ ಅದು ನಿನ್ನೆ ಜೀವ ಕಳೆದುಕೊಂಡ ದುರ್ದೈವಿಗಳಿಗೆ ಮತ್ತು ಅವರ ಕುಟುಂಬದವರಿಗೆ ಮಾತ್ರ ಮಾಡುವ ದ್ರೋಹವಲ್ಲ, ಬದಲಿಗೆ ಆತ್ಮಸಾಕ್ಷಿಗೆ ಮಾಡಿಕೊಳ್ಳುವ ಆತ್ಮವಂಚನೆ ಎಂದು ಹೇಳಿದ್ದಾರೆ.

ಇನ್ನಾದರೂ ಕಾಂಗ್ರೆಸ್ ಸರ್ಕಾರ ನಗರದ ಮೂಲಸೌಕರ್ಯ ಸುಧಾರಿಸುವ ಬಗ್ಗೆ ಗಮನಹರಿಸದಿದ್ದರೆ ಜನತೆ ಕಾಂಗ್ರೆಸ್ ಪಕ್ಷವನ್ನು ಎಂದಿಗೂ ಕ್ಷಮಿಸಲಾರರು. ಕೂಡಲೇ ಬೆಂಗಳೂರಿನ ಮೂಲಸೌಕರ್ಯ ಸುಧಾರಣೆಗೆ ಒಂದು ವಿಶೇಷ ತಂಡ ರಚನೆ ಮಾಡಬೇಕು. ನಗರದಲ್ಲಿ ಮಳೆಯಿಂದ ಉಂಟಾಗುವ ಅನಾಹುತಗಳನ್ನು ತಡೆಗಟ್ಟಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ತಕ್ಷಣ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ. ಬೆಂಗಳೂರಿನ ಮೇಲಿನ ನಿರ್ಲಕ್ಷ್ಯವನ್ನು ಮುಂದುವರಿಸಿದರೆ, ಮುಂದಾಗುವ ಎಲ್ಲಾ ಅನಾಹುತಗಳಿಗೆ ಕಾಂಗ್ರೆಸ್ ಸರ್ಕಾರವೇ ನೇರ ಹೊಣೆ ಎಂದೂ ಹೇಳಿದ್ದಾರೆ.

**ಒಂದಾದರೂ ಸಭೆ ನಡೆಸಿದ್ದಾರಾ?**

ವಿರೋಧ ಪಕ್ಷದ ನಾಯಕನಾಗಿ ನಾನು ಕೇವಲ ರಾಜಕೀಯ ಮಾಡುತ್ತಿದ್ದೇನೆ. ಸಾವಿನಲ್ಲೂ ರಾಜಕಾರಣ ಮಾಡುತ್ತಿದ್ದೇನೆ ಎಂದು ಟೀಕೆ ಮಾಡುವವರು ಒಮ್ಮೆ ಯೋಚಿಸಲಿ. ಮುಂಗಾರು ಪೂರ್ವ ಮಳೆ ವಿಷಯ ಬಿಡಿ. ಮುಂಗಾರು ಮಳೆ ಆರಂಭಕ್ಕೆ ಇನ್ನು ನಾಲ್ಕು ವಾರ ಬಾಕಿ ಇದೆ. ಮುಖ್ಯಮಂತ್ರಿಗಳಾಗಲಿ, ಬೆಂಗಳೂರು ಉಸ್ತುವಾರಿ ಹೊತ್ತಿರುವ ಉಪಮುಖ್ಯಮಂತ್ರಿಗಳಾಗಲಿ, ಮಳೆಗಾಲ ನಿರ್ವಹಣೆ ಬಗ್ಗೆ ಈವರೆಗೂ ಒಂದಾದರೂ ಸಭೆ ನಡೆಸಿದ್ದಾರಾ? ರಸ್ತೆಗುಂಡಿ ಮುಚ್ಚುವ ಬಗ್ಗೆ, ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳ ದುರಸ್ತಿ ಬಗ್ಗೆ, ರಸ್ತೆಯಲ್ಲಿ ಬಿದ್ದಿರುವ, ನೇತಾಡುತ್ತಿರುವ ವಿದ್ಯುತ್ ತಂತಿಗಳನ್ನು ಸರಿಪಡಿಸುವ ಬಗ್ಗೆ, ತಗ್ಗು ಪ್ರದೇಶಗಳಲ್ಲಿ, ಅಂಡರ್‌ಪಾಸ್‌ಗಳಲ್ಲಿ, ಸೇತುವೆಗಳ ಮೇಲೆ ಮಳೆ ನೀರು ನಿಲ್ಲದಂತೆ ಕ್ರಮ ಕೈಗೊಳ್ಳುವ ಬಗ್ಗೆ, ರಾಜಕಾಲುವೆಗಳ ನಿರ್ವಹಣೆ ಬಗ್ಗೆ, ಹಳೆಯ ಮರಗಳು, ಜೋತು ಬಿದ್ದಿರುವ ಕೊಂಬೆಗಳನ್ನು ತೆಗೆಸುವ ಬಗ್ಗೆ, ಯಾವುದಾದರೂ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದ್ದಾರಾ. ಒಂದುವೇಳೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದರೆ ಬುಧವಾರದ ಅನಾಹುತವನ್ನು ತಪ್ಪಿಸಲು ಅವಕಾಶವಿರುತ್ತಿತ್ತು ಎಂದು ಅಶೋಕ್ ಹೇಳಿದ್ದಾರೆ.

# ಕೆಪಿಸಿಸಿ ಅಧ್ಯಕ್ಷ ಸ್ಥಾನ: ಸತೀಶ್ ಜಾರಕಿಹೊಳಿ ಪರ ಸಚಿವ ಎಂ.ಬಿ.ಪಾಟೀಲ್ ಒಲವು



**ಬೆಂಗಳೂರು, ಏ.30:** ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆಯ ಚರ್ಚೆಗಳು ಬಿರುಸಿನಿಂದ ಸಾಗುತ್ತಿರುವ ಬೆನ್ನಲ್ಲೇ, ಸಚಿವ ಸತೀಶ್ ಜಾರಕಿಹೊಳಿ ಅವರು ಕೆಪಿಸಿಸಿ ಅಧ್ಯಕ್ಷ ಸ್ಥಾನದತ್ತ ಕಣ್ಣಿಟ್ಟಿದ್ದಾರೆ. ಈ ಬೆನ್ನಲ್ಲೇ ಜಾರಕಿಹೊಳಿ ಪರವಾಗಿ ಸಚಿವ ಎಂ.ಬಿ. ಪಾಟೀಲ್ ಹೇಳಿಕೆ ನೀಡುವ ಮೂಲಕ ಪಕ್ಷದಲ್ಲಿ ಹೊಸ ಸಂಚಲನ ಮೂಡಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಎಂ.ಬಿ. ಪಾಟೀಲ್, ಸತೀಶ್ ಜಾರಕಿಹೊಳಿ ಅವರಿಗೆ ಕೆಪಿಸಿಸಿ ಅಧ್ಯಕ್ಷರಾಗುವ ಎಲ್ಲ ಸಾಮರ್ಥ್ಯವಿದೆ ಎಂದು ಮುಕ್ತವಾಗಿ ಶ್ಲಾಘಿಸಿದರು. ಸತೀಶ್ ಅವರು ಒಬ್ಬ ಉತ್ತಮ ಸಂಘಟಕರು ಮತ್ತು ನಾಯಕತ್ವ ವಹಿಸುವ ಎಲ್ಲಾ ಅರ್ಹತೆ ಹೊಂದಿದ್ದಾರೆ. ಅವರು ಈಗಾಗಲೇ ಅಧ್ಯಕ್ಷ ಸ್ಥಾನಕ್ಕೆ ಹಕ್ಕು ಮಂಡಿಸಿದ್ದಾರೆ. ಈ ಕುರಿತು ಹೈಕಮಾಂಡ್ ಎಲ್ಲವನ್ನೂ ಗಮನಿಸುತ್ತಿದ್ದು, ಅಂತಿಮವಾಗಿ ಅವರೇ ತೀರ್ಮಾನ ಕೈಗೊಳ್ಳಲಿದ್ದಾರೆ ಎಂದು ತಿಳಿಸಿದರು. ಇದೇ ವೇಳೆ ತಮ್ಮ ವೈಯಕ್ತಿಕ ಆಸಕ್ತಿಗಳ ಬಗ್ಗೆಯೂ ಹೈಕಮಾಂಡ್ ಜೊತೆ ಚರ್ಚಿಸುವುದಾಗಿ ಅವರು ಸುಳಿವು ನೀಡಿದ್ದಾರೆ.

ಸತೀಶ್ ಜಾರಕಿಹೊಳಿ ಸೇರಿದಂತೆ ಸಚಿವರ ದೆಹಲಿ ಪ್ರವಾಸದ ಬಗ್ಗೆ ಪ್ರತಿಕ್ರಿಯಿಸಿದ ಪಾಟೀಲ್, ಹೈಕಮಾಂಡ್ ಜೊತೆ ಚರ್ಚಿಸಲು ಎಲ್ಲರಿಗೂ ಅಧಿಕಾರವಿದೆ. ನಾಯಕತ್ವದ ಬಗ್ಗೆ ನಿತ್ಯವೂ ಚರ್ಚೆಗಳು ನಡೆಯುತ್ತಲೇ ಇರುತ್ತವೆ. ಕಾಂಗ್ರೆಸ್‌ನಲ್ಲಿ ಹೈಕಮಾಂಡೇ ಸುಪ್ರೀಂ ಆಗಿದ್ದು, ಅವರು ನೀಡುವ ನಿರ್ಧಾರಕ್ಕೆ ನಾವೆಲ್ಲರೂ ಬದ್ಧರಾಗಿದ್ದೇವೆ, ಎಂದು ಸ್ಪಷ್ಟಪಡಿಸಿದರು. ಪಕ್ಷದಲ್ಲಿ ಯಾವುದೇ ಗೊಂದಲಗಳಿಲ್ಲ ಎಂದು ಸಮರ್ಥಿಸಿಕೊಂಡರು.

**ಸಾಮಾನ್ಯ ಕಾರ್ಯಕರ್ತರೂ ಪಕ್ಷದ ಗೆಲುವಿಗೆ ದುಡಿದಿದ್ದಾರೆ**

ಇನ್ನು, ನನ್ನ ನಾಯಕತ್ವದಲ್ಲಿ ಪಕ್ಷ 136 ಸ್ಥಾನ ಗೆದ್ದಿದೆ ಎಂಬ ಡಿ.ಕೆ. ಶಿವಕುಮಾರ್ ಅವರ ಇತ್ತೀಚಿನ ಹೇಳಿಕೆಗೆ ಪ್ರತಿಕ್ರಿಯಿಸಿದ ಎಂ.ಬಿ. ಪಾಟೀಲ್, ಡಿಕೆಶಿ ಅವರು ಪಕ್ಷ ಸಂಘಟನೆ ಮಾಡಿರುವುದು ನಿಜ. ಕಾಂಗ್ರೆಸ್‌ಗೆ ಸಿದ್ದರಾಮಯ್ಯ ಅವರ ನಾಯಕತ್ವ ಮತ್ತು ಡಿಕೆಶಿ ಅವರ ಸಂಘಟನಾ ಚತುರತೆ ಎರಡೂ ಶಕ್ತಿಯಾಗಿದೆ. ಇವರಷ್ಟೇ ಅಲ್ಲದೆ, ಪಕ್ಷದ ಸಾಮಾನ್ಯ ಕಾರ್ಯಕರ್ತರು ಮತ್ತು ಬೂತ್ ಏಜೆಂಟ್ ಕೂಡ ಈ ಗೆಲುವಿಗೆ ಶ್ರಮಿಸಿದ್ದಾರೆ ಎಂದು ಪರೋಕ್ಷವಾಗಿ ಶ್ರೇಯಸ್ಸನ್ನು ಹಂಚಿದರು. ದಲಿತ ಮುಖ್ಯಮಂತ್ರಿ ಕೂಗು ಮತ್ತು ಲಿಂಗಾಯತ ಸಮುದಾಯದ ಬೇಡಿಕೆಗಳ ಕುರಿತು ಮಾತನಾಡುತ್ತಾ, ಲಿಂಗಾಯತ ಸಮುದಾಯ ಈ ಬಾರಿ ಕಾಂಗ್ರೆಸ್ ಪರವಾಗಿ ದೃಢವಾಗಿ ನಿಂತಿದೆ. ಮಾಜಿ ಸಿಎಂ ವೀರೇಂದ್ರ ಪಾಟೀಲ್ ಅವರ ಕಾಲದ ನಂತರ ಈಗ 35ಕ್ಕೂ ಹೆಚ್ಚು ಲಿಂಗಾಯತ ಶಾಸಕರು ಗೆದ್ದಿದ್ದಾರೆ. ಈ ಎಲ್ಲ ಸಮೀಕರಣಗಳನ್ನು ಹೈಕಮಾಂಡ್ ಗಮನಿಸುತ್ತಿದ್ದು, ಸೂಕ್ತ ಸಮಯದಲ್ಲಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಎಂ.ಬಿ. ಪಾಟೀಲ್ ಹೇಳಿದರು.

# ಪಂಚರಾಜ್ಯಗಳ ಚುನಾವಣಾ ಫಲಿತಾಂಶದ ಜತೆಗೆ ಸಿಎಂ ಕುರ್ಚಿ ರಿಸಲ್ಟ್ ಕೂಡ ಪ್ರಕಟ: ಸಂಸದ ಗೋವಿಂದ ಕಾರಜೋಳ ವ್ಯಂಗ್ಯ



**ಬಾಗಲಕೋಟೆ, ಏ.30:** ರಾಜ್ಯದಲ್ಲಿ ಸಿಎಂ ಬದಲಾವಣೆ ವಿಚಾರದ ಕಿತ್ತಾಟ ಜೋರಾಗಿ ನಡೆದಿದ್ದು, ಡಿ.ಕೆ.ಶಿವಕುಮಾರ್ ಸಿಎಂ ಆಗಲು ಶಾಲು ಹೊದ್ದು ಕೂತಿದ್ದಾರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಕೇವಲ 15 ದಿನಗಳ ಸರದಾರ ಮಾತ್ರ ಎಂದು ಸಂಸದ ಗೋವಿಂದ ಕಾರಜೋಳ ಹೇಳಿದ್ದಾರೆ. ನಗರದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಪಂಚರಾಜ್ಯಗಳ ಚುನಾವಣಾ ಫಲಿತಾಂಶದ ದಿನವೇ ಸಿದ್ಧರಾಮಯ್ಯ ಅವರ ಕುರ್ಚಿ ಫಲಿತಾಂಶ ಪ್ರಕಟ ಆಗಲಿದೆ. ರಾಜ್ಯ ಸರ್ಕಾರದಲ್ಲಿ ಕುರ್ಚಿ ಕಚ್ಚಾಟದಿಂದಾಗಿ ವಿಧಾನಸೌಧದಲ್ಲಿ ಆಡಳಿತವೇ ಇಲ್ಲದಂತಾಗಿದೆ. ಮೇ 4ರಂದು ಐದು ರಾಜ್ಯಗಳ ಚುನಾವಣೆ ಫಲಿತಾಂಶ ಬರುತ್ತದೆ. ಅಂದು ದಾವಣಗೆರೆ ಮತ್ತು ಬಾಗಲಕೋಟೆ ಫಲಿತಾಂಶ ಸಹ ಬರುತ್ತದೆ. ಅದರ ಜೊತೆಗೆ ಸಿದ್ದರಾಮಯ್ಯ ಅವರ ಕುರ್ಚಿಯ ಫಲಿತಾಂಶ ಕೂಡ ಬರಲಿದೆ. ಮಾಹಿತಿ ಪ್ರಕಾರ ಸಿದ್ಧರಾಮಯ್ಯ ಬೆಂಬಲಿಗ 40 ಜನ ಶಾಸಕರು, ಡಿ.ಕೆ.ಶಿವಕುಮಾರ್ ಪರವಾಗಿ 50 ಶಾಸಕರು ಹೈಕಮಾಂಡ್ ಬಳಿ ಹೋಗಿ ಲಾಬಿ ನಡೆಸುತ್ತಿದ್ದಾರೆ ಎಂದಿದ್ದಾರೆ.

# ವಾಯೇಜರ್–ದಿ ನೆವರ್ ಎಂಡಿಂಗ್ ಜರ್ನಿ: ಆಕಾಶ ಮಂಡಲ ಪ್ರದರ್ಶನಕ್ಕೆ ಸಚಿವ ಬೋಸರಾಜು ಚಾಲನೆ




**ಬೆಂಗಳೂರು, ಏ 30:** ಬೆಂಗಳೂರಿನ ಜವಾಹರಲಾಲ್ ನೆಹರು ತಾರಾಲಯದಲ್ಲಿ ಹೊಸದಾಗಿ ಸೇರ್ಪಡೆಯಾಗಿರುವ ಬಹುನಿರೀಕ್ಷಿತ ನೂತನ ಆಕಾಶಮಂಡಲ ಪ್ರದರ್ಶನವಾದ "ವಾಯೇಜರ್ – ದ ನೆವರ್ ಎಂಡಿಂಗ್ ಜರ್ನಿ" ಪ್ರದರ್ಶನಕ್ಕೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ಗುರುವಾರ ಚಾಲನೆ ನೀಡಿದರು.

ತಾರಾಲಯದ ಆವರಣದಲ್ಲಿ ನಡೆದ ಈ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆಯನ್ನು ತಾರಾಲಯದ ಆಡಳಿತ ಮಂಡಳಿ ಅಧ್ಯಕ್ಷ ಹಾಗೂ ಇಸ್ರೋದ ಮಾಜಿ ಅಧ್ಯಕ್ಷ ಎ.ಎಸ್. ಕಿರಣ್ ಕುಮಾರ್ ವಹಿಸಿದ್ದರು.

ಉದ್ಘಾಟನೆಯ ನಂತರ ಮಾತನಾಡಿದ ಸಚಿವ ಬೋಸರಾಜು, ವಾಯೇಜರ್ ಅಭಿಯಾನವು ನಮ್ಮ ಜಗತ್ತನ್ನು ಮೀರಿ ಜ್ಞಾನವನ್ನು ಅನ್ವೇಷಿಸುವ ಮಾನವಕುಲದ ಅಂತಿಮ ಹುಡುಕಾಟವನ್ನು ಪ್ರತಿನಿಧಿಸುತ್ತದೆ. ಈ ಬಾಹ್ಯಾಕಾಶ ನೌಕೆಗಳು ಬ್ರಹ್ಮಾಂಡದ ಬಹುದೂರದವರೆಗೆ ಕನ್ನಡದ ಶುಭಾಶಯಗಳ ಮೂಲಕ ಕರ್ನಾಟಕದ ಸಾಂಸ್ಕೃತಿಕ ಸಾರವನ್ನು ಹೊತ್ತೊಯ್ಯುತ್ತಿರುವುದು ನಮಗೆಲ್ಲರಿಗೂ ಅತ್ಯಂತ ಹೆಮ್ಮೆಯ ವಿಷಯವಾಗಿದೆ. ಜವಾಹರಲಾಲ್ ನೆಹರು ತಾರಾಲಯದಲ್ಲಿ ಇಂತಹ ವಿಶ್ವದರ್ಜೆಯ ಶೈಕ್ಷಣಿಕ ಪ್ರದರ್ಶನಗಳ ಮೂಲಕ, ಯುವಜನತೆಯಲ್ಲಿ ವೈಜ್ಞಾನಿಕ ಮನೋಭಾವವನ್ನು ಬೆಳೆಸಲು ಮತ್ತು ಮುಂದಿನ ಪೀಳಿಗೆಯ ಬಾಹ್ಯಾಕಾಶ ಪರಿಶೋಧಕರು ಹಾಗೂ ವಿದ್ಯಾರ್ಥಿಗಳನ್ನು ಪ್ರೇರೇಪಿಸಲು ನಮ್ಮ ಸರ್ಕಾರವು ಬದ್ಧವಾಗಿದೆ ಎಂದು ಹೇಳಿದರು.

ಇಸ್ರೋದ ಮಾಜಿ ಅಧ್ಯಕ್ಷ ಎ. ಎಸ್. ಕಿರಣ್ ಕುಮಾರ್ ಮಾತನಾಡಿ, "ವಾಯೇಜರ್ ಅಭಿಯಾನಗಳು ಮಾನವನ ಎಂಜಿನಿಯರಿಂಗ್ ಸಾಮರ್ಥ್ಯ ಮತ್ತು ಬ್ರಹ್ಮಾಂಡದ ಬಗೆಗಿನ ಕುತೂಹಲದ ಪರಾಕಾಷ್ಠೆಯಾಗಿವೆ.

ಈ ವಿಸ್ಮಯಕಾರಿ ಪಯಣವನ್ನು ಇಲ್ಲಿ ಪ್ರದರ್ಶಿಸುವ ಮೂಲಕ, ಯುವ ವಿದ್ಯಾರ್ಥಿಗಳಲ್ಲಿ ಬಾಹ್ಯಾಕಾಶ ವಿಜ್ಞಾನದ ಬಗ್ಗೆ ಆಸಕ್ತಿಯನ್ನು ಹುಟ್ಟುಹಾಕಲು ಮತ್ತು ಖಗೋಳಶಾಸ್ತ್ರದಲ್ಲಿ ಮುಂದಿನ ಪೀಳಿಗೆಯ ಸಾಧಕರಾಗಲು ಅವರನ್ನು ಪ್ರೋತ್ಸಾಹಿಸುವ ಆಶಯವನ್ನು ನಾವು ಹೊಂದಿದ್ದೇವೆ ಎಂದರು.

**ಬ್ರಹ್ಮಾಂಡದ ಮೂಲಕ ಒಂದು ಪಯಣ**

ಹೊಸದಾಗಿ ಆರಂಭಿಸಲಾದ ಈ ಆಕಾಶಮಂಡಲ ಪ್ರದರ್ಶನವು, 1977 ರಲ್ಲಿ ನಾಸಾ ಉಡಾವಣೆ ಮಾಡಿದ ಎರಡು ವಾಯೇಜರ್ ನೌಕೆಗಳ ಕಥನವನ್ನು ಅತ್ಯಂತ ಪರಿಣಾಮಕಾರಿಯಾಗಿ ವಿವರಿಸುತ್ತದೆ. ಕ್ಷುದ್ರಗ್ರಹಗಳ ಪಟ್ಟಿಯನ್ನು ದಾಟಿ ಸೌರವ್ಯೂಹದ ಆಚೆಗಿನ ಪ್ರದೇಶಕ್ಕೆ ಪ್ರಯಾಣ ಬೆಳೆಸಿದ ಈ ನೌಕೆಗಳ ಅದ್ಭುತ ಪಯಣವನ್ನು ಈ ಪ್ರದರ್ಶನವು ವಿವರಿಸುತ್ತದೆ. ವೀಕ್ಷಕರು ಗುರು, ಶನಿ, ಯುರೇನಸ್ ಮತ್ತು ನೆಪ್ಚೂನ್ ಗ್ರಹಗಳು ಹಾಗೂ ಅವುಗಳ ಉಪಗ್ರಹಗಳ ಉಸಿರು ಬಿಗಿಹಿಡಿಯುವ ದೃಶ್ಯಗಳು ಮತ್ತು ಅನಿಮೇಷನ್‌ಗಳನ್ನು ಕಣ್ತುಂಬಿಕೊಳ್ಳಲಿದ್ದು, ಇದೊಂದು ವಿಶಿಷ್ಟ ಅನುಭವವನ್ನು ನೀಡಲಿದೆ. ಇತರ ನಕ್ಷತ್ರಪುಂಜಗಳಲ್ಲಿ ಇರಬಹುದಾದ ಬುದ್ಧಿವಂತ ಜೀವಿಗಳನ್ನು ಉದ್ದೇಶಿಸಿ, ಕನ್ನಡ ಸೇರಿದಂತೆ ವಿಶ್ವದ ಹಲವು ಭಾಷೆಗಳಲ್ಲಿ ಶುಭಾಶಯ ಸಂದೇಶಗಳನ್ನು ಈ ನೌಕೆಗಳು ಹೇಗೆ ಹೊತ್ತೊಯ್ಯುತ್ತಿವೆ ಎಂಬುದನ್ನು ಸಹ ಈ ಪ್ರದರ್ಶನವು ಎತ್ತಿತೋರಿಸುತ್ತದೆ. ಈ ಸಂದರ್ಭದಲ್ಲಿ ಜವಾಹರಲಾಲ್ ನೆಹರು ತಾರಾಲಯದ ನಿರ್ದೇಶಕ ಡಾ. ಬಿ. ಆರ್. ಗುರುಪ್ರಸಾದ್, ಗಣ್ಯರು ಹಾಗೂ ವಿಜ್ಞಾನಾಸಕ್ತರು ಉಪಸ್ಥಿತರಿದ್ದರು.

**ಪ್ರದರ್ಶನದ ವಿವರಗಳು ಮತ್ತು ಸಮಯ**

"ವಾಯೇಜರ್" ಪ್ರದರ್ಶನದ ಒಟ್ಟು ಅವಧಿ 33 ನಿಮಿಷಗಳು. ಇದು 24 ನಿಮಿಷಗಳ ಮುಖ್ಯ ಆಕಾಶ ಪ್ರದರ್ಶನವನ್ನು ಮತ್ತು ಬಾಹ್ಯಾಕಾಶ ಯುಗಕ್ಕೂ ಮುನ್ನ ನಡೆದ ಗ್ರಹಗಳ ವೀಕ್ಷಣೆ ಮತ್ತು ಆವಿಷ್ಕಾರಗಳ ಇತಿಹಾಸವನ್ನು ವಿವರಿಸುವ 9 ನಿಮಿಷಗಳ 'ಮುನ್ನುಡಿ'ಯನ್ನು ಒಳಗೊಂಡಿದೆ. ಇದರ ಜೊತೆಗೆ, ತಾರಾಲಯವೇ ಸ್ವತಃ ನಿರ್ಮಿಸುತ್ತಿರುವ ಮುಂಬರುವ ಪ್ರದರ್ಶನವಾದ "ಚಂದ್ರಯಾನ: ಭಾರತದ ರೋಮಾಂಚಕಾರಿ ಚಂದ್ರ ಪಯಣ" ದ 3 ನಿಮಿಷಗಳ ಟ್ರೈಲರ್ ಅನ್ನು ಕೂಡ ವೀಕ್ಷಕರಿಗೆ ಪ್ರದರ್ಶಿಸಲಾಗುತ್ತದೆ. ಈ ಆಕಾಶಮಂಡಲ ಪ್ರದರ್ಶನವು ಏಪ್ರಿಲ್ 30, 2026 ರಿಂದ ಪ್ರತಿದಿನ ಸಾರ್ವಜನಿಕರ ವೀಕ್ಷಣೆಗೆ ಮುಕ್ತವಾಗಿರುತ್ತದೆ. "ವಾಯೇಜರ್ – ಅಂತ್ಯವಿಲ್ಲದ ಪಯಣ"

**ಪ್ರದರ್ಶನದ ಸಮಯ ಈ ಕೆಳಗಿನಂತಿದೆ:**

– ಇಂಗ್ಲಿಷ್ ಪ್ರದರ್ಶನಗಳು: ಬೆಳಿಗ್ಗೆ 10:30, ಸಂಜೆ 4:30 ಮತ್ತು ಸಂಜೆ 5:30

– ಕನ್ನಡ ಪ್ರದರ್ಶನಗಳು: ಬೆಳಿಗ್ಗೆ 11:30 ಮತ್ತು ಮಧ್ಯಾಹ್ನ 3:30

ಪ್ರತಿ ಪ್ರದರ್ಶನದಲ್ಲಿ ಲಭ್ಯವಿರುವ 200 ಆಸನಗಳ ಪೈಕಿ 150 ಆಸನಗಳನ್ನು 'ಬುಕ್ ಮೈ ಶೋ' ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಕಾಯ್ದಿರಿಸಬಹುದು. ಉಳಿದ 50 ಆಸನಗಳ ಟಿಕೆಟ್‌ಗಳನ್ನು ಪ್ರತಿ ಪ್ರದರ್ಶನ ಪ್ರಾರಂಭವಾಗುವ ಅರ್ಧ ಗಂಟೆ ಮೊದಲು ಟಿಕೆಟ್ ಕೌಂಟರ್‌ನಲ್ಲಿ ನೀಡಲಾಗುವುದು.

# ಅಲ್ಪ ಸಂಖ್ಯಾತರ ಕಾಲೋನಿಗಳ ಅಭಿವೃದ್ಧಿಗೆ 600 ಕೋಟಿ ರೂ ಅನುದಾನ: ಸಚಿವ ಸಂಪುಟ ತೀರ್ಮಾನ

**ಬೆಂಗಳೂರು, ಏ.30:** ಬೆಂಗಳೂರು – ಹೈದ್ರಾಬಾದ್ ನಡುವಿನ ಹೈ ಸ್ಪೀಡ್ ರೈಲು ಯೋಜನೆಯನ್ನು ಅನುಷ್ಠಾನಗೊಳಿಸಲು ರಾಜ್ಯ ಸಚಿವ ಸಂಪುಟ ಸಭೆ ತಾತ್ವಿಕ ಅನುಮೋದನೆ ನೀಡಿದೆ.

ಕೇಂದ್ರ ಸರ್ಕಾರದ ಪ್ರಾಯೋಜಿತ ಚೆನ್ನೈ – ಬೆಂಗಳೂರು ನಡುವಿನ ಹೈ ಸ್ಪೀಡ್ ರೈಲು ಕಾರಿಡಾರ್ ಯೋಜನೆ ಅನುಷ್ಠಾನಗೊಳಿಸಲು, ಬೆಂಗಳೂರು – ಬೀದರ್, ಬೆಂಗಳೂರು – ಕಲಬುರಗಿ ಮಾರ್ಗಗಳಲ್ಲಿ ವಿಮಾನ ಸೇವೆಗಳ ನಿರ್ವಹಣೆಗೆ ಒಂದು ವರ್ಷಕ್ಕೆ ಸೀಮಿತವಾಗಿ 28.47 ಕೋಟಿ ರೂ ಹಣಕಾಸು ಪ್ರೋತ್ಸಾಹ ಧನವನ್ನು ವಿಜಿಎಫ್ ರೂಪದಲ್ಲಿ ಒದಗಿಸಲು ತೀರ್ಮಾನಿಸಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಸಭೆಯ ನಂತರ ಸುದ್ದಿಗಾರರಿಗೆ ಮಾಹಿತಿ ನೀಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್, ಮೂಲ ಸೌಲಭ್ಯ ಅಭಿವೃದ್ಧಿ. ಬಂದರು ಮತ್ತು ಒಳನಾಡು ಸಾರಿಗೆ ಇಲಾಖೆಯಿಂದ ಈ ಎರಡೂ ಯೋಜನೆಗಳನ್ನು ಅನುಷ್ಠಾನಕ್ಕೆ ತರಲಾಗುವುದು ಎಂದರು.

ವಿಧಾನಸಭಾ ಕ್ಷೇತ್ರಗಳಲ್ಲಿ ಅಲ್ಪ ಸಂಖ್ಯಾತರು ವಾಸಿಸುವ ಕಾಲೋನಿಗಳ ಅಭಿವೃದ್ಧಿಗೆ 2026 – 28ರ ಅವಧಿಗೆ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯಡಿ 600 ಕೋಟಿ ರೂ ಒದಗಿಸುವ, ಅಫಜಲಪುರದಿಂದ ಕರಜಗಿವರೆಗೆ 28.97 ಕೋಟಿ ರೂ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೆತ್ತಿಕೊಳ್ಳಲು ಮತ್ತು ಜೇವರ್ಗಿಯಲ್ಲಿ 73.75 ಕೋಟಿ ರೂ ವೆಚ್ಚದಲ್ಲಿ ಜಿಟಿಟಿಸಿ ಕಟ್ಟಡ ನಿರ್ಮಾಣ ಮತ್ತು ಅಭಿವೃದ್ಧಿ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆ. ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ 1 ರಿಂದ 12 ನೇ ತರಗತಿಯಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಶಾಲಾ ಕಿಟ್‌ಗಳನ್ನು 115.84 ಕೋಟಿ ರೂ ವೆಚ್ಚದಲ್ಲಿ ಒದಗಿಸುವ, ಪ್ರಸಕ್ತ ಮುಂಗಾರು ಹಾಗೂ ಹಿಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಬಿಳಿ ಜೋಳ ಖರೀದಿಸಲು ಅಗತ್ಯವಿರುವ ಹೆಚ್ಚುವರಿ ಗೋಣಿ ಚೀಲಗಳನ್ನು 21.35 ಕೋಟಿ ರೂ ವೆಚ್ಚದಲ್ಲಿ ಖರೀದಿಸಲು ಹಾಗೂ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಿಂದ 32 ಕೋಟಿ ರೂ ವೆಚ್ಚದಲ್ಲಿ 80 ನಗರ ಸಾರಿಗೆ ಬಸ್‌ಗಳನ್ನು ಖರೀದಿಸಲು ತೀರ್ಮಾನಿಸಲಾಗಿದೆ.

ಆಂಧ್ರ ಪ್ರದೇಶದಲ್ಲಿರುವ ತಿರುಮಲದಲ್ಲಿರುವ ಕರ್ನಾಟಕ ಛತ್ರದಲ್ಲಿನ ಕೊಠಡಿಗಳನ್ನು ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ನಿಗಮಕ್ಕೆ ವಹಿಸಲು ನಿರ್ಧರಿಸಲಾಗಿದೆ.

# ಬೆಂಗಳೂರಿನಲ್ಲಿ ಸುರಿದಿದ್ದು ಶತಮಾನದ ದಾಖಲೆಯ ಮಳೆ

## ಬರೋಬ್ಬರಿ 111.5 ಮಿ.ಮೀ. ವರ್ಷಧಾರೆ, ಮಾಸಿಕ ಸರಾಸರಿಗಿಂತಲೂ ಮೂರುಪಟ್ಟು ಹೆಚ್ಚು

ಬೆಂಗಳೂರು, ಏ.30: ಬುಧವಾರ ಸಂಜೆ ಬೆಂಗಳೂರಿನಲ್ಲಿ ಸುರಿದ ಧಾರಾಕಾರ ಮಳೆ ಹೊಸ ದಾಖಲೆ ಬರೆದಿದೆ. ಭಾರತೀಯ ಹವಾಮಾನ ಇಲಾಖೆ ಮಾಹಿತಿಯಂತೆ ಬರೋಬ್ಬರಿ 111.5 ಮಿ.ಮೀ ಮಳೆಯಾಗಿದೆ. ಇದು ಏಪ್ರಿಲ್ ತಿಂಗಳಿನಲ್ಲಿ ಒಂದೇ ದಿನ ಸುರಿದ ಅತಿ ಹೆಚ್ಚು ಮಳೆಯಾಗಿದೆ. ಒಂದು ಶತಮಾನಕ್ಕೂ ಹೆಚ್ಚು ಕಾಲದ ಹವಾಮಾನ ದಾಖಲೆಗಳನ್ನು ಒಮ್ಮೆ ಗಮನಿಸಿದರೆ, ಇದೇ ಮೊದಲ ಬಾರಿಗೆ ಈ ಪ್ರಮಾಣದ ಮಳೆ ಏಪ್ರಿಲ್‌ನಲ್ಲಿ ದಾಖಲಾಗಿದೆ ಎನ್ನುವುದು ಅಚ್ಚರಿಯ ಸಂಗತಿ. ಈ ಹಿಂದಿನ ದಾಖಲೆಯನ್ನು ಒಮ್ಮೆ ಹಿಂತಿರುಗಿ ನೋಡುವುದಾದರೆ, 25 ವರ್ಷಗಳ ಹಿಂದೆ ಅಂದರೆ 2001ರ ಏಪ್ರಿಲ್ 19 ರಂದು 108.6 ಮಿ.ಮೀ ಮಳೆಯಾಗಿತ್ತು. ಆದರೆ ಈಗ ಬುಧವಾರ ಸಂಜೆ ಕೇವಲ ಒಂದೆರಡು ಗಂಟೆಗಳಲ್ಲಿ ಬಿರುಗಾಳಿ, ಗುಡುಗು ಸಹಿತ ಸುರಿದ ಮಳೆ ಆ ಹಳೆಯ ದಾಖಲೆಯನ್ನು ಸಂಪೂರ್ಣವಾಗಿ ಅಳಿಸಿಹಾಕಿದೆ. ಸಾಮಾನ್ಯವಾಗಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಇಡೀ ಏಪ್ರಿಲ್ ತಿಂಗಳ ಸರಾಸರಿ ಮಳೆ ಕೇವಲ 41 ಮಿ.ಮೀ ಇರುತ್ತದೆ. ಆದರೆ ನಿನ್ನೆ ಸುರಿದ 111.5 ಮಿ.ಮೀ ಮಳೆಯು ದೀರ್ಘಾವಧಿಯ ಮಾಸಿಕ ಸರಾಸರಿಗಿಂತ ಬಹುತೇಕ ಮೂರು ಪಟ್ಟು ಹೆಚ್ಚಾಗಿದೆ. ಇದು ಇತ್ತೀಚಿನ ವರ್ಷಗಳಲ್ಲಿ ಕಂಡುಬಂದ ಅತ್ಯಂತ ತೀವ್ರವಾದ ಮಳೆಯಾಗಿದೆ.

ಈ ಭಾರಿ ಮಳೆಯಿಂದಾಗಿ ನಗರದಲ್ಲಿ ಅಪಾರ ಪ್ರಮಾಣದ ಆಸ್ತಿಪಾಸ್ತಿ ಹಾನಿಯಾಗಿದೆ ಮತ್ತು ಹಲವಾರು ಅಮಾಯಕ ಜೀವಗಳು ಬಲಿಯಾಗಿವೆ. ವಿಶೇಷವಾಗಿ ಬೆಂಗಳೂರಿನ ಸೆಂಟ್ರಲ್ ಬಿಸಿನೆಸ್ ಡಿಸ್ಟ್ರಿಕ್ಟ್ ಪ್ರದೇಶದಲ್ಲಿ ಮಳೆ ತೀವ್ರ ಸ್ವರೂಪದ ಪರಿಣಾಮ ಬೀರಿದೆ. ಬೌರಿಂಗ್ ಆಸ್ಪತ್ರೆಯ ಬಳಿ ಕಾಂಪೌಂಡ್ ಗೋಡೆಯೊಂದು ದಿಢೀರ್ ಕುಸಿದು ಬಿದ್ದ ಪರಿಣಾಮ ಇಬ್ಬರು ಮಕ್ಕಳು ಸೇರಿದಂತೆ ಏಳು ಜನರು ಪ್ರಾಣ ಕಳೆದುಕೊಂಡಿದ್ದಾರೆ. ಇದಲ್ಲದೆ, ನಗರದ ಇತರ ಭಾಗಗಳಲ್ಲಿ ಮಳೆಗೆ ಸಂಬಂಧಿಸಿದ ಅವಘಡಗಳಿಂದಾಗಿ ಕನಿಷ್ಠ ಮೂರು ಜನರು ಸಾವನ್ನಪ್ಪಿದ್ದಾರೆ ಎಂಬ ವರದಿಗಳಿವೆ. ಪ್ರಮುಖ ರಸ್ತೆಗಳ ಉದ್ದಕ್ಕೂ ಬೃಹತ್ ಮರಗಳು ಮತ್ತು ರೆಂಬೆಗಳು ಧರೆಗುರುಳಿದ ಪರಿಣಾಮ ರಸ್ತೆಬದಿ ನಿಲ್ಲಿಸಿದ್ದ ಹಲವಾರು ವಾಹನಗಳು ಜಖಂಗೊಂಡಿವೆ ಹಾಗೂ ಟ್ರಾಫಿಕ್ ಜಾಮ್ ಉಂಟಾಗಿ ಸಾರ್ವಜನಿಕರು ಪರದಾಡುವಂತಾಯಿತು.

ಏಪ್ರಿಲ್ 1 ರಿಂದ 28 ರವರೆಗೆ ಬೆಂಗಳೂರಿನಲ್ಲಿ ಬಿಸಿಲಿನ ತಾಪವೇ ಹೆಚ್ಚಾಗಿತ್ತು ಮತ್ತು ಮಳೆಯ ಸುಳಿವೇ ಇರಲಿಲ್ಲ. ಕೇವಲ ತುಂತುರು ಮಳೆಯಷ್ಟೇ ದಾಖಲಾಗಿತ್ತು. ಈ ದೀರ್ಘ ಒಣಹವೆಯ ಮತ್ತು ಬೇಸಿಗೆಯ ಬಿಸಿಲಿನ ನಂತರ ಏಕಾಏಕಿ ಬಂದ ಈ ಮಳೆ ತಂಪೆರೆದರೂ, ಜನಜೀವನವನ್ನು ಅಸ್ತವ್ಯಸ್ತಗೊಳಿಸಿದೆ. ಮುಂದಿನ ದಿನಗಳಲ್ಲಿ ಹವಾಮಾನ ಹೇಗಿರಲಿದೆ ಎಂಬುದರ ಕುರಿತು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಶುಕ್ರವಾರದವರೆಗೆ ನಗರದ ಕೆಲವು ಭಾಗಗಳಲ್ಲಿ ಸಂಜೆ ಅಥವಾ ರಾತ್ರಿಯ ವೇಳೆ ಗುಡುಗು, ಬಿರುಗಾಳಿಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ತದನಂತರ ಮತ್ತೆ ಒಣ ಹವೆ ಮುಂದುವರಿಯಲಿದೆ.ಆದರೆ, ಈ ಮಳೆಯಿಂದಾಗಿ ನಗರದ ಹಗಲಿನ ತಾಪಮಾನದಲ್ಲಿ ಯಾವುದೇ ದೊಡ್ಡ ಇಳಿಕೆಯಾಗುವ ನಿರೀಕ್ಷೆಯಿಲ್ಲ.

ಹಗಲಿನ ಗರಿಷ್ಠ ತಾಪಮಾನವು 36 ಡಿಗ್ರಿ ಸೆಲ್ಸಿಯಸ್ ಆಸುಪಾಸಿನಲ್ಲಿಯೇ ಇರಲಿದ್ದು, ಇದು ವಾಡಿಕೆಗಿಂತ 2 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗಿರುತ್ತದೆ ಎಂದು ಐಎಂಡಿ ಗುರುವಾರ ಬಿಡುಗಡೆ ಮಾಡಿದ ತನ್ನ ವರದಿಯಲ್ಲಿ ಸ್ಪಷ್ಟಪಡಿಸಿದೆ.

# ಮಕ್ಕಳು ಕನ್ನಡದಲ್ಲೇಕೆ ನಪಾಸಾಗುತ್ತಾರೆ? ಅಧ್ಯಯನ ವರದಿ ಸಚಿವರಿಗೆ ಹಸ್ತಾಂತರ



ಕನ್ನಡ ಅಭಿವೃದ್ಧಿ ಪ್ರಾಧಿಕಾರ ಸಿದ್ಧಪಡಿಸಿದ ಕನ್ನಡ ನಾಡಿನ ಮಕ್ಕಳು ಕನ್ನಡದಲ್ಲೇಕೆ ನಪಾಸಾಗುತ್ತಾರೆ? ಒಂದು ಸಂಶೋಧನಾ ಅಧ್ಯಯನ ವರದಿಯನ್ನು ಶಿಕ್ಷಣ ಇಲಾಖೆ ಸಚಿವ ಮಧು ಬಂಗಾರಪ್ಪ ಅವರಿಗೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ, ಕಾರ್ಯದರ್ಶಿ ಡಾ. ಸಂತೋಷ ಹಾನಗಲ್ಲ, ಶಿಕ್ಷಕಿಯರಾದ ಪೂರ್ಣಿಮಾ.ಎಸ್ ಹಾಗೂ ಆಶಾ ಕೆ.ಸಿ. ಹಾಜರಿದ್ದರು.

**ಬೆಂಗಳೂರು, ಮೇ.30:** ಕನ್ನಡ ಭಾಷೆಯ ಗುಣಮಟ್ಟವನ್ನು ಹೆಚ್ಚಿಸಲು ಅಧ್ಯಯನ ವರದಿಯನ್ನು ಸಿದ್ಧಪಡಿಸಲಾಗಿದ್ದು ಅದರ ಶಿಫಾರಸುಗಳನ್ನು ಆಧರಿಸಿ ಕೂಡಲೇ ಕನ್ನಡ ಭಾಷೆಯ ಅಭಿವೃದ್ಧಿಗೆ ಕ್ರಮ ಕೈಗೊಳ್ಳಬೇಕೆಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆಯವರು ಶಿಕ್ಷಣ ಸಚಿವ ಮಧುಬಂಗಾರಪ್ಪ ಅವರನ್ನು ಗುರುವಾರ ಒತ್ತಾಯಿಸಿದರು. ಅವರು ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಡಾ. ನಿರಂಜನಾರಾಧ್ಯ ಅವರ ಮಾರ್ಗದರ್ಶನದಲ್ಲಿ, ಎಂಟು ಜನ ಕನ್ನಡ ಅಧ್ಯಾಪಕರು ಸಿದ್ಧಪಡಿಸಿದ ಕನ್ನಡನಾಡಿನ ಮಕ್ಕಳು ಕನ್ನಡದಲ್ಲೇಕೆ ನಪಾಸಾಗುತ್ತಾರೆ ಎಂಬ ಸಂಶೋಧನಾ ವರದಿಯನ್ನು ಸಚಿವರಿಗೆ ಇವತ್ತು ಒಪ್ಪಿಸಿದರು. ಸಚಿವರು ಈ ಕುರಿತು ಕೂಡಲೇ ಕ್ರಮ ಕೈಗೊಳ್ಳುವ ಭರವಸೆಯನ್ನು ನೀಡಿದರು.

# ಮೃತರ ಕುಟುಂಬಕ್ಕೆ ಪರಿಹಾರ ವಿತರಣೆ

ಬೆಂಗಳೂರು, ಏ.30: ಬುಧವಾರ ಸುರಿದ ಮಹಾಮಳೆಗೆ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ ಹಿಂಭಾಗದ ಕಾಂಪೌಂಡ್ ಗೋಡೆ ಕುಸಿದು ಮೃತಪಟ್ಟ 7 ಮಂದಿಯ ಕುಟುಂಬದವರಿಗೆ ಜಿಬಿಎ ವತಿಯಿಂದ ತಲಾ 5 ಲಕ್ಷ ರೂ.ಗಳ ಪರಿಹಾರ ಮೊತ್ತದ ಚೆಕ್ ಗುರುವಾರ ವಿತರಿಸಲಾಯಿತು. ಬುಧವಾರ ಸ್ಥಳ ಪರಿಶೀಲನೆ ನಡೆಸಿದ್ದ ಸಿಎಂ ಸಿದ್ದರಾಮಯ್ಯ ಪರಿಹಾರ ಘೋಷಿಸಿದ್ದರು.

ಎಂ.ಜಿ. ರಸ್ತೆಯಲ್ಲಿರುವ ಪಿ.ಯು.ಬಿ. ಕಟ್ಟಡದ 10ನೇ ಮಹಡಿಯಲ್ಲಿರುವ ಕೇಂದ್ರ ನಗರ ಪಾಲಿಕೆ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ರಿಜ್ವಾನ್ ಹರ್ಷದ್ ಅವರು ಮೃತರ ಕುಟುಂಬದವರಿಗೆ ಚೆಕ್ ವಿತರಿಸಿದರು. ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಉಪಸ್ಥಿತರಿದ್ದರು. ಮೃತರ ಕುಟುಂಬದವರಿಗೆ ಶಿವಾಜಿನಗರ ಶಾಸಕ ರಿಜ್ವಾನ್ ಹರ್ಷದ್ ಅವರು ಸಾಂತ್ವನ ಹೇಳಿದ್ದಾರೆ. ಪರಿಹಾರ ಮೊತ್ತವನ್ನು ಕುಟುಂಬಕ್ಕೆ ಸೂಕ್ತವಾಗಿ ಬಳಸುವಂತೆ ತಿಳಿಸಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಕಾಂಪೌಂಡ್ ಪಕ್ಕದಲ್ಲಿನ ವ್ಯಾಪಾರಿಗಳ ತೆರವಿಗೆ ಡಿಕೆಶಿ ಸೂಚನೆ



**ಬೆಂಗಳೂರು, ಏ.30:** ಬೆಂಗಳೂರಿನಾದ್ಯಂತ ಅಪಾಯಕಾರಿಯಾಗಿರುವ ಕಾಂಪೌಂಡ್‌ಗಳ ಪಕ್ಕ ಇರುವ ಬೀದಿಬದಿ ವ್ಯಾಪಾರಿಗಳನ್ನು ತೆರವುಗೊಳಿಸಿ ಎಂದು ಸೂಚನೆ ನೀಡಲಾಗಿದೆ. ಇಂತಹ ಪ್ರದೇಶಗಳನ್ನು ಗುರುತಿಸಿ ಎಂದು ಈಗಾಗಲೇ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಅಧಿಕಾರಿಗಳ ನಿರ್ಲಕ್ಷ್ಯದಿಂದ ಅವಘಡ ಸಂಭವಿಸಿದೆಯೇ ಎಂದು ಕೇಳಿದಾಗ, ಈ ದುರ್ಘಟನೆ ಸಂಭವಿಸಬಾರದಿತ್ತು, ಯಾವ ಅಧಿಕಾರಿಗಳ ನಿರ್ಲಕ್ಷ್ಯ ಎಂದು ಹೇಳುವುದಿಲ್ಲ. ವಾಜಪೇಯಿ (ಬೌರಿಂಗ್) ಆಸ್ಪತ್ರೆಯ ಕಾಂಪೌಂಡ್ ಪಕ್ಕದಲ್ಲಿ ಮಣ್ಣಿನರಾಶಿ ಹಾಕಿದ್ದಾರೆ. ಇದರ ಒತ್ತಡ ತಾಳಲಾರದೆ ಕಾಂಪೌಂಡ್ ಕುಸಿದಿದೆ. ಈ ರಸ್ತೆಯಲ್ಲಿಯೂ ಯಾವ ವ್ಯಾಪಾರಿಗಳನ್ನು ಕೂರಿಸಬಾರದು ಎಂದು ಅಧಿಕಾರಿಗಳಿಗೆ ತಿಳಿಸಿದ್ದೇನೆ ಎಂದರು.

ಬೆಂಗಳೂರಿನ ಎಲ್ಲ ರಸ್ತೆಗಳಲ್ಲಿ ಇರುವ ದುರ್ಬಲ ಮರಗಳು, ಕೊಂಬೆಗಳನ್ನು ಕತ್ತರಿಸಲಾಗುವುದು. ಈಗಾಗಲೇ ಕೆಲಸ ಪ್ರಾರಂಭವಾಗಿದೆ. ಇದರ ಬಗ್ಗೆ ಪೊಲೀಸ್ ಹಾಗೂ ಬಿಬಿಎ ಅಧಿಕಾರಿಗಳು ಕೆಲಸ ಮಾಡಿ ಪಟ್ಟಿ ತಯಾರಿಸಿದ್ದಾರೆ. ಮಳೆಹಾನಿ ತಡೆಗೆ ಕಂಟ್ರೋಲ್ ರೂಮ್ ಸಹ ಅಣಿಯಾಗಿದೆ. ಅಧಿಕಾರಿಗಳು ಸಹ ಕಾರ್ಯಪ್ರವೃತ್ತರಾಗಿದ್ದಾರೆ ಎಂದು ತಿಳಿಸಿದರು.

### ಜಲಾಶಯಗಳಲ್ಲಿ ಸಂಗ್ರಹ ಕಡಿಮೆಯಾಗುವ ಆತಂಕ ವ್ಯಕ್ತಪಡಿಸಿದ ಡಿಸಿಎಂ

**ಹವಾಮಾನ ಇಲಾಖೆಯವರು ಈ ವರ್ಷ ಮಳೆ ಕಡಿಮೆ ಬರುತ್ತದೆ ಎಂದು ಹೇಳಿದ್ದಾರೆ. ಇದರಿಂದ ಆಣೆಕಟ್ಟುಗಳಲ್ಲಿ ನೀರಿನ ಪ್ರಮಾಣ ಕಡಿಮೆಯಾಗಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆತಂಕ ವ್ಯಕ್ತಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಳೆ ಕಡಿಮೆಯಾದರೆ ವಿದ್ಯುತ್ ಉತ್ಪಾದನೆ ಕುಸಿಯಲಿದೆ. ನಾನು ಶನಿವಾರ ತುಂಗಭದ್ರಾ ಜಲಾಶಯಕ್ಕೆ ಭೇಟಿ ನೀಡುತ್ತಿದ್ದೇನೆ. ಅಲ್ಲಿ ಎಲ್ಲಾ ಗೇಟ್ ಬದಲಿ ಕಾರ್ಯ ಮುಕ್ತಾಯವಾಗಿದ್ದು, ನೀರಿನ ಶೇಖರಣೆ ಆರಂಭಿಸಬೇಕಿದೆ ಎಂದರು. ಕಾವೇರಿ ನೀರಿನ ವಿಚಾರದಲ್ಲಿ 177 ಟಿಎಂಸಿ ನೀರು ಹರಿಸಲೇಬೇಕು ಎಂದು ಸುಪ್ರೀಂ ಕೋರ್ಟ್ ಆದೇಶಿಸಿದೆ. ಈ ಕಾರಣಕ್ಕೆ ಮಳೆ ಚೆನ್ನಾಗಿ ಬರಲಿ ಎಂದು ದೇವರಲ್ಲಿ ಪ್ರಾರ್ಥನೆ ಮಾಡುತ್ತೇನೆ. ಹೆಚ್ಚಿನ ಮಳೆ ಬಂದರೆ ಅದನ್ನು ಎದುರಿಸಲು ಈಗಾಗಲೇ ಸಿದ್ಧತೆಯನ್ನು ಮಾಡಿಕೊಳ್ಳಲಾಗಿದೆ ಎಂದು ಹೇಳಿದರು.**

## ಶಿಥಿಲಾವಸ್ಥೆಯಲ್ಲಿರುವ ಆಸ್ಪತ್ರೆ ಕಟ್ಟಡ, ಕಾಂಪೌಂಡ್ ಪರಿಶೀಲನೆಗೆ ಆದೇಶ

**ಬೆಂಗಳೂರು, ಏ.30:** ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿರುವ ಎಲ್ಲ ಆಸ್ಪತ್ರೆಗಳ ಕಟ್ಟಡಗಳನ್ನು ಹಾಗೂ ಕಾಂಪೌಂಡ್‌ಗಳನ್ನು ಪರಿಶೀಲನೆ ನಡೆಸಿ ಅಧ್ಯಯನ ವರದಿ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಸಚಿವ ಡಾ. ಶರಣಪ್ರಕಾಶ ಆರ್. ಪಾಟೀಲ್ ತಿಳಿಸಿದ್ದಾರೆ.



ಮಳೆಯಿಂದ ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಕುಸಿದು ಏಳು ಮಂದಿ ಮೃತಪಟ್ಟ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಅಧಿಕಾರಿಗಳು, ವೈದ್ಯಾಧಿಕಾರಿಗಳಿಂದ ಮಾಹಿತಿ ಪಡೆದ ನಂತರ ಸಚಿವರು ಈ ಮಾಹಿತಿ ನೀಡಿದ ಅವರು, ಬೌರಿಂಗ್ ಆಸ್ಪತ್ರೆಯ ದುರಂತದ ಕುರಿತು ಲೋಕೋಪಯೋಗಿ ಇಲಾಖೆಯ ಮುಖ್ಯ ಅಭಿಯಂತರರ ನೇತೃತ್ವದಲ್ಲಿ ತನಿಖೆ ನಡೆಸಲಾಗುತ್ತಿದೆ. ಈ ವರದಿ ಬಂದ ನಂತರ ಮುಂದಿನ ಕ್ರಮದ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಬೌರಿಂಗ್ ಆಸ್ಪತ್ರೆ, ವಿಕ್ಟೋರಿಯಾ ಆಸ್ಪತ್ರೆ ಸೇರಿದಂತೆ ರಾಜ್ಯದಲ್ಲಿರುವ ಎಲ್ಲ ಆಸ್ಪತ್ರೆ ಕಟ್ಟಡಗಳನ್ನು ಹಾಗೂ ಕಾಂಪೌಂಡ್‌ಗಳನ್ನು ತಜ್ಞರ ತಂಡ ಪರಿಶೀಲನೆ ನಡೆಸಲು ಆದೇಶಿಸಲಾಗಿದೆ ಎಂದು ವಿವರಿಸಿದರು.

## ಅನ್ಯಭಾಷಿಕರಿಗೆ ಭಾಷಾ ತೊಡಕು ನಿವಾರಿಸಲು ನಮ್ಮ 112



- ಪೊಲೀಸ್ ಸಹಾಯವಾಣಿಗೆ ಚಾಲನೆ
- ಭಾರತೀಯ ಭಾಷೆಗಳ ಜತೆಗೆ ವಿದೇಶಿ ಭಾಷೆಗಳ ಅಳವಡಿಕೆ

**ಬೆಂಗಳೂರು, ಏ.30:** ಸಿಲಿಕಾನ್ ಸಿಟಿಯಲ್ಲಿ ವಾಸಿಸುವ ಅನ್ಯಭಾಷಿಕರಿಗೆ ತುರ್ತು ಸಂದರ್ಭದಲ್ಲಿ ಪೊಲೀಸರ ನೆರವು ಪಡೆಯಲು ಇದ್ದ 'ಭಾಷೆಯ ತೊಡಕು' ಇನ್ನು ಇತಿಹಾಸವಾಗಲಿದೆ. ಬೆಂಗಳೂರು ಪೊಲೀಸರು ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಬಳಸಿ ರೂಪಿಸಿರುವ 'ನಮ್ಮ–112' ಬಹುಭಾಷಾ ಆಯ್ಕೆ ವ್ಯವಸ್ಥೆಗೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಚಾಲನೆ ನೀಡಿದರು.

ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಬುಧವಾರ ನಡೆದ ಸಮಾರಂಭದಲ್ಲಿ ಈ ವಿನೂತನ ಸೇವೆಗೆ ಹಸಿರು ನಿಶಾನೆ ತೋರಿದ ಸಚಿವರು, "ದೇಶದಲ್ಲೇ ಮೊದಲ ಬಾರಿಗೆ ಪೊಲೀಸ್ ಸಹಾಯವಾಣಿಯಲ್ಲಿ ಎಐ ತಂತ್ರಜ್ಞಾನ ಬಳಸಿ ಇಷ್ಟೊಂದು ಭಾಷೆಗಳನ್ನು ಅಳವಡಿಸಲಾಗಿದೆ" ಎಂದು ಹೆಮ್ಮೆಯಿಂದ ತಿಳಿಸಿದರು. ಈ ಹಿಂದೆ 112 ಸಹಾಯವಾಣಿಯಲ್ಲಿ ಕನ್ನಡ, ಇಂಗ್ಲಿಷ್ ಮತ್ತು ಹಿಂದಿ ಭಾಷೆಗಳಲ್ಲಿ ಮಾತ್ರ ಸೇವೆ ಲಭ್ಯವಿತ್ತು. ಈಗ ಎಐ ನೆರವಿನಿಂದ ಮಣಿಪುರಿ, ಕಾಶ್ಮೀರಿ, ತಮಿಳು, ತೆಲುಗು, ಮಲಯಾಳಂ, ಮರಾಠಿ ಮತ್ತು ಅಸ್ಸಾಮಿ ಭಾಷೆಗಳನ್ನು ಸೇರಿಸಲಾಗಿದೆ. ಅಚ್ಚರಿಯೆಂದರೆ, ಕೇವಲ ಭಾರತೀಯ ಭಾಷೆಗಳಷ್ಟೇ ಅಲ್ಲದೆ ವಿದೇಶಿ ಪ್ರವಾಸಿಗರ ಅನುಕೂಲಕ್ಕಾಗಿ ನೇಪಾಳಿ, ಸ್ಪ್ಯಾನಿಷ್, ಫ್ರೆಂಚ್ ಮತ್ತು ಅರೇಬಿಕ್ ಭಾಷೆಗಳನ್ನೂ ಅಳವಡಿಸಲಾಗಿದೆ. ಅನ್ಯಭಾಷಿಕರು ಸಂಕಷ್ಟದ ಸಮಯದಲ್ಲಿ 112ಗೆ ಕರೆ ಮಾಡಿ ತಮಗೆ ತಿಳಿದಿರುವ ಭಾಷೆಯಲ್ಲಿ ಮಾತನಾಡಿದರೆ, ಎಐ ತಂತ್ರಜ್ಞಾನವು ಅದನ್ನು ಸ್ವಯಂಚಾಲಿತವಾಗಿ ತರ್ಜುಮೆ ಮಾಡಿ ಪೊಲೀಸರಿಗೆ ಅರ್ಥವಾಗುವಂತೆ ಮಾಡುತ್ತದೆ. ಮರಳಿ ಪೊಲೀಸರು ನೀಡುವ ಮಾಹಿತಿಯನ್ನು ಕರೆ ಮಾಡಿದವರ ಭಾಷೆಗೆ ಭಾಷಾಂತರಿಸಿ ಉತ್ತರಿಸುತ್ತದೆ. ಒಂದೂವರೆ ಕೋಟಿ ಜನಸಂಖ್ಯೆ ಇರುವ ಬೆಂಗಳೂರಿನಲ್ಲಿ ಹತ್ತಾರು ಭಾಷೆ ಮಾತನಾಡುವ ಜನರಿಗೆ ಇದು ವರದಾನವಾಗಲಿದೆ. ಕಾರ್ಯಕ್ರಮದಲ್ಲಿ ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಮುಂದಿನ ದಿನಗಳಲ್ಲಿ ಈ ಸಹಾಯವಾಣಿಗೆ ಇನ್ನಷ್ಟು ಭಾಷೆಗಳನ್ನು ಸೇರಿಸುವ ಗುರಿ ಹೊಂದಲಾಗಿದೆ.

## ಜಲಜೀವನ್ ವಿಳಂಬಕ್ಕೆ ರಾಜ್ಯ ಸರ್ಕಾರದ ನಿಧಾನಗತಿಯೇ ಕಾರಣ



**ಅನುದಾನ ಕೊರತೆ ಆರೋಪಕ್ಕೆ ಅಂಕಿ-ಅಂಶಗಳೊಂದಿಗೆ ತಿರುಗೇಟು ನೀಡಿದ ವಿ.ಸೋಮಣ್ಣ**

**ನವದೆಹಲಿ, ಏ.30:** ರಾಜ್ಯದಲ್ಲಿ ಜಲಜೀವನ್ ಮಿಷನ್ (ಜೆಜೆಎಂ) ಅನುಷ್ಠಾನದಲ್ಲಿ ಅನುದಾನ ಕೊರತೆ ಕುರಿತಾಗಿ ಕೇಂದ್ರ–ರಾಜ್ಯ ನಡುವಿನ ವಿವಾದ ತೀವ್ರಗೊಂಡಿದೆ. ಕೇಂದ್ರ ಜಲಶಕ್ತಿ ಇಲಾಖೆಯ ರಾಜ್ಯ ಖಾತೆ ಸಚಿವ ರಾಜ್ಯ ಸರ್ಕಾರದ ವಿರುದ್ಧ ಅಂಕಿಅಂಶಗಳೊಂದಿಗೆ ತಿರುಗೇಟು ನೀಡಿದ್ದು, ಯೋಜನೆ ಜಾರಿಗೆ ರಾಜ್ಯದ ನಿಧಾನಗತಿಯೇ ಪ್ರಮುಖ ಕಾರಣ ಎಂದು ಆರೋಪಿಸಿದ್ದಾರೆ.

2019ರಲ್ಲಿ ಆರಂಭವಾದ ಈ ಮಹತ್ವಾಕಾಂಕ್ಷಿ ಯೋಜನೆಗೆ ದೇಶದ ಮಟ್ಟದಲ್ಲಿ ರೂ.3.60 ಲಕ್ಷ ಕೋಟಿ ವೆಚ್ಚ ನಿಗದಿಯಾಗಿದ್ದು, ಕೇಂದ್ರದ ಪಾಲು ರೂ.2.08 ಲಕ್ಷ ಕೋಟಿ ಆಗಿದೆ. ಕರ್ನಾಟಕಕ್ಕೆ ಒಟ್ಟು ರೂ.28,623.89 ಕೋಟಿ ಅನುದಾನ ಮೀಸಲಿದ್ದರೂ, ರಾಜ್ಯವು ಇದರಲ್ಲಿ ಕೇವಲ ರೂ.11,152.16 ಕೋಟಿಯನ್ನು ಮಾತ್ರ ಬಳಸಿಕೊಂಡಿದೆ. ಉಳಿದ ರೂ.16,863.86 ಕೋಟಿ ಅನುದಾನವನ್ನು ಪಡೆಯಲು ವಿಫಲವಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ರಾಜ್ಯ ಪ್ರಸ್ತಾಪಿಸಿದ 66,344 ಯೋಜನೆಗಳ ಪೈಕಿ ಕೇವಲ 24,888 ಯೋಜನೆಗಳು (ಶೇ.35.50) ಭೌತಿಕವಾಗಿ ಪ್ರಗತಿಯಲ್ಲಿದ್ದು, ಆರ್ಥಿಕವಾಗಿ 9,325 ಯೋಜನೆಗಳು (ಶೇ.14.05) ಮಾತ್ರ ಪೂರ್ಣಗೊಂಡಿವೆ. ಇದರ ಪರಿಣಾಮವಾಗಿ ಜೆ.ಜೆ.ಎಂ ಅನುಷ್ಠಾನದಲ್ಲಿ ಕರ್ನಾಟಕ ದೇಶದಲ್ಲಿ 22ನೇ ಸ್ಥಾನದಲ್ಲಿದೆ.

ಹರ್ ಘರ್ ಜಲ್ ಪ್ರಮಾಣೀಕರಣದಲ್ಲಿಯೂ ರಾಜ್ಯ ಹಿನ್ನಡೆಯಲ್ಲಿದ್ದು, 26,591 ಗ್ರಾಮಗಳ ಪೈಕಿ ಕೇವಲ 6,989 ಗ್ರಾಮಗಳು ಮಾತ್ರ ಪ್ರಮಾಣೀಕರಣ ಪಡೆದಿವೆ. ರಾಜ್ಯದ ಯಾವುದೇ ಜಿಲ್ಲೆ ಸಂಪೂರ್ಣ ಪ್ರಮಾಣೀಕರಣ ಪಡೆದಿಲ್ಲ ಎಂಬುದು ಗಮನಾರ್ಹ. ಇದಲ್ಲದೆ, ಒಟ್ಟು ಯೋಜನೆಗಳ ಪೈಕಿ ರೂ.1,716.60 ಕೋಟಿ ವೆಚ್ಚದ 26 ಯೋಜನೆಗಳಿಗೆ 15–03–2024ರವರೆಗೆ ವರ್ಕ್ ಆರ್ಡರ್ ನೀಡದಿರುವುದು ರಾಜ್ಯದ ಆಡಳಿತ ವೈಫಲ್ಯವನ್ನು ತೋರಿಸುತ್ತದೆ ಎಂದು ವಿ. ಸೋಮಣ್ಣ ಹೇಳಿದ್ದಾರೆ.

ಯೋಜನೆ ಅನುಷ್ಠಾನ ಕುರಿತು ಬಂದ ದೂರುಗಳ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ರಚಿಸಿದ ತಂಡದ ಅಧ್ಯಯನದಲ್ಲಿ ಹಲವು ನ್ಯೂನತೆಗಳು ಬೆಳಕಿಗೆ ಬಂದಿವೆ. ಯೋಜನಾ ವೆಚ್ಚದ ಅನವಶ್ಯಕ ಹೆಚ್ಚಳ, ತಾಂತ್ರಿಕ ಬದಲಾವಣೆಗಳು, ಕಾನೂನು ಅನುಮತಿಗಳ ವಿಳಂಬ, ನಿರ್ವಹಣಾ ವೆಚ್ಚ ಮತ್ತು ಭೂಸ್ವಾಧೀನ ವೆಚ್ಚಗಳನ್ನು ಯೋಜನೆಗೆ ಸೇರಿಸಿರುವುದು ಸೇರಿದಂತೆ ಹಲವು ಸಮಸ್ಯೆಗಳು ಪತ್ತೆಯಾಗಿವೆ.

ಉತ್ತರ ಪ್ರದೇಶ, ತಮಿಳುನಾಡು, ರಾಜಸ್ಥಾನ ಹಾಗೂ ಮಧ್ಯಪ್ರದೇಶ ರಾಜ್ಯಗಳಲ್ಲಿಯೂ ಇದೇ ರೀತಿಯ ಸಮಸ್ಯೆಗಳಿದ್ದಲ್ಲಿ ಅನುದಾನ ತಡೆಹಿಡಿಯಲಾಗಿದೆ. ಹೀಗಾಗಿ ಕರ್ನಾಟಕಕ್ಕೆ ಮಾತ್ರ ಅನ್ಯಾಯವಾಗಿದೆ ಎಂಬ ಮುಖ್ಯಮಂತ್ರಿಗಳ ಆರೋಪ ಸತ್ಯಕ್ಕೆ ದೂರ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.



ಸೋಮನಾಥ್ ಸ್ವಾಭಿಮಾನಿ ಪರ್ವದ ಅಂಗವಾಗಿ ಕೈಗೊಂಡಿರುವ ಸೋಮನಾಥ ಯಾತ್ರೆ ರೈಲಿಗೆ ದೆಹಲಿಯ ಸಫ್ದರ್‌ಜಂಗ್ ರೈಲು ನಿಲ್ದಾಣದಲ್ಲಿ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ಕೇಂದ್ರ ಸಚಿವರಾದ ಗಜೇಂದ್ರಸಿಂಗ್ ಶೆಖಾವತ್ ಹಾಗೂ ಕಪಿಲ್‌ಮಿಶ್ರಾ ಅವರು ಗುರುವಾರ ಹಸಿರು ನಿಶಾನೆ ತೋರಿದರು.

## ಬ್ರಹ್ಮೋಸ್: 4,000 ಕೋಟಿ ರೂ. ರಫ್ತು ಆದೇಶ: ಡಿಆರ್‌ಡಿಒ

**ನವದೆಹಲಿ, ಏ.30:** ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಗುರುವಾರ 2025–26ರಲ್ಲಿ ಬ್ರಹ್ಮೋಸ್ ಏರೋಸ್ಪೇಸ್ 5,200 ಕೋಟಿ ರೂ.ಗಳಿಗೂ ಹೆಚ್ಚಿನ ಆದಾಯವನ್ನು ದಾಖಲಿಸಿದೆ ಎಂದು ಹೇಳಿರುವುದರಿಂದ, ರಕ್ಷಣಾ ತಯಾರಿಕೆಯಲ್ಲಿ ಸ್ವಾವಲಂಬನೆಗಾಗಿ ಭಾರತದ ಪ್ರಯತ್ನಕ್ಕೆ ಪ್ರಮುಖ ಉತ್ತೇಜನ ದೊರೆತಿದೆ, ಜೊತೆಗೆ ದೇಶೀಯ ಉತ್ಪಾದನೆ ಮತ್ತು ರಫ್ತುಗಳಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸಿದೆ.

ಲಖನೌದಲ್ಲಿರುವ ಕಂಪನಿಯ ಹೊಸ ಸೌಲಭ್ಯವು ಕಾರ್ಯಾಚರಣೆಯ ಒಂದು ವರ್ಷದೊಳಗೆ ತನ್ನ ಮೊದಲ ಹಂತದ ಕ್ಷಿಪಣಿಗಳನ್ನು ಹೊರತರಲು ಪ್ರಾರಂಭಿಸಿದೆ ಎಂದು DRDO ತನ್ನ ಹೇಳಿಕೆಯಲ್ಲಿ ಪ್ರಸ್ತಾಪ ಮಾಡಿದೆ, ಜೊತೆಗೆ ಆರ್ಥಿಕ ವರ್ಷದಲ್ಲಿ ಬ್ರಹ್ಮೋಸ್ 4,000 ಕೋಟಿ ರೂ. ಮೌಲ್ಯದ ಎರಡು ರಫ್ತು ಆದೇಶ ಪಡೆದುಕೊಂಡಿದೆ, ಇದು ತನ್ನ ಜಾಗತಿಕ ಹೆಜ್ಜೆಗುರುತನ್ನು ವಿಸ್ತರಿಸುತ್ತಿದೆ ಮತ್ತು ಭಾರತದ ರಕ್ಷಣಾ ರಫ್ತು ಗುರಿಗಳಿಗೆ ಕೊಡುಗೆ ನೀಡಿದೆ ಎಂದು ಗಮನಿಸಿದೆ. 2025–26ರಲ್ಲಿ 4000 ಕೋಟಿ ರೂ.ಮೌಲ್ಯದ ಎರಡು ರಫ್ತು ಆದೇಶಗಳಿಗೆ ಸಹಿ ಹಾಕುವ ಮೂಲಕ ಬ್ರಹ್ಮೋಸ್ ಏರೋಸ್ಪೇಸ್ ವಿಶ್ವ ಮಾರುಕಟ್ಟೆಯಲ್ಲಿ ತನ್ನ ಹೆಜ್ಜೆಗುರುತನ್ನು ಸ್ಥಿರವಾಗಿ ಬೆಳೆಸುತ್ತಿದೆ, ಪ್ರಧಾನಿ ನಿಗದಿಪಡಿಸಿದ ಗಣನೀಯ ರಕ್ಷಣಾ ರಫ್ತು ಗುರಿಯನ್ನು ತಲುಪಿದೆ.

## ಬೆಂಗಳೂರು, ಮಂಗಳೂರು, ಮೈಸೂರಿನಲ್ಲಿ ಡೇಟಾ ಪಾರ್ಕ್

- ಅಧಿಕಾರಿಗಳೊಂದಿಗೆ ಸಚಿವರಾದ ಕೆ.ಜೆ. ಜಾರ್ಜ್, ಎಂ ಬಿ ಪಾಟೀಲ್, ಪ್ರಿಯಾಂಕ್ ಖರ್ಗೆ ನಡೆಸಿದ ಸಭೆಯಲ್ಲಿ ತೀರ್ಮಾನ

**ಬೆಂಗಳೂರು, ಏ.30:** ರಾಜ್ಯದಲ್ಲಿ ಕೈಗಾರಿಕಾ ಬೆಳವಣಿಗೆಗೆ ಸುಸ್ಥಿರ ಡೇಟಾ ಕೇಂದ್ರಗಳು (ಸಸ್ಟೇನಬಲ್ ಡೇಟಾ ಸೆಂಟರ್ಸ್) ಅಗತ್ಯವಿದ್ದು ಬೆಂಗಳೂರು, ಮೈಸೂರು ಮತ್ತು ಮಂಗಳೂರಿನಲ್ಲಿ ಡೇಟಾ ಪಾರ್ಕ್ ಸ್ಥಾಪಿಸಲು ನಡೆದ ಸಂಬಂಧಿತ ಸಚಿವರ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ನಗರದ ಶಕ್ತಿಭವನದಲ್ಲಿ ನಡೆದ ಈ ಪ್ರಾಥಮಿಕ ಸಭೆಯಲ್ಲಿ ಇಂಧನ ಸಚಿವ ಕೆ.ಜೆ ಜಾರ್ಜ್, ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಮತ್ತು ಐಟಿ ಸಚಿವ ಪ್ರಿಯಾಂಕ್ ಖರ್ಗೆ ಪಾಲ್ಗೊಂಡಿದ್ದರು.

ಬೆಂಗಳೂರಿನಲ್ಲಿ ಹೊಸಕೋಟೆಯ ಸಮೀಪ 500 ಮೆಗಾವ್ಯಾಟ್ ಸಾಮರ್ಥ್ಯದ ಸುಸ್ಥಿರ ಡೇಟಾ ಕೇಂದ್ರ ಪಾರ್ಕ್ ಸ್ಥಾಪಿಸಲಾಗುವುದು. ಪಾವಗಡದಿಂದ ಪೂರೈಕೆಯಾಗುವ ಸೌರ ವಿದ್ಯುತ್ ನೇರವಾಗಿ ಇಲ್ಲಿಗೆ ತಲುಪುತ್ತದೆ. ಜತೆಗೆ ಬೆಂಗಳೂರು ಜಲಮಂಡಳಿಯು ಎರಡು ಹಂತಗಳಲ್ಲಿ ಸಂಸ್ಕರಿಸಿದ 60 ಎಂ.ಎಲ್.ಡಿ ನೀರು ಪೂರೈಕೆಗೆ ತೊಂದರೆ ಇಲ್ಲ ಎಂದು ತಿಳಿಸಿದೆ. ಸ್ವತಃ ಉದ್ಯಮಗಳೇ ಈ ನೀರಿನ ಮೂರನೇ ಹಂತದ ಶುದ್ಧೀಕರಣ ಮಾಡಿಕೊಳ್ಳುತ್ತವೆ. ಈ ಮೂರೂ ಪಾರ್ಕುಗಳ ಒಟ್ಟು ಸಾಮರ್ಥ್ಯ 1,000 ಮೆಗಾವ್ಯಾಟ್ ಇರಲಿದೆ ಎಂದು ಸಚಿವರು ಹೇಳಿದ್ದಾರೆ. ಮಂಗಳೂರಿನಲ್ಲಿ ಕೂಡ ಡೇಟಾ ಪಾರ್ಕ್ ಸ್ಥಾಪನೆಗೆ ಭೂಮಿಯು ಲಭ್ಯವಿದೆ. ಅಲ್ಲಿನ ಬೈಕಂಪಾಡಿ ಕೈಗಾರಿಕಾ ಪ್ರದೇಶದಲ್ಲಿ ಕೆಐಎಡಿಬಿಗೆ ಸೇರಿದ 350 ಎಕರೆ ಇದೆ. ಮೈಸೂರಿನಲ್ಲಿ ಈ ಉದ್ದೇಶಕ್ಕೆ ಸೂಕ್ತ ಜಾಗ ಗುರುತಿಸಲಾಗುವುದು ಎಂದು ಅವರು ವಿವರಿಸಿದ್ದಾರೆ.

ಈ ಪಾರ್ಕ್ ಗಳಲ್ಲಿ ಯಾರೇ ಬಂದ ಡಾಟಾ ಸೆಂಟರ್ ಸ್ಥಾಪನೆಗೆ ಹೂಡಿಕೆ ಮಾಡಿದರೆ ಅವರಿಗೆ ವಿದ್ಯುತ್ ಮತ್ತು ನೀರು ನೀಡಲಾಗುವುದು. ಇದಕ್ಕೆ ಪೂರಕವಾದ ಸಿದ್ಧತೆ ಮಾಡಿಕೊಳ್ಳಲು ಮೂವರು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು. ಸದ್ಯದಲ್ಲೇ ಹೂಡಿಕೆದಾರರ ಜತೆಗೂ ಸಭೆ ಮಾಡಲು ಸಚಿವರು ಸಲಹೆ ನೀಡಿದರು.

ಮುಂದಿನ ಹಂತದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೂ ಇರುವ ಸಚಿವರ ತಂಡವನ್ನೂ ಮತ್ತು ಉನ್ನತ ಅಧಿಕಾರಿಗಳ ತಂಡವನ್ನೂ ಈ ಸಂಬಂಧ ರಚಿಸಲಾಗುವುದು. ಒಟ್ಟಿನಲ್ಲಿ ತ್ವರಿತವಾಗಿ ಈ ಡೇಟಾ ಪಾರ್ಕುಗಳನ್ನು ಸ್ಥಾಪಿಸಲಾಗುವುದು ಎಂದು ಅವರು ನುಡಿದಿದ್ದಾರೆ.

ಇಂಧನ ಮತ್ತು ಜಲಸಂಪನ್ಮೂಲ ಇಲಾಖೆ ಕಾರ್ಯದರ್ಶಿ ಗೌರವ್ ಗುಪ್ತ, ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಐಟಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮಂಜುಳಾ, ಕೆಎಸ್‌ಐಐಡಿಸಿ ವ್ಯವಸ್ಥಾಪಕ ನಿರ್ದೇಶಕಿ ಖುಷ್ಬು ಗೋಯಲ್, ಕೆಐಎಡಿಬಿ ಆಯುಕ್ತ ಡಾ.ಮಹೇಶ್, ಬೆಂಗಳೂರು ಜಲ ಮಂಡಳಿಯ ಅಧ್ಯಕ್ಷ ರಾಮಮನೋಹರ್ ಪ್ರಸಾದ್, ಐಟಿ ನಿರ್ದೇಶಕ ರಾಹುಲ್ ಸಂಕನೂರು ಭಾಗವಹಿಸಿದ್ದರು.

## ವಿದ್ಯಾರ್ಥಿಗಳು, ಪೋಷಕರು ಒಪ್ಪಿದರೆ ಮರುಪರೀಕ್ಷೆ: ಸಚಿವ ಎಂ.ಸಿ.ಸುಧಾಕರ್




**ಬೆಂಗಳೂರು, ಏ.30:** ವೃತ್ತಿಪರ ಕೋರ್ಸ್‌ಗಳ ಪ್ರವೇಶ ಪರೀಕ್ಷೆ ಸಿಇಟಿ ಪರೀಕ್ಷೆ ವೇಳೆ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಜನಿವಾರ ತೆಗೆಸಿದ ವಿದ್ಯಾರ್ಥಿಗಳಿಗೆ ಮತ್ತೊಂದು ಅವಕಾಶ ನೀಡಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ. ಈ ಬಗ್ಗೆ ಉನ್ನತ ಶಿಕ್ಷಣ ಸಚಿವ ಸುಧಾಕರ್ ಮಾಹಿತಿ ನೀಡಿದ್ದಾರೆ.

ಸಿಇಟಿ ಪರೀಕ್ಷೆ ವೇಳೆ ಕೆಲ ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಿಗೆ ಜನಿವಾರ ತೆಗೆಸಿದ ಪ್ರಕರಣ ನಡೆದಿತ್ತು. ಜನಿವಾರ ತೆಗೆಸಿದ ವಿದ್ಯಾರ್ಥಿಗಳಿಗೆ ಮರುಪರೀಕ್ಷೆಗೆ ಅವಕಾಶ ನೀಡಲಾಗುವುದು. ವಿದ್ಯಾರ್ಥಿಗಳು, ಪೋಷಕರು ಒಪ್ಪಿದರೆ ಅಂತಹ ವಿದ್ಯಾರ್ಥಿಗಳಿಗೆ ಮರು ಪರೀಕ್ಷೆಗೆ ಅವಕಾಶ ಕೊಡಲಾಗುವುದು ಎಂದು ತಿಳಿಸಿದ್ದಾರೆ.

ಬೆಂಗಳೂರಿನ ಮಡಿವಾಳ ಬಳಿಯ ಕೃಪಾನಿಧಿ ಕಾಲೇಜು ಹಾಗೂ ಚಿಕ್ಕಬಳ್ಳಾಪುರದ ಪರೀಕ್ಷಾ ಕೇಂದ್ರದಲ್ಲಿ ಸಿಇಟಿ ಪರೀಕ್ಷೆಗೆ ಬಂದಿದ್ದ ವಿದ್ಯಾರ್ಥಿಗಳಿಗೆ ಪರೀಕ್ಷಾ ಕೇಂದ್ರದ ಸಿಬ್ಬಂದಿ ಜನಿವಾರ ತೆಗೆಸಿ ಪರೀಕ್ಷೆ ಬರೆಸಿದ್ದರು. ಇನ್ನು ಚಿಕ್ಕಬಳ್ಳಾಪುರ ಪರೀಕ್ಷಾ ಕೇಂದ್ರದಲ್ಲಿ ಓರ್ವ ವಿದ್ಯಾರ್ಥಿನಿಗೆ ಹಿಜಾಬ್ ಧರಿಸಲು ಅವಕಾಶ ನಿರಾಕರಿಸಲಾಗಿತ್ತು. ಇದರಿಂದಾಗಿ ಆ ವಿದ್ಯಾರ್ಥಿನಿ ಭೌತಶಾಸ್ತ್ರ ಪರೀಕ್ಷೆ ಬರೆದಿರಲಿಲ್ಲ. ಹಾಗಾಗಿ ಈ ಎಲ್ಲಾ ವಿದ್ಯಾರ್ಥಿಗಳಿಗೆ ಸಿಇಟಿ ಮರು ಪರೀಕ್ಷೆಗೆ ಅವಕಾಶ ನೀಡಲು ಚಿಂತನೆ ನಡೆಸಲಾಗಿದೆ. ವಿದ್ಯಾರ್ಥಿಗಳು ಹಾಗೂ ಪೋಷಕರು ಒಪ್ಪಿದ್ದಲ್ಲಿ ಮರುಪರೀಕ್ಷೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದರು. ಗೊಂದಲ ಉಂಟಾಗಿದ್ದರಿಂದ ಮತ್ತೊಮ್ಮೆ ಪರೀಕ್ಷೆ ಬರೆಯಲು ಅವಕಾಶ ನೀಡುವಂತೆಯೂ ಒತ್ತಾಯ ಬಂದಿತ್ತು. ಈ ಹಿನ್ನೆಲೆಯಲ್ಲಿ ಮರು ಪರೀಕ್ಷೆಗೆ ಅವಕಾಶ ನೀಡಲು ನಿರ್ಧರಿಸಿದೆ.

## ಸಬ್ ರಿಜಿಸ್ಟ್ರಾರ್‌ಗಳ ವರ್ಗಾವಣೆಗೆ ಕೌನ್ಸೆಲಿಂಗ್: ಕೃಷ್ಣ ಬೈರೇಗೌಡ



- ಭ್ರಷ್ಟಾಚಾರ ಮತ್ತು ಹಸ್ತಕ್ಷೇಪಕ್ಕೆ ಮುಕ್ತಿ ಹಾಡಲು ಕ್ರಮ

**ಬೆಂಗಳೂರು, ಏ.30:** ದಶಕಗಳಿಂದಲೂ ಉಪ ನೋಂದಣಾಧಿಕಾರಿಗಳ ವರ್ಗಾವಣೆ ಎಂದರೆ ಅಲ್ಲಿ ಪ್ರಭಾವಿಗಳ ಹಸ್ತಕ್ಷೇಪ ಮತ್ತು ಅನುಮಾನದ ನೆರಳು ಇದ್ದೇ ಇರುತ್ತಿತ್ತು. ಆದರೆ, ಈ ವ್ಯವಸ್ಥೆಯಲ್ಲಿನ ಭ್ರಷ್ಟಾಚಾರ ಮತ್ತು ಹಸ್ತಕ್ಷೇಪಕ್ಕೆ ಮುಕ್ತಿ ಹಾಡಲು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಕೌನ್ಸೆಲಿಂಗ್ ಆಧಾರಿತ ವರ್ಗಾವಣೆ' ಎಂಬ ಹೊಸ ಪಾರದರ್ಶಕ ವ್ಯವಸ್ಥೆಯನ್ನು ಜಾರಿಗೆ ತಂದಿದ್ದಾರೆ.

ವರ್ಗಾವಣೆ ಪ್ರಕ್ರಿಯೆಯನ್ನು ತೀವ್ರ ಅನುಮಾನದಿಂದ ನೋಡಲಾಗುತ್ತಿತ್ತು. ಇದನ್ನು ಹೋಗಲಾಡಿಸಲು BMRDA ಮತ್ತು ನಗರ ನಿಗಮಗಳಲ್ಲಿನ ಎಲ್ಲಾ ಉಪ–ನೋಂದಣಾಧಿಕಾರಿಗಳ ವರ್ಗಾವಣೆ ಪ್ರಭಾವವಿಲ್ಲದ ಮತ್ತು ಯಾರದ್ದೂ ಹಸ್ತಕ್ಷೇಪವಿಲ್ಲದ ಕೌನ್ಸೆಲಿಂಗ್ ವ್ಯವಸ್ಥೆಯಡಿ ತರಲಾಗಿದೆ. ಲಭ್ಯವಿರುವ ಖಾಲಿ ಹುದ್ದೆಗಳನ್ನು ತೋರಿಸಲಾಗುತ್ತದೆ ಮತ್ತು ತಮಗೆ ಬೇಕಾದ ಪೋಸ್ಟಿಂಗ್ ಆಯ್ಕೆ ಮಾಡಿಕೊಳ್ಳುವ ಅವಕಾಶ ನೀಡಲಾಗುತ್ತದೆ.


ಈ ಪ್ರಕ್ರಿಯೆಯು 2 ವರ್ಷಗಳ ಹಿಂದೆಯೇ ಆರಂಭವಾಗಿದ್ದು, 2024ರಲ್ಲಿ ಪ್ರಾಯೋಗಿಕವಾಗಿ ಯಶಸ್ಸು ಕಂಡಿದೆ. ನಗರಗಳಲ್ಲಿ ಹೆಚ್ಚು ವರ್ಷ ಸೇವೆ ಸಲ್ಲಿಸಿದ 33 ಅಧಿಕಾರಿಗಳನ್ನು 2024ರಲ್ಲಿ ಕಡ್ಡಾಯವಾಗಿ ವರ್ಗಾವಣೆ ಮಾಡಿ ಕೌನ್ಸೆಲಿಂಗ್ ಮೂಲಕ ಹೊಸ ಪೋಸ್ಟಿಂಗ್ ನೀಡಲಾಗಿತ್ತು. ಮುಕ್ತ ಮತ್ತು ಪಾರದರ್ಶಕ ಪ್ರಕ್ರಿಯೆಯ ಮೂಲಕ ಒಟ್ಟು 90 ಅಧಿಕಾರಿಗಳನ್ನು ವರ್ಗಾಯಿಸಲಾಯಿತು. 2024ರಲ್ಲಿ ಒಂದು ಬಾರಿಯ ಕ್ರಮವಾಗಿದ್ದ ಈ ವ್ಯವಸ್ಥೆಯನ್ನು ಈಗ 'ನಿಯಮಿತ ಮತ್ತು ಶಾಶ್ವತ' ವ್ಯವಸ್ಥೆಯಾಗಿ ಮಾಡಲು ಸರ್ಕಾರವು ನಿಯಮಗಳಿಗೆ ತಿದ್ದುಪಡಿ ತಂದಿದೆ. ಇನ್ಮುಂದೆ ಪ್ರತಿ ವರ್ಷ ಈ ಪ್ರಕ್ರಿಯೆ ನಡೆಯಲಿದೆ.

ಪ್ರಮುಖ ನಗರ ಪ್ರದೇಶಗಳಲ್ಲಿ 5 ವರ್ಷಗಳನ್ನು ಪೂರ್ಣಗೊಳಿಸಿದ ಅಧಿಕಾರಿಗಳನ್ನು ಕಡ್ಡಾಯವಾಗಿ ನಗರೇತರ ಪ್ರದೇಶಗಳಿಗೆ ವರ್ಗಾಯಿಸಲಾಗುತ್ತದೆ. ನಗರ ಪ್ರದೇಶಗಳಲ್ಲಿನ ಖಾಲಿ ಹುದ್ದೆಗಳನ್ನು ಕೌನ್ಸೆಲಿಂಗ್ ಮೂಲಕ ಮಾತ್ರ ಭರ್ತಿ ಮಾಡಲಾಗುತ್ತದೆ.ಈ ಪಾರದರ್ಶಕ ವ್ಯವಸ್ಥೆಯಿಂದ ಅಧಿಕಾರಿಗಳು ವರ್ಗಾವಣೆಗಾಗಿ ರಾಜಕಾರಣಿಗಳ ಅಥವಾ ಪ್ರಭಾವಿಗಳ ಹಿಂದೆ ಬೀಳುವ ಹೊರೆ ತಪ್ಪಲಿದೆ. ಇದು ಇಲಾಖೆಯಲ್ಲಿ ಸಕಾರಾತ್ಮಕ ಕೆಲಸದ ವಾತಾವರಣವನ್ನು ಸೃಷ್ಟಿಸುವುದಲ್ಲದೆ, ಅರ್ಹ ಅಧಿಕಾರಿಗಳಿಗೆ ನ್ಯಾಯಯುತವಾಗಿ ಪೋಸ್ಟಿಂಗ್ ದೊರೆಯುವಂತೆ ಮಾಡುತ್ತದೆ ಎಂದು ಕೃಷ್ಣ ಬೈರೇಗೌಡ ವಿಶ್ವಾಸ ವ್ಯಕ್ತಪಡಿಸಿದ್ದಾರೆ

ಕಂದಾಯ ಇಲಾಖೆಯಲ್ಲಿ ತರಲಾಗಿರುವ ಈ ಸುಧಾರಣೆಯು ಆಡಳಿತದಲ್ಲಿ ಪಾರದರ್ಶಕತೆ ಮತ್ತು ಜವಾಬ್ದಾರಿಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ದೊಡ್ಡ ಹೆಜ್ಜೆಯಾಗಿದೆ. ಇದು ಸಾರ್ವಜನಿಕ ಸೇವೆ ಮತ್ತು ಆಡಳಿತ ಸುಧಾರಣೆಯ ಮಾದರಿಯಾಗಿ ಹೊರಹೊಮ್ಮುತ್ತಿದೆ

## ಇವಿಎಂ ತಿರುಚಿದ ಆರೋಪ

**ಕೋಲ್ಕತ್ತಾ, ಏ.30:** ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ ಮತ್ತು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಗುರುವಾರ ಕೋಲ್ಕತ್ತಾದ ಸಖಾವತ್ ಮೆಮೋರಿಯಲ್ ಶಾಲೆಯಲ್ಲಿನ ಭಬಾನಿಪುರ ವಿಧಾನಸಭಾ ಕ್ಷೇತ್ರದ ಎಣಿಕೆ ಕೇಂದ್ರಕ್ಕೆ ಭೇಟಿ ನೀಡಿದರು



- ಭಬಾನಿಪುರದ ಸ್ಟ್ರಾಂಗ್ ರೂಮ್‌ಗೆ ದೌಡಾಯಿಸಿದ ಮಮತಾ ಬ್ಯಾನರ್ಜಿ!

ವಿದ್ಯುನ್ಮಾನ ಮತ ಯಂತ್ರಗಳ (ಇವಿಎಂ) ತಿರುಚಲಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು. ಧಾರಾಕಾರವಾಗಿ ಸುರಿಯುತ್ತಿದ್ದ ಮಳೆಯನ್ನು ಲೆಕ್ಕಿಸದೇ ಸಂಜೆ ಶಾಲೆ ಆವರಣಕ್ಕೆ ಆಗಮಿಸಿದ ಮಮತಾ ಬ್ಯಾನರ್ಜಿ, ತಮ್ಮ ಚುನಾವಣಾ ಏಜೆಂಟ್ ಜೊತೆಗೆ ಸ್ಟ್ರಾಂಗ್ ರೂಮ್ ಒಳಗೆ ಕೆಲಹೊತ್ತು ಇದ್ದರು. ಕೋಲ್ಕತ್ತಾ ಮೇಯರ್ ಮತ್ತು ಕೋಲ್ಕತ್ತಾ ಬಂದರು ವಿಭಾಗದ ಟಿಎಂಸಿ ಅಭ್ಯರ್ಥಿ ಫಿರ್ಹಾದ್ ಹಕೀಮ್ ಸ್ಥಳಕ್ಕೆ ತಲುಪಿದರು. ಈ ಮಧ್ಯೆ ಉತ್ತರ ಕೋಲ್ಕತ್ತಾದಲ್ಲಿ ಉದ್ವಿಗ್ನತೆ ಉಂಟಾಗಿದೆ ಎಂದು ವರದಿಯಾಗಿದೆ. ಟಿಎಂಸಿ ಅಭ್ಯರ್ಥಿಗಳಾದ ಕುನಾಲ್ ಘೋಷ್ ಮತ್ತು ಶಶಿ ಪಂಜಾ ಅವರು ಖುದಿರಾಮ್ ಅನುಶೀಲನ ಕೇಂದ್ರದ ಹೊರಗೆ ಧರಣಿ ನಡೆಸಿ, ಇವಿಎಂಗಳ ಸಂಗ್ರಹಣೆಯಲ್ಲಿ ಅಕ್ರಮಗಳು ನಡೆದಿವೆ ಎಂದು ಆರೋಪಿಸಿ ಪ್ರತಿಭಟನೆ ನಡೆಸಿದರು. ಪಕ್ಷದ ನಾಯಕರು, ಕಾರ್ಯಕರ್ತರು ಮತ್ತು ಮತಗಟ್ಟೆ ಏಜೆಂಟ್‌ಗಳ ಇವಿಎಂ ಸ್ಟ್ರಾಂಗ್ ರೂಮ್‌ಗಳ ಮೇಲೆ ನಿಗಾ ಇಡುವಂತೆ ಬ್ಯಾನರ್ಜಿ ಒತ್ತಾಯಿಸಿದ್ದರು. ಮತ ಎಣಿಕೆಗೆ ಮುನ್ನ ಬಿಜೆಪಿ ಯಂತ್ರಗಳನ್ನು ತಿರುಚುವ ಸಾಧ್ಯತೆ ಇದೆ ಎಂದು ಆರೋಪಿಸಿದ್ದಾರೆ.

## ವಿಸ್ತರಿತ ಶ್ರೀನಗರ-ಜಮ್ಮು ವಂದೇ ಭಾರತ್ ರೈಲಿಗೆ ಹಸಿರು ನಿಶಾನೆ

**ವಿಸ್ತರಿತ ಹಸಿರು ನಿಶಾನೆ ತೋರಿದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್**

**ಜಮ್ಮು, ಏ.30:** ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಜಮ್ಮು ತಾವಿ ರೈಲ್ವೆ ನಿಲ್ದಾಣದಿಂದ ವಿಸ್ತರಿತ ಶ್ರೀನಗರ–ಜಮ್ಮು ವಂದೇಭಾರತ್ ಎಕ್ಸ್‌ಪ್ರೆಸ್ ಹಸಿರು ನಿಶಾನೆ ತೋರಿಸಿದರು. ಈ ಹಿಂದೆ ಶ್ರೀನಗರದಿಂದ ಶ್ರೀ ಮಾತಾ ವೈಷ್ಣೋ ದೇವಿ ಕತ್ರಾ ವರೆಗೆ ಮಾತ್ರ ಸಂಚರಿಸುತ್ತಿದ್ದ ಈ ವಂದೇಭಾರತ್ ರೈಲು ಈಗ ಜಮ್ಮುತಾವಿವರೆಗೆ ವಿಸ್ತರಣೆಗೊಂಡಿದೆ.

ಇದರಿಂದಾಗಿ ದೇಶದ ಅತ್ಯಾಧುನಿಕ ರೈಲು ಜಮ್ಮು–ಕಾಶ್ಮೀರದ ಅತಿದೊಡ್ಡ ನಗರ ಮತ್ತು ರೈಲ್ವೆ ಹಬ್ ಆದ ಜಮ್ಮುಗೆ ನೇರವಾಗಿ ಸಂಪರ್ಕವನ್ನು ಹೊಂದುತ್ತಿದೆ. ರೈಲು ಚಲಾವಣೆಯ ನಂತರ ಸಚಿವರು ಉಧಮ್ಪುರ–ಶ್ರೀನಗರ–ಬಾರಾಮುಲ್ಲಾ ರೈಲು ಸಂಪರ್ಕ ಯೋಜನೆಯ ಪ್ರಮುಖ ಎರಡು ಎಂಜಿನಿಯರಿಂಗ್ ಕಟ್ಟಡಗಳಾದ ಅಂಜಿ ಸೇತುವೆ ಮತ್ತು ಚೆನಾಬ್ ಸೇತುವೆಗಳನ್ನು ಪರಿಶೀಲಿಸಲಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು 2025 ಜೂನ್ 6ರಂದು 8 ಬೋಗಿಗಳೊಂದಿಗೆ ಈ ರೈಲನ್ನು ಉದ್ಘಾಟಿಸಿದ್ದರು. ಆರಂಭದಿಂದಲೇ ರೈಲು ಪೂರ್ಣ ಸಾಮರ್ಥ್ಯದಲ್ಲಿ ಓಡುತ್ತಿದ್ದು, ಪ್ರಯಾಣಿಕರಿಂದ ಅಪಾರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬೇಡಿಕೆ ಹೆಚ್ಚಾದ ಹಿನ್ನೆಲೆಯಲ್ಲಿ ರೈಲನ್ನು 20 ಬೋಗಿಗಳಿಗೆ ವಿಸ್ತರಿಸಲಾಗಿದೆ. ಇದರಿಂದ ಸೀಟು ಸಾಮರ್ಥ್ಯವು ದ್ವಿಗುಣಗೊಂಡಿದ್ದು, ಮುಂಗಡ ಕಾಯ್ದಿರಿಸುವಿಕೆ ಮತ್ತು ವೇಟಿಂಗ್ ಲಿಸ್ಟ್‌ನಲ್ಲಿ ಒತ್ತಡ ಗಣನೀಯವಾಗಿ ಕಡಿಮೆಯಾಗಲಿದೆ.

ತೀರ್ಥಯಾತ್ರಿಕರು, ಪ್ರವಾಸಿಗರು ಮತ್ತು ಸ್ಥಳೀಯರಿಗೆ ಇದು ದೊಡ್ಡ ಸೌಲಭ್ಯವಾಗಿದೆ. ಈಗ ವಿಸ್ತರಿತ ಜಮ್ಮುತಾವಿ–ಶ್ರೀನಗರ ವಂದೇ ಭಾರತ್ ಎಕ್ಸ್‌ಪ್ರೆಸ್ ನಿಯಮಿತ ಸೇವೆಯು ಮೇ 2, 2026ರಿಂದ ಪ್ರಾರಂಭವಾಗಲಿದೆ. ಸುಮಾರು 266 ಕಿಲೋಮೀಟರ್ ದೂರದ ಈ ಮಾರ್ಗದಲ್ಲಿ ಎರಡು ಜೋಡಿ ಸೇವೆಗಳು ನಡೆಯಲಿವೆ. ಈ ವಿಸ್ತರಣೆಯು ಜಮ್ಮು–ಕಾಶ್ಮೀರದಲ್ಲಿ ರೈಲು ಸಂಪರ್ಕವನ್ನು ಮತ್ತಷ್ಟು ಬಲಪಡಿಸುವುದರ ಜೊತೆಗೆ, ಪ್ರವಾಸೋದ್ಯಮ ಮತ್ತು ತೀರ್ಥಯಾತ್ರೆಯನ್ನು ಉತ್ತೇಜಿಸುವ ನಿರೀಕ್ಷೆಯಿದೆ.



# ನರ್ಮದಾ ನದಿಯಲ್ಲಿ ಪ್ರವಾಸಿಗರ ದೋಣಿ ಮಗುಚಿ 7 ಸಾವು

ಜಬಲ್ಪುರ (ಮಧ್ಯಪ್ರದೇಶ), ಏ.30 ಏಕಾಏಕಿ ಬಿರುಗಾಳಿ ಬೀಸಿದ್ದರಿಂದ ನರ್ಮದಾ ನದಿಯಲ್ಲಿ ಪ್ರವಾಸಿಗರಿದ್ದ ಕ್ರೂಸ್ ದೋಣಿ ಮುಳುಗಿ ಏಳು ಜನ ಮೃತಪಟ್ಟು, ಹಲವರು ನಾಪತ್ತೆಯಾಗಿರುವ ಘಟನೆ ಜಬಲ್ಪುರ ಜಿಲ್ಲೆಯ ಬರಗಿ ಅಣೆಕಟ್ಟೆಯ ಬಳಿ ಗುರುವಾರ ಸಂಭವಿಸಿದೆ.

40 ಪ್ರಯಾಣಿಕರಿದ್ದ ದೋಣಿ ಬಿರುಗಾಳಿಯಿಂದ ನದಿಯಲ್ಲಿ ಮುಳುಗಿ ಅವಘಡ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.



ಘಟನೆಯ ಬೆನ್ನಲ್ಲೇ ರಕ್ಷಣಾ ಕಾರ್ಯಾಚರಣೆ ಆರಂಭಿಸಿ, 18 ಜನರನ್ನು ರಕ್ಷಿಸಿದ್ದೇವೆ. ಆದರೆ ಇನ್ನೂ 15–18 ಜನರು ನಾಪತ್ತೆಯಾಗಿದ್ದಾರೆ ಎಂದು ಪೊಲೀಸ್ ವರಿಷ್ಠಾಧಿಕಾರಿ (ಬರಗಿ ಪಟ್ಟಣ) ಅಂಜುಲ್ ಮಿಶ್ರಾ ಮಾಹಿತಿ ನೀಡಿದ್ದಾರೆ.

ಸಿಎಂ ಸಂತಾಪ: ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ದುರಂತದ ಬಗ್ಗೆ ದುಃಖ ವ್ಯಕ್ತಪಡಿಸಿದ್ದು, ರಕ್ಷಣಾ ಕಾರ್ಯವನ್ನು ತ್ವರಿತಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ಭಾರತೀಯ ಕರಾವಳಿ ರಕ್ಷಣಾ ಪಡೆ ಗುರುವಾರ ನವದೆಹಲಿಯ ಕರಾವಳಿ ರಕ್ಷಣಾ ಪಡೆ ಪ್ರಧಾನ ಕಚೇರಿಯಲ್ಲಿ M/S ಫಿನ್‌ಕಾಂಟಿಯೇರಿಯ ಹಿರಿಯ ಪ್ರತಿನಿಧಿಗಳನ್ನು ಒಳಗೊಂಡಂತೆ ಇಟಾಲಿಯನ್ ನಿಯೋಗವನ್ನು ಭೇಟಿಮಾಡಿತ್ತು.

# ದ್ವೇಷ ಭಾಷಣ: 7 ಪ್ರಮುಖ ಪ್ರಕರಣ ವಜಾಗೊಳಿಸಿದ ಸುಪ್ರೀಂ

**ನವದೆಹಲಿ, ಏ. 30:** ಚುನಾವಣಾ ಪ್ರಚಾರ, ದೃಶ್ಯ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಬಹುಕಾಲದಿಂದ ಸದ್ದು ಮಾಡಿದ್ದ ದ್ವೇಷಭಾಷಣದ 7 ಪ್ರಮುಖ ಪ್ರಕರಣಗಳನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ. ಇಂತಹ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ನಿಭಾಯಿಸಲು ಸದ್ಯ ಇರುವ ಅಪರಾಧಿಕ ಕಾನೂನುಗಳೇ ಸಾಕಷ್ಟು ಶಕ್ತವಾಗಿವೆ. ಹೊಸ ಅಪರಾಧಗಳನ್ನು ಸೃಷ್ಟಿಸುವುದು ಅಥವಾ ಕಾನೂನು ರೂಪಿಸುವುದು ನ್ಯಾಯಾಲಯದ ಕೆಲಸವಲ್ಲ ಎಂದು ನ್ಯಾಯಮೂರ್ತಿಗಳಾದ ವಿಕ್ರಮ್‌ನಾಥ್ ಮತ್ತು ಸಂದೀಪ್ ಮೆಹ್ತಾ ಅವರ ದ್ವಿಸದಸ್ಯ ಪೀಠ ಸ್ಪಷ್ಟಪಡಿಸಿದೆ.

ರಾಜಕೀಯ ನಾಯಕರಾದ ಅನುರಾಗ್ ಠಾಕೂರ್, ಪರ್ವೇಶ್ ವರ್ಮಾ ಅವರ ಗೋಲಿ ಮಾರೋ ಹಾಗೂ ಮಹಾರಾಷ್ಟ್ರ ಶಾಸಕ ನಿತೇಶ್ ರಾಣೆ ವಿರುದ್ಧದ ದ್ವೇಷ ಭಾಷಣ ಪ್ರಕರಣಗಳು ಸಾಕ್ಷ್ಯಾಧಾರಗಳ




ಕೊರತೆ ಮತ್ತು ಕಾನೂನು ಪ್ರಕ್ರಿಯೆ ಪಾಲಿಸದ ಕಾರಣಕ್ಕೆ ವಜಾಗೊಂಡಿವೆ. ದೂರುದಾರರು ಮೊದಲು ಕಡ್ಡಾಯವಾಗಿ ಸ್ಥಳೀಯ ಪೊಲೀಸರನ್ನು ಸಂಪರ್ಕಿಸದೆ, ಏಕಾಏಕಿ ನೇರವಾಗಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದನ್ನು ಪೀಠವು ತೀವ್ರವಾಗಿ ಆಕ್ಷೇಪಿಸಿದೆ.

ಕೋವಿಡ್–19 ಸಾಂಕ್ರಾಮಿಕದ ವಿಪತ್ತಿನ ಸಮಯದಲ್ಲಿ ದಾಖಲಾಗಿದ್ದ ಕೊರೊನಾ ಜಿಹಾದ್ ಹ್ಯಾಶ್‌ಟ್ಯಾಗ್ ವಿವಾದ ಹಾಗೂ ನಿಜಾಮುದ್ದೀನ್ ತಬ್ಲೀಘಿ ಜಮಾತ್ ಘಟನೆಗೆ ಸಂಬಂಧಿಸಿದ ಪ್ರಚೋದನಕಾರಿ ಮಾಧ್ಯಮ ವರದಿಗಳ ವಿರುದ್ಧದ ಅರ್ಜಿಗಳನ್ನು ನ್ಯಾಯಾಲಯ ಕೈಬಿಟ್ಟಿದೆ. ಈ ಹಳೆಯ ವಿಷಯಗಳು ಕಾಲಕ್ರಮೇಣ ಸಂಪೂರ್ಣವಾಗಿ ತಮ್ಮ ಪ್ರಸ್ತುತತೆಯನ್ನು ಕಳೆದುಕೊಂಡಿವೆ ಎಂದು ಸುಪ್ರೀಂ ಕೋರ್ಟ್ ತನ್ನ ವಿವರವಾದ ತೀರ್ಪಿನಲ್ಲಿ ಸ್ಪಷ್ಟವಾಗಿ ಅಭಿಪ್ರಾಯಪಟ್ಟಿದೆ.

ಸುದರ್ಶನ ಟಿವಿಯಲ್ಲಿ ಪ್ರಸಾರವಾಗಿದ್ದ ಯುಪಿಎಸ್ಸಿ ಜಿಹಾದ್ ಕಾರ್ಯಕ್ರಮವನ್ನು ನಿರ್ಬಂಧಿಸುವಂತೆ ಕೋರಿದ್ದ ಮಹತ್ವದ ಅರ್ಜಿಯನ್ನೂ ನ್ಯಾಯಾಲಯ ಪುರಸ್ಕರಿಸಿಲ್ಲ. ದ್ವೇಷಪೂರಿತ ಕಾರ್ಯಕ್ರಮಗಳ ನಿಯಂತ್ರಣಕ್ಕೆ ಈಗಾಗಲೇ ವ್ಯವಸ್ಥೆಯಲ್ಲಿ ಶಾಸನಾತ್ಮಕ ಪರಿಹಾರಗಳು ಲಭ್ಯವಿವೆ. ಹೀಗಿರುವಾಗ ನ್ಯಾಯಾಲಯವು ಹೊಸದಾಗಿ ಸಮಾನಾಂತರ ನಿಯಂತ್ರಣ ವ್ಯವಸ್ಥೆಯನ್ನು ಸೃಷ್ಟಿಸಲು ಬರುವುದಿಲ್ಲ ಎಂದು ಪೀಠ ತಿಳಿಸಿದೆ.

ಹರಿದ್ವಾರದ ಧರ್ಮ ಸಂಸದ್ ಹಿಂಸಾಚಾರ ಪ್ರಚೋದನೆ ಸೇರಿದಂತೆ ದೇಶಾದ್ಯಂತ ನಡೆದ 55 ದ್ವೇಷ ಭಾಷಣದ ಘಟನೆಗಳ ಕುರಿತ ಸಗಟು ಅರ್ಜಿಗಳನ್ನು ನ್ಯಾಯಾಲಯ ತಿರಸ್ಕರಿಸಿದೆ. ಪ್ರತಿಯೊಂದು ಕ್ರಿಮಿನಲ್ ಪ್ರಕರಣವನ್ನೂ ನ್ಯಾಯಾಲಯದಿಂದ ನಿರಂತರವಾಗಿ ಮೇಲ್ವಿಚಾರಣೆ ಮಾಡಲು ಅಸಾಧ್ಯ. ಸ್ಥಳೀಯ ಠಾಣೆಗಳಿಗೆ ಅಧಿಕೃತವಾಗಿ ದೂರು ನೀಡದಿದ್ದಾಗ, ಅದು ಪೊಲೀಸರ ನ್ಯಾಯಾಂಗ ನಿಂದನೆಯಾಗುವುದಿಲ್ಲ ಎಂದು ಕೋರ್ಟ್ ಹೇಳಿದೆ.

ದ್ವೇಷ ಭಾಷಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ 267ನೇ ಕಾನೂನು ಆಯೋಗದ ವರದಿಯ ಆಧಾರದ ಮೇಲೆ, ಭವಿಷ್ಯದಲ್ಲಿ ಅಗತ್ಯ ಹೊಸ ಕಾನೂನುಗಳನ್ನು ರೂಪಿಸುವ ಹೊಣೆಯನ್ನು ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರದ ವಿವೇಚನೆಗೇ ಬಿಟ್ಟಿದೆ. ಸಮಾಜದಲ್ಲಿ ಸಹೋದರತೆ ಮತ್ತು ಪ್ರತಿಯೊಬ್ಬರ ಘನತೆಯನ್ನು ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಸಾಂವಿಧಾನಿಕ ಜವಾಬ್ದಾರಿ ಎಂದು ಎಚ್ಚರಿಸುವ ಮೂಲಕ ಪೀಠವು ಅರ್ಜಿಗಳನ್ನು ಇತ್ಯರ್ಥಪಡಿಸಿದೆ.

# ಪ್ರಧಾನಿ ನರೇಂದ್ರ ಮೋದಿ ಜಾತಿ ಸಮೀಕ್ಷೆಯನ್ನು ಮುಂದೂಡಲು ಬಯಸಿದ್ದಾರೆ: ಕಾಂಗ್ರೆಸ್ ಆರೋಪ



**ನವದೆಹಲಿ, ಏ.30:** ಕೇಂದ್ರ ಸರ್ಕಾರ ಜಾತಿ ಜನಗಣತಿಯನ್ನು ಘೋಷಿಸಿ ಒಂದು ವರ್ಷ ಕಳೆದಿದೆ, ಆದರೆ ಈ ಪ್ರಕ್ರಿಯೆಯು ಹೇಗೆ ಪೂರ್ಣಗೊಳ್ಳುತ್ತದೆ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ, ಪ್ರಧಾನಿ ನರೇಂದ್ರ ಮೋದಿ ಅವರು ಜಾತಿ ಸಮೀಕ್ಷೆಯನ್ನು ಮುಂದೂಡಲು ಬಯಸುತ್ತಾರೆ ಎಂದು ಕಾಂಗ್ರೆಸ್ ಪಕ್ಷ ಆರೋಪಿಸಿದೆ.

ಈ ಬಗ್ಗೆ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, ಒಂದು ವರ್ಷದ ಹಿಂದೆ ಈ ದಿನದಂದು ಮೋದಿ ಸರ್ಕಾರವು ಮುಂಬರುವ ಜನಗಣತಿಯಲ್ಲಿ ಜಾತಿ ಜನಗಣತಿಯನ್ನು ಸೇರಿಸಲಾಗುವುದು ಎಂದು ಘೋಷಿಸಿತ್ತು, ಪೂರ್ಣ ವರ್ಷ ಕಳೆದಿದೆ, ಆದರೆ ಜಾತಿ ಜನಗಣತಿಯನ್ನು ಹೇಗೆ ನಡೆಸಲಾಗುತ್ತದೆ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ ಎಂದರು.

ಈ ವಿಷಯದ ಬಗ್ಗೆ ವಿರೋಧ ಪಕ್ಷಗಳು, ರಾಜ್ಯ ಸರ್ಕಾರಗಳು ಅಥವಾ ತಜ್ಞರೊಂದಿಗೆ ಯಾವುದೇ ಸಮಾಲೋಚನೆ ನಡೆಸಲಾಗಿಲ್ಲ, ಕಾಂಗ್ರೆಸ್ ಅಧ್ಯಕ್ಷ ಖರ್ಗೆ ಅವರು ಮೇ 5, 2025 ರಂದು ಪ್ರಧಾನಿಗೆ ಈ ವಿಷಯದ ಬಗ್ಗೆ ಮತ್ತೊಂದು ಪತ್ರ ಬರೆದಿದ್ದರು, ಆದರೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ, ಆ ಪತ್ರದಲ್ಲಿ ಎತ್ತಲಾದ ವಿಷಯಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಅವರು ಹೇಳಿದರು. ಇತ್ತೀಚೆಗೆ ಮುಕ್ತಾಯಗೊಂಡ ಸಂಸತ್ತಿನ ವಿಶೇಷ ಅಧಿವೇಶನದ ನಂತರ, ಪ್ರಧಾನಿ ಜಾತಿ ಜನಗಣತಿಯನ್ನು ಮುಂದೂಡಲು ಉದ್ದೇಶಿಸಿದ್ದಾರೆ ಎಂಬುದು ಇನ್ನಷ್ಟು ಸ್ಪಷ್ಟವಾಗಿದೆ ಎಂದು ಅವರು ಹೇಳಿದ್ದಾರೆ.



ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಗುರುವಾರ ನವದೆಹಲಿಯ ಮಾಣೆಕ್ ಶಾ ಕೇಂದ್ರದಲ್ಲಿ ಇಟಲಿಯ ರಕ್ಷಣಾ ಸಚಿವ ಗೈಡೋ ಕ್ರೊಸೆಟ್ಟೊ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು.

# ಮತ ಎಣಿಕೆ: ರಾಜ್ಯ ನೌಕರರ ಕೈಬಿಟ್ಟದ್ದನ್ನು ಪ್ರಶ್ನಿಸಿದ್ದ ಅರ್ಜಿ ತೀರ್ಪು ಕಾಯ್ದಿರಿಸಿದ ಕೋರ್ಟ್

**ಕೊಲ್ಕತ್ತಾ, ಏ.30:** ಪಶ್ಚಿಮ ಬಂಗಾಳದಲ್ಲಿ ನಡೆಯುತ್ತಿರುವ ಚುನಾವಣೆಗಳ ಮತ ಎಣಿಕೆ ಪ್ರಕ್ರಿಯೆಯಲ್ಲಿ ಮೇಲ್ವಿಚಾರಕರ ಕರ್ತವ್ಯದಿಂದ ರಾಜ್ಯ ಸರ್ಕಾರಿ ನೌಕರರನ್ನು ಸಂಪೂರ್ಣವಾಗಿ ಹೊರಗಿಟ್ಟಿರುವ ಚುನಾವಣಾ ಆಯೋಗದ ಕ್ರಮವನ್ನು ಪ್ರಶ್ನಿಸಿ ಟಿಎಂಸಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಕಲ್ಕತ್ತಾ ಹೈಕೋರ್ಟ್, ಇದೀಗ ತನ್ನ ಅಂತಿಮ ಆದೇಶವನ್ನು ಕಾಯ್ದಿರಿಸಿದೆ.

ಮತ ಎಣಿಕೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆಯನ್ನು ಕಾಯ್ದುಕೊಳ್ಳುವ ಉದ್ದೇಶದಿಂದ, ಚುನಾವಣಾ ಆಯೋಗವು ಕೇಂದ್ರ ಸರ್ಕಾರಿ ನೌಕರರು ಮತ್ತು ಸಾರ್ವಜನಿಕ ವಲಯದ ಬ್ಯಾಂಕ್ ಸಿಬ್ಬಂದಿಗೆ ಮಾತ್ರ ಮತ ಎಣಿಕೆ ಮೇಲ್ವಿಚಾರಕರ ಹೊಣೆಗಾರಿಕೆ ನೀಡಲು ಇತ್ತೀಚೆಗೆ ನಿರ್ಧರಿಸಿತ್ತು. ಸ್ಥಳೀಯ ಆಡಳಿತದ ಪ್ರಭಾವ ತಡೆಯಲು ರಾಜ್ಯ ಸರ್ಕಾರದ ನೌಕರರನ್ನು ಈ ನಿರ್ದಿಷ್ಟ ಮತ್ತು ಸೂಕ್ಷ್ಮ ಕರ್ತವ್ಯದಿಂದ ಹೊರಗಿಟ್ಟು, ಕೇವಲ ಸಹಾಯಕರಾಗಿ ಮಾತ್ರ ಬಳಸಿಕೊಳ್ಳುವ ನಿಲುವನ್ನು ಆಯೋಗ ತಾಳಿತ್ತು.

ಚುನಾವಣಾ ಆಯೋಗದ ಈ ಏಕಪಕ್ಷೀಯ ನಿರ್ಧಾರವನ್ನು ತೀವ್ರವಾಗಿ ವಿರೋಧಿಸಿ ನ್ಯಾಯಾಲಯದ ಮೆಟ್ಟಿಲೇರಿರುವ ಆಡಳಿತಾರೂಢ ಟಿಎಂಸಿ, ಇದು ರಾಜ್ಯ ಸರ್ಕಾರಿ ನೌಕರರ ವಿರುದ್ಧದ ಅಸಮರ್ಥನೀಯ ತಾರತಮ್ಯ ಎಂದು ಆರೋಪಿಸಿದೆ. ನೌಕರರ ದಕ್ಷತೆ, ಪ್ರಾಮಾಣಿಕತೆ ಮತ್ತು ನಿಷ್ಠೆಯನ್ನು ಯಾವುದೇ ತಾರ್ಕಿಕ ಆಧಾರವಿಲ್ಲದೆ ಶಂಕಿಸುವುದು ಹಾಗೂ ಅವರನ್ನು ಕಡೆಗಣಿಸುವುದು ಸರಿಯಲ್ಲ; ಇದು ನೌಕರರ ನೈತಿಕ ಸ್ಥೈರ್ಯವನ್ನು ಕುಗ್ಗಿಸುವುದರ ಜೊತೆಗೆ ಸಂವಿಧಾನದ ಸಮಾನತೆಯ ತತ್ವಕ್ಕೆ ಸಂಪೂರ್ಣ ವಿರುದ್ಧವಾಗಿದೆ ಎಂದು ಅರ್ಜಿದಾರರ ಪರ ಹಿರಿಯ ವಕೀಲರು ಪ್ರಬಲ ವಾದ ಮಂಡಿಸಿದರು..

# ಐ–ಪ್ಯಾಕ್ ನಿರ್ದೇಶಕ ಚಾಂಡೆಲ್‌ಗೆ ಜಾಮೀನು

**ನವದೆಹಲಿ, ಏ.30:** ಪಶ್ಚಿಮ ಬಂಗಾಳದಲ್ಲಿ ನಡೆದಿದೆ ಎನ್ನಲಾದ ಕಲ್ಲಿದ್ದಲು ಹಗರಣಕ್ಕೆ ಸಂಬಂಧಿಸಿದ ಹಣ ವರ್ಗಾವಣೆ ಪ್ರಕರಣದಲ್ಲಿ ಐಪಿಎಸಿ ಸಹ–ಸಂಸ್ಥಾಪಕ ಮತ್ತು ನಿರ್ದೇಶಕ ವಿನೇಶ್ ಚಾಂಡೆಲ್ ಅವರಿಗೆ ಪಟಿಯಾಲ ಹೌಸ್ ನ್ಯಾಯಾಲಯ ಜಾಮೀನು ನೀಡಿದೆ. ವಿಚಾರಣೆಯ ಸಮಯದಲ್ಲಿ ಚಾಂಡೆಲ್ ಅವರ ಜಾಮೀನು ಅರ್ಜಿಯನ್ನು ಜಾರಿ ನಿರ್ದೇಶನಾಲಯ ವಿರೋಧಿಸಲಿಲ್ಲ.

ಜಾಮೀನು ನೀಡುವಾಗ ಚಾಂಡೆಲ್ ತನಿಖೆಗೆ ಸಂಪೂರ್ಣವಾಗಿ ಸಹಕರಿಸಿದ್ದಾರೆ ಮತ್ತು ಅಗತ್ಯವಿದ್ದಾಗಲೆಲ್ಲಾ ತನಿಖಾ ಸಂಸ್ಥೆಯೊಂದಿಗೆ ಮಾಹಿತಿಯನ್ನು ಹಂಚಿಕೊಂಡಿದ್ದಾರೆ ಎಂದು ನ್ಯಾಯಾಲಯ ಗಮನಿಸಿತು. ಇದರ ಆಧಾರದ ಮೇಲೆ, ಜಾಮೀನು ನಿರಾಕರಿಸಲು ಯಾವುದೇ ಬಲವಾದ ಕಾರಣವಿಲ್ಲ ಮತ್ತು ವಿಶೇಷವಾಗಿ ಜಾರಿ ನಿರ್ದೇಶನಾಲಯ ಸ್ವತಃ ಆಕ್ಷೇಪಿಸದ ಕಾರಣ ಜಾಮೀನು ನೀಡಲಾಗುತ್ತಿದೆ ಎಂದು ನ್ಯಾಯಾಲಯ ಹೇಳಿದೆ,

ಜಾಮೀನು ನೀಡಲು ಕೋರ್ಟ್ ಹಲವು ಷರತ್ತುಗಳನ್ನು ವಿಧಿಸಿದೆ. ಸಾಕ್ಷ್ಯಗಳನ್ನು ತಿರುಚುವಂತಿಲ್ಲ, ಸಾಕ್ಷಿಗಳ ಮೇಲೆ ಪ್ರಭಾವ ಬೀರಬಾರದು, ತನಿಖೆಗೆ ಸಂಪೂರ್ಣ ಸಹಕಾರ ನೀಡಬೇಕು, ಅಗತ್ಯವಿದ್ದಾಗ ತನಿಖೆಗೆ ಸೇರಲು ಲಭ್ಯವಿರಬೇಕು ಎಂದು ನ್ಯಾಯಲಯ ಹೇಳಿದೆ.

ಪಶ್ಚಿಮ ಬಂಗಾಳದ ಅಸನ್ಸೋಲ್ ಸುತ್ತಮುತ್ತಲಿನ ಕುನುಸ್ಟೋರಿಯಾ ಮತ್ತು ಕಜೋರಾ ಪ್ರದೇಶಗಳಲ್ಲಿನ ಈಸ್ಟರ್ನ್ ಕೋಲ್ಫೀಲ್ಡ್ಸ್ ಲಿಮಿಟೆಡ್ ಗಣಿಗಳಿಗೆ ಸಂಬಂಧಿಸಿದ ಬಹುಕೋಟಿ ಕಲ್ಲಿದ್ದಲು ಕಳ್ಳತನ ಹಗರಣದ ಆರೋಪದ ಮೇಲೆ ಕೇಂದ್ರೀಯ ತನಿಖಾ ದಳ ನವೆಂಬರ್ 2020 ರಲ್ಲಿ ಸಲ್ಲಿಸಿದ ಎಫ್‌ಐಆರ್‌ನಿಂದ ಇಡಿ ಪ್ರಕರಣ ಹುಟ್ಟಿಕೊಂಡಿದೆ.

ED ಪ್ರಕಾರ, ಕಲ್ಲಿದ್ದಲು ಕಳ್ಳಸಾಗಣೆ ಜಾಲದೊಂದಿಗೆ ಸಂಬಂಧ ಹೊಂದಿರುವ ಹವಾಲಾ ನಿರ್ವಾಹಕನೊಬ್ಬ ಖ–ಕಂಅ ನ ನೋಂದಾಯಿತ ಘಟಕವಾದ ಇಂಡಿಯನ್ ಕಂಅ ಕನ್ಸಲ್ಟಿಂಗ್ ಪ್ರೈವೇಟ್ ಲಿಮಿಟೆಡ್‌ಗೆ ಹತ್ತಾರು ಕೋಟಿ ಮೌಲ್ಯದ ವಹಿವಾಟುಗಳನ್ನು ಸುಗಮಗೊಳಿಸಿದ್ದಾನೆ. ಈ ಹವಾಲಾ ನಿಧಿಗಳಿಗೆ ಸಂಬಂಧಿಸಿದ ಘಟಕಗಳಲ್ಲಿ I-PAC ಕೂಡ ಸೇರಿದೆ ಎಂದು ಸಂಸ್ಥೆ ಆರೋಪಿಸಿದೆ.

# ದೆಹಲಿ –ಮುಂಬೈ ಎಕ್ಸ್‌ಪ್ರೆಸ್ ಹೆದ್ದಾರಿಯಲ್ಲಿ ಹೊತ್ತಿ ಉರಿದ ಕಾರು: 6 ಮಂದಿ ಸಜೀವ ದಹನ




**ಜೈಪುರ, ಏ.30:** ಚಲಿಸುತ್ತಿದ್ದ ಕಾರಿಗೆ ಬೆಂಕಿ ಹತ್ತಿಕೊಂಡ ಪರಿಣಾಮ ಐವರು ಪ್ರಯಾಣಿಕರು ಸುಟ್ಟು ಕರಕಲಾಗಿದ್ದು, ಮತ್ತೊಬ್ಬ ಪ್ರಯಾಣಿಕ ಗಂಭೀರವಾಗಿ ಗಾಯಗೊಂಡಿರುವ ಘಟನೆ ರಾಜಸ್ಥಾನದ ಅಲ್ವಾರ್ ಜಿಲ್ಲೆಯಲ್ಲಿನ ಮುಂಬೈ–ದಿಲ್ಲಿ ಹೆದ್ದಾರಿಯಲ್ಲಿ ನಡೆದಿದೆ. ಸಂತ್ರಸ್ತರು ವೈಷ್ಣೋದೇವಿ ತೀರ್ಥ ಯಾತ್ರೆಯನ್ನು ಮುಗಿಸಿಕೊಂಡು ಮರಳುವಾಗ ಬುಧವಾರ ರಾತ್ರಿ ಮೌಜ್ ಪುರ್ ಬಳಿ ಈ ಘಟನೆ ನಡೆದಿದೆ.

ಸುದ್ದಿ ತಿಳಿಯುತ್ತಿದ್ದಂತೆ ಅಗ್ನಿಶಾಮಕ ವಾಹನಗಳನ್ನು ಸ್ಥಳಕ್ಕೆ ರವಾನಿಸಲಾಯಿತು ಹಾಗೂ 15 ನಿಮಿಷಗಳೊಳಗೆ ಬೆಂಕಿಯ ಜ್ವಾಲೆಗಳನ್ನು ನಿಯಂತ್ರಿಸಲಾಯಿತು. ಆದರೆ, ಅಷ್ಟು ಹೊತ್ತಿಗೆ ಕಾರು ಸಂಪೂರ್ಣವಾಗಿ ಸುಟ್ಟು ಕರಕಲಾಗಿತ್ತು ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪ್ರಿಯಾಂಕಾ ರಘುವಂಶಿ ತಿಳಿಸಿದ್ದಾರೆ. ಮೃತರ ಪೈಕಿ ಮೂವರು ಮಹಿಳೆಯರು, ಓರ್ವ ಬಾಲಕಿ ಹಾಗೂ ಓರ್ವ ಪುರುಷ ಸೇರಿದ್ದಾರೆ. ಅವರೆಲ್ಲರೂ ಮಧ್ಯ ಪ್ರದೇಶದ ಶಿಯೋಪುರ್ ಜಿಲ್ಲೆಯ ನಿವಾಸಿಗಳು ಎಂದು ಹೇಳಲಾಗಿದೆ. ಶಾರ್ಟ್ ಸರ್ಕ್ಯೂಟ್ ನಿಂದ ಈ ಘಟನೆ ಸಂಭವಿಸಿರಬಹುದು ಎಂದು ಶಂಕಿಸಲಾಗಿದೆ. ಕಾರು ಸಿಎನ್ಜಿ ಚಾಲಿತ ವಾಹನವಾಗಿದ್ದುದರಿಂದ ಬೆಂಕಿ ಕ್ಷಿಪ್ರವಾಗಿ ವ್ಯಾಪಿಸಿದ್ದು, ಕಾರಿನಲ್ಲಿದ್ದ ಪ್ರಯಾಣಿಕರು ಈ ಅವಘಡದಿಂದ ತಪ್ಪಿಸಿಕೊಳ್ಳಲು ಸಮಯಾವಕಾಶ ದೊರೆತಿಲ್ಲ ಎಂದು ಉಪ ಪೊಲೀಸ್ ವರಿಷ್ಠಾಧಿಕಾರಿ ಕೈಲಾಶ್ ಜಿಂದಾಲ್ ತಿಳಿಸಿದ್ದಾರೆ. ವಾಹನದಿಂದ ಕೇವಲ ಅಸ್ಥಿಪಂಜರದ ಅವಶೇಷಗಳನ್ನು ಮಾತ್ರ ವಶಪಡಿಸಿಕೊಳ್ಳಲಾಗಿದ್ದು, ಅವರನ್ನು ಡಿಎನ್ಎ ಪರೀಕ್ಷೆಗಾಗಿ ಪ್ರತ್ಯೇಕವಾಗಿ ಸಂರಕ್ಷಿಸಿಡಲಾಗಿದೆ. ಅವರ ಗುರುತು ಪತ್ತೆ ಹಚ್ಚಲು ಡಿಎನ್ಎ ಪರೀಕ್ಷೆಯನ್ನು ನಡೆಸಲಾಗುವುದು ಎಂದು ಅವರು ಹೇಳಿದ್ದಾರೆ. ಕಾರು ಚಾಲಕನೆಂದು ಹೇಳಲಾಗಿರುವ ವಿನೋದ್ ಕುಮಾರ್ ಮೆಹರ್, ಕಾರಿನಿಂದ ಹೊರಗೆ ಜಿಗಿಯವಲ್ಲಿ ಯಶಸ್ವಿಯಾದರೂ, ತೀವ್ರ ಸುಟ್ಟಗಾಯಗಳಿಗೆ ತುತ್ತಾಗಿ ಬಳಿಕ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾನೆ.




ಲಖನೌದ ಉತ್ತರ ಪ್ರದೇಶ ವಿಧಾನಸಭಾ ಸಂಕೀರ್ಣದಲ್ಲಿ ಗುರುವಾರ ನಡೆದ ಮಹಿಳಾ ಸಬಲೀಕರಣದ ವಿಶೇಷ ಅಧಿವೇಶನದಲ್ಲಿ ಮಹಿಳೆಯರಿಗೆ ಶೇ.33 ರಷ್ಟು ಮೀಸಲಾತಿ ಜಾರಿಗೆ ತರಬೇಕೆಂದು ಒತ್ತಾಯಿಸಿ ಬಿಜೆಪಿ ಶಾಸಕರು ಸಮಾಜವಾದಿ ಪಕ್ಷ ಮತ್ತು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ವಿರುದ್ಧ ಫಲಕಗಳನ್ನು ಪ್ರದರ್ಶಿಸಿ ಘೋಷಣೆಗಳನ್ನು ಕೂಗಿ ಪ್ರತಿಭಟನೆ ನಡೆಸಿದರು.

# 2030ರೊಳಗೆ ಕರ್ನಾಟಕವನ್ನು ಜೂಡೋ ಶಕ್ತಿಕೇಂದ್ರವನ್ನಾಗಿಸುವ ಗುರಿ: ಯತೀಶ್ ಬಂಗೇರ

**ಮಂಗಳೂರು(ಆರ್‌ಬಿಐ), ಏ.30:** 2030ರ ವೇಳೆಗೆ ಕರ್ನಾಟಕವನ್ನು ಭಾರತದ ಜೂಡೋ ಪ್ರಧಾನ ಕೇಂದ್ರವನ್ನಾಗಿ ರೂಪಿಸುವ ಗುರಿಯೊಂದಿಗೆ 'ವಿಷನ್ 2030' ನೀಲನಕ್ಷೆ ಆರಂಭಿಸಲಾಗಿದೆ' ಎಂದು ಕರ್ನಾಟಕ ಸ್ಟೇಟ್ ಜೂಡೋ ಸ್ಪೋರ್ಟ್ಸ್ ಅಸೋಸಿಯೇಶನ್ ಪ್ರಮುಖರಾದ ಯತೀಶ್ ನಾರಾಯಣ್ ಬಂಗೇರ ತಿಳಿಸಿದ್ದಾರೆ.

ನಗರದ ಪತ್ರಿಕಾಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕರಾವಳಿ ಸೇರಿದಂತೆ ರಾಜ್ಯದ ಜೂಡೋ ಕ್ರೀಡೆಯ ಗತವೈಭವವನ್ನು ಮರುಸ್ಥಾಪಿಸಲು ಈ ದೂರದೃಷ್ಟಿಯ ಯೋಜನೆ ರೂಪಿಸಲಾಗಿದೆ ಎ0ದರು. 2030ರ ಕಾಮನ್‌ವೆಲ್ತ್ ಕ್ರೀಡಾಕೂಟ ಭಾರತದಲ್ಲಿ ನಡೆಯಲಿರುವ ಹಿನ್ನೆಲೆಯಲ್ಲಿ, ಕರ್ನಾಟಕದ ಕ್ರೀಡಾಪಟುಗಳು ರಾಷ್ಟ್ರಕ್ಕೆ ಗರಿಷ್ಠ ಪದಕಗಳನ್ನು ತಂದುಕೊಡುವ ಗುರಿ ಹೊಂದಲಾಗಿದೆ ಎ0ದು ತಿಳಿಸಿದರು.

ಗ್ರಾಸ್‌ರೂಟ್ಸ್ ಟು ಗೋಲ್ಡ್' ಕಾರ್ಯಕ್ರಮದಡಿ ಗ್ರಾಮೀಣ ಮಟ್ಟದ ಪ್ರತಿಭೆಗಳನ್ನು ಗುರುತಿಸಿ ಬೆಳೆಸಲಾಗುವುದು. ಉಡುಪಿ, ಮಂಗಳೂರು ಹಾಗೂ ಉತ್ತರ ಕರ್ನಾಟಕ ಭಾಗಗಳಲ್ಲಿ ಅತ್ಯಾಧುನಿಕ ತರಬೇತಿ ಕೇಂದ್ರಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ವಿವರಿಸಿದರು. ಕ್ರೀಡಾ ಸಂಸ್ಥೆಗಳ ಪ್ರಸ್ತುತ ಸ್ಥಿತಿಗತಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ



ಅವರು, "ನಾಯಕತ್ವವು ಕ್ರೀಡಾಪಟುಗಳ ಪ್ರಗತಿಗಿಂತ ವೈಯಕ್ತಿಕ ಲಾಭಕ್ಕೆ ಆದ್ಯತೆ ನೀಡುತ್ತಿದೆ. ಆಡಳಿತಾತ್ಮಕ ವೈಫಲ್ಯಗಳಿಂದ ಸಂಸ್ಥೆಗಳು ಹಿನ್ನಡೆಯಾಗುತ್ತಿವೆ ಎಂದು ಹೇಳಿದರು. ಇದನ್ನು ಸರಿಪಡಿಸಲು ಡಿಜಿಟಲ್ ಪೋರ್ಟಲ್ ಮೂಲಕ ಪಾರದರ್ಶಕ ನೋಂದಣಿ ವ್ಯವಸ್ಥೆ ಹಾಗೂ ಮೂರನೇ ವ್ಯಕ್ತಿಯಿಂದ ಹಣಕಾಸು ಲೆಕ್ಕಪರಿಶೋಧನೆ ಜಾರಿಗೆ ತರಲಾಗುವುದು ಎಂದು ಘೋಷಿಸಿದರು.

ಶಾಲೆಗಳಲ್ಲಿ ಆತ್ಮರಕ್ಷಣೆಗಾಗಿ ಜೂಡೋವನ್ನು ಕಡ್ಡಾಯ ಆಯ್ಕೆಯಾಗಿ ಪರಿಚಯಿಸುವುದರ ಜೊತೆಗೆ, ಪದಕ ವಿಜೇತರಿಗೆ ಪೊಲೀಸ್ ಮತ್ತು ಆಡಳಿತಾತ್ಮಕ ಸೇವೆಗಳಲ್ಲಿ ರದ್ದುಗೊಂಡಿರುವ ಕ್ರೀಡಾ ಕೋಟಾವನ್ನು ಪುನಃಸ್ಥಾಪಿಸಲು ಸರ್ಕಾರದ ಮೇಲೆ ಒತ್ತಡ ಹೇರಲಾಗುವುದು ಎಂದು ತಿಳಿಸಿದರು.

# ಬಿಹಾರ ಮೃಗಾಲಯ, ಡೈರಿ ಸಂಸ್ಥೆಗೆ ಬೇರೆ ನಾಮಕಾರಣ

**ಪಟನಾ, ಏ.30:** ಭಾರತೀಯ ಜನತಾ ಪಕ್ಷದ ನೇತೃತ್ವದ ಬಿಹಾರ ಸರ್ಕಾರವು ಬುಧವಾರ ಸಂಜಯ್ ಗಾಂಧಿ ಜೈವಿಕ ಉದ್ಯಾನವನವನ್ನು ಪಟನಾ ಮೃಗಾಲಯ' ಮತ್ತು ಸಂಜಯ್ ಗಾಂಧಿ ಡೈರಿ ತಂತ್ರಜ್ಞಾನ ಸಂಸ್ಥೆಯನ್ನು 'ಬಿಹಾರ ರಾಜ್ಯ ಡೈರಿ ತಂತ್ರಜ್ಞಾನ ಸಂಸ್ಥೆ' ಎಂದು ಮರುನಾಮಕರಣ ಮಾಡಿದೆ.

ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ದಿವಂಗತ ಪ್ರಧಾನಿ ಇಂದಿರಾ ಗಾಂಧಿಯವರ ಪುತ್ರ, ಕಾಂಗ್ರೆಸ್ ನಾಯಕ ಸಂಜಯ್ ಗಾಂಧಿ ಅವರ ಹೆಸರು ಇಡಲಾಗಿದ್ದ ಸರ್ಕಾರಿ ಸ್ವಾಮ್ಯದ ಮೃಗಾಲಯವು ರಾಜ್ಯ ರಾಜಧಾನಿಯ ಬೈಲಿ ರಸ್ತೆಯಿಂದ ಹೊರಗಿದ್ದು, 1973 ರಲ್ಲಿ ಸಾರ್ವಜನಿಕರಿಗೆ ಮುಕ್ತಗೊಳಿಸಲಾಯಿತು.

153 ಎಕರೆಗೂ ಹೆಚ್ಚು ವಿಸ್ತೀರ್ಣದಲ್ಲಿರುವ ಈ ಮೃಗಾಲಯವು 110 ಕ್ಕೂ ಹೆಚ್ಚು ಜಾತಿಗಳ 800ಕ್ಕೂ ಹೆಚ್ಚು ಪ್ರಾಣಿಗಳಿಗೆ ನೆಲೆಯಾಗಿದೆ. ಸಂಜಯ್ ಗಾಂಧಿ ಡೈರಿ ತಂತ್ರಜ್ಞಾನ ಸಂಸ್ಥೆಯು ಪಟನಾದಲ್ಲಿರುವ ಐಸಿಎಆರ್–ಮಾನ್ಯತೆ ಪಡೆದ ಸಂಸ್ಥೆಯಾಗಿದ್ದು, ಇದನ್ನು 1980 ರಲ್ಲಿ ರಾಜ್ಯ ಸರ್ಕಾರ ಸ್ಥಾಪಿಸಿತು. ಇದು ಡೈರಿ ತಂತ್ರಜ್ಞಾನದಲ್ಲಿ ಬಿಟೆಕ್ ಮತ್ತು ಎಂಟೆಕ್ ಕಾರ್ಯಕ್ರಮಗಳನ್ನು ನೀಡುತ್ತಿದೆ.

# ಬಂಧಿಸಿ ಅವಮಾನಿಸುವ ಅಗತ್ಯವಿಲ್ಲ: ಖೇರಾ

**ನವದೆಹಲಿ, ಏ. 30:** ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರ ಪತ್ನಿಗೆ ಸಂಬಂಧಿಸಿದ ಪಾಸ್‌ಪೋರ್ಟ್ ವಿವಾದದ ಪ್ರಕರಣದಲ್ಲಿ ಬಂಧನದ ಮೂಲಕ ನನ್ನನ್ನು ಅವಮಾನಿಸುವ ಅಗತ್ಯವಿಲ್ಲ ಎಂದು ಕಾಂಗ್ರೆಸ್ ನಾಯಕ ಪವನ್ ಖೇರಾ ಗುರುವಾರ ಸುಪ್ರೀಂ ಕೋರ್ಟ್‌ಗೆ ತಿಳಿಸಿದ್ದಾರೆ.

ಪವನ್ ಖೇರಾ ಅವರ ನಿರೀಕ್ಷಿತ ಜಾಮೀನು ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಜೆ.ಕೆ ಮಹೇಶ್ವರಿ ಮತ್ತು ಎ ಎಸ್ ಚಂದೂರ್ಕರ್ ಅವರನ್ನೊಳಗೊಂಡ ದ್ವಿಸದಸ್ಯ ಪೀಠವು ಅರ್ಜಿಯ ಕಾಯ್ದಿರಿಸಿದೆ.

ವಿಚಾರಣೆಯ ಸಮಯದಲ್ಲಿ ಖೇರಾ ಪರ ವಾದ ಮಂಡಿಸಿದ ಹಿರಿಯ ನ್ಯಾಯವಾದಿ ಅಭಿಷೇಕ್ ಸಿಂಘ್ವಿ ಈ ಪ್ರಕರಣದಲ್ಲಿ ನ್ಯಾಯಾಲಯದ ವಿಚಾರಣೆಯಾಗಬೇಕಿದೆಯೇ ಹೊರತು, ಪೊಲೀಸ್ ವಶಕ್ಕೆ ವಿಚಾರಣೆ ನಡೆಸುವ ಅಗತ್ಯವಿಲ್ಲ. ಖೇರಾ ಅವರ ವಿರುದ್ಧ ಹೊರಿಸಲಾಗಿರುವ ಕೆಲವು ಕಲಂಗಳು ಜಾಮೀನು ಪಡೆಯಬಹುದಾದ ಸ್ವರೂಪದವು, ಇನ್ನು ಕೆಲವು ಬಂಧನದ ಅಗತ್ಯವಿಲ್ಲದವುಗಳಾಗಿವೆ. ಒಂದು ವೇಳೆ



ಅಸ್ಸಾಂನಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ನಿರೀಕ್ಷಿತ ಜಾಮೀನು ಸಿಗದಿದ್ದರೆ, ಬಂಧನಪೂರ್ವ ಜಾಮೀನು ಕಾನೂನಿನ ಉದ್ದೇಶವೇ ವಿಫಲವಾದಂತೆ ಎಂದು ಕೋರ್ಟ್‌ಗೆ ಮನವರಿಕೆ ಮಾಡಿಕೊಟ್ಟರು.

ಇನ್ನೊಂದೆಡೆ, ಅಸ್ಸಾಂ ಸರ್ಕಾರದ ಪರ ವಾದಿಸಿದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು ಖೇರಾ ಅವರ ಜಾಮೀನು ಅರ್ಜಿಯನ್ನು ತೀವ್ರವಾಗಿ ವಿರೋಧಿಸಿದರು. ಪವನ್ ಖೇರಾ ಅವರು ಮುಖ್ಯಮಂತ್ರಿಯವರ ಪತ್ನಿಯ ನಕಲಿ ಮತ್ತು ತಿದ್ದಲ್ಪಟ್ಟ ಪಾಸ್‌ಪೋರ್ಟ್ ಪ್ರತಿಗಳನ್ನು ಪ್ರದರ್ಶಿಸಿದ್ದಾರೆ. ಅವರು ತಲೆಮರೆಸಿಕೊಂಡು ವಿಡಿಯೋಗಳ ಮೂಲಕ ಸುಳ್ಳು ಮಾಹಿತಿಯನ್ನು ಹರಡುತ್ತಿದ್ದಾರೆ. ದ್ವಿಪೌರತ್ವದ ಕುರಿತಾದ ಅವರ ಆರೋಪಗಳು ಸಂಪೂರ್ಣ ಸುಳ್ಳು ಎಂದು ಮೆಹ್ತಾ ವಾದ ಮಂಡಿಸಿದರು.

ಅಸ್ಸಾಂ ಸಿಎಂ ಹಿಮಂತ ಬಿಸ್ವಾ ಶರ್ಮಾ ಅವರ ಪತ್ನಿ ರಿನಿಕಿ ಭುಯಾನ್ ಶರ್ಮಾ ಅವರ ಕುರಿತು ಪವನ್ ಖೇರಾ ಮಾಡಿದ ಆರೋಪಗಳ ನಂತರ, ಗುವಾಹಟಿ ಕ್ರೈಂ ಬ್ರಾಂಚ್‌ನಲ್ಲಿ ಭಾರತೀಯ ನ್ಯಾಯ ಸಂಹಿತೆ ಅಡಿ ಕ್ರಿಮಿನಲ್ ಪ್ರಕರಣ ದಾಖಲಾಗಿತ್ತು. ಈ ಹಿನ್ನೆಲೆಯಲ್ಲಿ ಏಪ್ರಿಲ್ 24 ರಂದು ಗುವಾಹಟಿ ಹೈಕೋರ್ಟ್ ಅವರ ನಿರೀಕ್ಷಿತ ಜಾಮೀನನ್ನು ತಿರಸ್ಕರಿಸಿತ್ತು.

ಇದಕ್ಕೂ ಮುನ್ನ, ತೆಲಂಗಾಣ ಹೈಕೋರ್ಟ್ ಅವರಿಗೆ 7 ದಿನಗಳ ಮಧ್ಯಂತರ ಜಾಮೀನು ನೀಡಿತ್ತು. ಆದರೆ ಅಸ್ಸಾಂ ಪೊಲೀಸರು ಇದನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ ನಂತರ, ಸುಪ್ರೀಂ ಕೋರ್ಟ್ ಆ ಜಾಮೀನಿಗೆ ತಡೆ ನೀಡಿ, ಗುವಾಹಟಿ ಹೈಕೋರ್ಟ್ ಅನ್ನು ಸಂಪರ್ಕಿಸುವಂತೆ ಖೇರಾ ಅವರಿಗೆ ಸೂಚಿಸಿತ್ತು. ಈಗ ಸುಪ್ರೀಂ ಕೋರ್ಟ್ ಈ ಪ್ರಕರಣದ ಅಂತಿಮ ತೀರ್ಪನ್ನು ಕಾಯ್ದಿರಿಸಿದೆ.

### ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಕುಸಿದು 7 ಮಂದಿ ಮೃತಪಟ್ಟ ಪ್ರಕರಣ

## ಲೋಕಾಯುಕ್ತರಿಂದ ಸ್ಥಳ ಪರಿಶೀಲನೆ, ಸ್ವಯಂಪ್ರೇರಿತ ದೂರು ದಾಖಲು



**ಬೆಂಗಳೂರು, ಏ.30:** ಬೌರಿಂಗ್ ಆಸ್ಪತ್ರೆಯ ಆವರಣ ಗೋಡೆ ಕುಸಿದು ಏಳು ಮಂದಿ ಕಾರ್ಮಿಕರು ಮೃತಪಟ್ಟ ದುರದೃಷ್ಟಕರ ಘಟನೆಗೆ ಸಂಬಂಧಿಸಿ ದಂತೆ, ರಾಜ್ಯ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಅವರು ಗುರುವಾರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಘಟನಾ ಸ್ಥಳದ ಭೀಕರತೆಯನ್ನು ಕಣ್ಣಾರೆ ಕಂಡ ಅವರು, ಅಧಿಕಾರಿಗಳಿಂದ ಸಂಪೂರ್ಣ ಮಾಹಿತಿಯನ್ನು ಪಡೆದು ಕೊಂಡರು. ಹಾಗೂ ಕಾಮಗಾರಿಯ ಗುಣಮಟ್ಟ ಹಾಗೂ ಸುರಕ್ಷತಾ ಕ್ರಮಗಳ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಪ್ರಾಥಮಿಕ ತನಿಖೆಯ ಪ್ರಕಾರ, ಕಾಮಗಾರಿ ನಡೆಯುವ ಸಂದರ್ಭದಲ್ಲಿ ಅಗತ್ಯ ಸುರಕ್ಷತಾ ಮುನ್ನೆಚ್ಚರಿಕೆಗಳನ್ನು ವಹಿಸದಿರುವುದು ದುರಂತಕ್ಕೆ ಕಾರಣ ಎನ್ನಲಾಗಿದೆ.

ಈ ಬಗ್ಗೆ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡಿರುವ ಲೋಕಾ ಯುಕ್ತರು, ಬಿಬಿಎಂಪಿ ಮತ್ತು ಆಸ್ಪತ್ರೆ ಆಡಳಿತ ಮಂಡಳಿಯ ಎಂಜಿನಿಯರ್ ಗಳ ಪಾತ್ರದ ಬಗ್ಗೆ ತನಿಖೆ ನಡೆಸಲು ಸೂಚಿಸಿದ್ದಾರೆ. "ನಿರ್ಲಕ್ಷ್ಯ ತೋರಿದ ಯಾವುದೇ ಅಧಿಕಾರಿಯನ್ನು ಬಿಡುವ ಪ್ರಶ್ನೆಯೇ ಇಲ್ಲ" ಎಂದು ಎಚ್ಚರಿಸಿದರು.

ಈ ದುರಂತಕ್ಕೆ ಸಂಬಂಧಿಸಿದಂತೆ ಕೇವಲ ಕೆಳಹಂತದ ಸಿಬ್ಬಂದಿಯನ್ನಲ್ಲ, ಬದಲಿಗೆ ಆಡಳಿತ ಯಂತ್ರದ ಉನ್ನತ ಅಧಿಕಾರಿಗಳನ್ನೇ ಹೊಣೆ ಗಾರರನ್ನಾಗಿ ಮಾಡಲು ಲೋಕಾ ಯುಕ್ತ ನಿರ್ಧರಿಸಿದೆ. ಈ ನಿಟ್ಟಿನಲ್ಲಿ ಲೋಕಾಯುಕ್ತರು ಅತ್ಯಂತ ಮಹತ್ವದ ಘೋಷಣೆ ಮಾಡಿದ್ದಾರೆ. ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಜಿಬಿಎ ಮುಖ್ಯ ಆಯುಕ್ತ ಎಂ ಮಹೇಶ್ವರ ರಾವ್, ನಗರದ ಐದೂ ಪಾಲಿಕೆಗಳ ಆಯುಕ್ತರು, ಬೆಂಗಳೂರು ನಗರಾಭಿ ವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು, ಜಲಮಂಡಳಿ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳನ್ನು ಆರೋಪಿಗಳನ್ನಾಗಿ ಮಾಡಲಾಗಿದೆ. ಒಂದೇ ಮಳೆಗೆ ಇಷ್ಟೆಲ್ಲಾ ಅವಾಂತರ ಗಳಾಗುತ್ತಿದ್ದರೂ ಜಿಬಿಎ ಮತ್ತು ಜಲಮಂಡಳಿ ಅಧಿಕಾರಿಗಳು ಏನು ಮಾಡುತ್ತಿದ್ದಾರೆ? ಮರದ ರೆಂಬೆ ಗಳನ್ನು ತೆರವುಗೊಳಿಸುವಂತಹ ಪ್ರಾಥಮಿಕ ಕೆಲಸಗಳು ಏಕಾಗಿಲ್ಲ? ಗೋಡೆಗಳು ಶಿಥಿಲ ವಾಗಿದ್ದರೂ ವ್ಯಾಪಾರಕ್ಕೆ ಅನುಮತಿ ನೀಡಿದ್ದು ಯಾಕೆ? ವಿದ್ಯುತ್ ಹೊಡೆದು ಸಾವು ಸಂಭವಿಸಿದ ಪ್ರಕರಣ ಗಳಲ್ಲೂ ಯಾರೂ ಜವಾಬ್ದಾರಿ ತೆಗೆದುಕೊಂಡಿಲ್ಲವೇಕೆ? ವೈದ್ಯಕೀಯ ಶಿಕ್ಷಣ ಇಲಾಖೆಯು ಈ ತಡೆ ಗೋಡೆಯ ಬಗ್ಗೆ ಯಾವುದೇ ಗಮನಹರಿಸಿರಲಿಲ್ಲವೇ ಎಂದು ಪ್ರಶ್ನೆ ಕೇಳಿದ್ದಾರೆ.

### ಮಳೆ ಅನಾಹುತ ತಡೆಯಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ

## ಮಳೆ ಮುನ್ನೆಚ್ಚರಿಕೆ: 5 ಪಾಲಿಕೆಗಳ ಸಿಬ್ಬಂದಿ ರಜೆ ರದ್ದುಗೊಳಿಸಿದ ಜಿಬಿಎ ಆಯುಕ್ತ ಮಹೇಶ್ವರ್‌ರಾವ್



**ಬೆಂಗಳೂರು, ಏ.30:** ನಗರದಲ್ಲಿ ಇನ್ನು ಮೂರು ದಿನ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂಬ ಎಚ್ಚರಿಕೆ ಹಿನ್ನೆಲೆಯಲ್ಲಿ ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಸಿಬ್ಬಂದಿಗಳ ರಜೆಗಳನ್ನು ಜಿಬಿಎ ಮುಖ್ಯ ಅಯುಕ್ತ ಮಹೇಶ್ವರ್ ರಾವ್ ರದ್ದುಗೊಳಿಸಿದ್ದಾರೆ.

ಈ ಕುರಿತಂತೆ 5 ನಗರಪಾಲಿಕೆ ಅಯುಕ್ತರಿಗೆ ಸೂಚನೆ ನೀಡಿ ಆಯಾ ಪಾಲಿಕೆ ವ್ಯಾಪ್ತಿಯ ಎಲ್ಲಾ ಸಿಬ್ಬಂದಿಗಳು ಹಾಗೂ ಅಧಿಕಾರಿಗಳ ರಜೆ ರದ್ದು ಪಡಿಸಿ ಮಳೆಗಾಲದಲ್ಲಿ ಎಚ್ಚರಿಕೆ ವಹಿಸಲು ಸೂಚಿಸುವಂತೆ ತಿಳಿಸಿದ್ದಾರೆ.

ನಿಮ್ಮ ಪಾಲಿಕೆ ವ್ಯಾಪ್ತಿಯಲ್ಲಿ ಮಳೆಯ ಅನಾಹುತ ತಡೆಯಲು ಎಲ್ಲಾ ರೀತಿಯ ಸಿದ್ದತೆ ಮಾಡಿ. ಮರ ತೆರವಿಗೆ ಬೇಕಾದ ಎಲ್ಲಾ ಸಾಮಗ್ರಿಗಳನ್ನು ಸಿದ್ದಪಡಿಸಿ. ರಾಜಕಾಲುವೆ ಸಮೀಪ ಇರುವ ಮನೆಗಳ ಬಗ್ಗೆ ಹೆಚ್ಚಿನ ಗಮನ ಹರಿಸಲು ಅವರು ಸೂಚನೆ ನೀಡಿದ್ದಾರೆ.

ಎಂಜಿನಿಯರ್‌ಗಳು. ಅರೋಗ್ಯ ಇಲಾಖೆ ಸಿಬ್ಬಂದಿಗಳು ಅಲರ್ಟ್ ಅಗಿ ಇರುವಂತೆ ಮೌಖಿಕವಾಗಿ ಸೂಚಿಸಿದ್ದಾರೆ. ಇನ್ನೂ ಜಿಬಿಎಯ ಎಲ್ಲಾ ಕಂಟ್ರೋಲ್ ರೂಮ್‌ಗಳು ದಿನದ 24+7 ಗಂಟೆಗಳು ಕಾರ್ಯ ನಿರ್ವಹಿಸಲು ಅದೇಶ ನೀಡಿದ್ದಾರೆ. ಕಂಟ್ರೋಲ್ ರೂಮ್ ಗೆ ಬರುವಂತಹ ದೂರುಗಳನ್ನು ಸ್ವೀಕರಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ರವಾನೆ ಮಾಡಿ ಅದಷ್ಟು ಬೇಗ ಸಮಸ್ಯೆ ಇತ್ಯರ್ಥ ಮಾಡಬೇಕು ಎಂದು ಸೂಚನೆ ನೀಡಿದ್ದಾರೆ. ಮಳೆ ಅನಾಹುತ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಮಹೇಶ್ವರ ರಾವ್ ಅವರು, ಬಿದ್ದಿರುವ ಮರಗಳನ್ನು ಶೀಘ್ರ ತೆರವುಗೊಳಿಸುವಂತೆ ಸಿಬ್ಬಂದಿಗಳಿಗೆ ಹಾಗೂ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಅಂಡರ್ ಪಾಸ್‌ಗಳನ್ನು ವೀಕ್ಷಣೆ ಮಾಡಿ ಮಳೆಯ ನೀರು ತೆರವು ಮಾಡಲು ಸೂಚನೆ ನೀಡಿದರು. ಮಳೆಯ ನೀರು ಮನೆಗಳಿಗೆ ನುಗ್ಗಿದ ಪ್ರದೇಶಗಳಿಗೆ ಬೇಟಿ ನೀಡಿ ಸಾರ್ವಜನಿಕರ ಅಹವಾಲು ಸ್ವೀಕರಿಸಿದರು.ಸಾರ್ವಜನಿಕರು ಜಿಬಿಎ ಮುಖ್ಯ ಅಯುಕ್ತರಿಗೆ ತಮ್ಮ ಬಡಾವಣೆ ಗಳು ಪ್ರತಿ ಬಾರಿ ಮಳೆ ಬಂದಾಗಲೂ ಅನಾಹುತ ನಡೆಯುತ್ತವೆ. ಮನೆಯಲ್ಲಿದ್ದ ದಿನಸಿ ಪದಾರ್ಥಗಳು ಹಾಳಾಗಿವೇ ಎಂದು ತಮ ಅಳಲು ತೋಡಿಕೊಂಡರು. ಇದಕ್ಕೆ ಪ್ರತಿಕ್ರಿಯೆ ನೀಡಿದ ಅಯುಕ್ತರು ಪರಿಹಾರ ನೀಡುವುದಾಗಿ ಭರವಸೆ ನೀಡಿದರು. ಸ್ಥಳೀಯ ಅಧಿಕಾರಿಗಳಿಗೆ ಮಳೆಯಿಂದ ಹಾನಿಯದ ವಸ್ತುಗಳ ಬಗ್ಗೆ ಮಾಹಿತಿ ಪಡೆದು ವರದಿ ನೀಡುವಂತೆ ಸೂಚನೆ ನೀಡಿದರು.

## ಮಾಧ್ಯಮಗಳ ವಿರುದ್ಧ ಕ್ರಮ ಕೋರಿದ್ದ ದರ್ಶನ್ ಕೋರಿದ್ದ ಮನವಿ ಭಾಗಶಃ ಪುರಸ್ಕರಿಸಿದ ಹೈಕೋರ್ಟ್




**ಬೆಂಗಳೂರು,ಏ.30:** ನ್ಯಾಯಾಲಯದ ಆದೇಶಗಳನ್ನು ಉಲ್ಲಂಘಿಸುತ್ತಿರುವ ಮಾಧ್ಯಮಗಳ ವಿರುದ್ಧ ಕ್ರಮ ಕೈಗೊಳ್ಳಲು ಕೇಂದ್ರ ಮಾಹಿತಿ ಮತ್ತು ಪ್ರಸಾರ ಇಲಾಖೆಗೆ ನಿರ್ದೇಶಿಸುವಂತೆ ಕೋರಿ ನಟ ದರ್ಶನ್ ಶ್ರೀನಿವಾಸ್ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ಭಾಗಶಃ ಪುರಸ್ಕರಿಸಿದೆ.

ಅರ್ಜಿಯ ವಿಚಾರಣೆ ಪೂರ್ಣಗೊಳಿಸಿ, ಕಾಯ್ದಿರಿಸಿದ್ದ ಆದೇಶವನ್ನು ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಮ್ ಅವರ ಏಕಸದಸ್ಯ ಪೀಠ ಇಂದು ಪ್ರಕಟಿಸಿತು. ಅರ್ಜಿಯನ್ನು ಭಾಗಶಃ ಪುರಸ್ಕರಿಸಲಾಗಿದೆ ಎಂದು ನ್ಯಾಯಾಲಯ ಆದೇಶಿಸಿದೆ.

ಕೇಂದ್ರ ಸರ್ಕಾರವನ್ನು ಪ್ರತಿನಿಧಿಸಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್ ಕೆ ಅರವಿಂದ್ ಕಾಮತ್ ಅವರು ಈ ಹಿಂದೆ ಅರ್ಜಿ ಸಲ್ಲಿಸಿದ್ದ ದರ್ಶನ್ ಅವರು 40 ಟಿವಿ ಚಾನಲ್‌ಗಳನ್ನು ಪ್ರತಿವಾದಿಗಳನ್ನಾಗಿಸಿದ್ದರು.

ರೇಣುಕಾಸ್ವಾಮಿ ಕೊಲೆ ಪ್ರಕರಣದ ಗೌಪ್ಯವಾದ ಆರೋಪ ಪಟ್ಟಿ ಮಾಹಿತಿಯನ್ನು ವರದಿ ಮಾಡದಂತೆ ಹೈಕೋರ್ಟ್ ನಿರ್ದೇಶಿಸಿತ್ತು. ಇದನ್ನು ಮಾಹಿತಿ ಮತ್ತು ಪ್ರಸಾರ ಇಲಾಖೆಯು ಮಾಧ್ಯಮಗಳಿಗೆ ತಿಳಿಸಿದೆ. ಈಗ ಮಾಧ್ಯಮಗಳ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ದರ್ಶನ್ ಕೋರುತ್ತಿದ್ದಾರೆ.


ನ್ಯಾಯಾಲಯದ ಆದೇಶವನ್ನು ಮಾಧ್ಯಮಗಳು ಪಾಲಿಸದಿದ್ದರೆ ದರ್ಶನ್ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಬಹುದು. ದರ್ಶನ್‌ರನ್ನು ತಡೆಯುವವರು ಯಾರು ಪೊಲೀಸರು ಪ್ರಕರಣ ದಾಖಲಿಸಲು ಅವಕಾಶವಿರುವಂತೆ ಮಾಹಿತಿ ಮತ್ತು ಪ್ರಸಾರ ಇಲಾಖೆಯ ಕಾರ್ಯದರ್ಶಿಗೆ ಅವಕಾಶವಿಲ್ಲ ಎಂದಿದ್ದರು. ಮುಂದುವರಿದು, ದರ್ಶನ್ ಆಕ್ಷೇಪವಿರುವುದು ಯೂಟ್ಯೂಬ್ ಮತ್ತು ಮೆಟಾ ವಿರುದ್ಧ. ಯೂಟ್ಯೂಬ್ ವಿರುದ್ಧ ನ್ಯಾಯಾಂಗ ನಿಂದನೆ ಪ್ರಕರಣ ದಾಖಲಿಸಬಹುದು. ಶಾಸನಬದ್ಧವಾಗಿ ಪರಿಗಣಿತವಾದ ಯಾವುದೇ ಪ್ರಕ್ರಿಯೆಯನ್ನು ದರ್ಶನ್ ಬಳಕೆ ಮಾಡಿಲ್ಲ. ಯೂಟ್ಯೂಬ್, ಮೆಟಾವನ್ನು ಪಕ್ಷಕಾರರನ್ನಾಗಿಸಿಲ್ಲ. ಹಾಗೆ ಮಾಡಿದ್ದರೆ ನ್ಯಾಯಾಲಯವು ಆದೇಶವನ್ನು ಏಕೆ ಪಾಲಿಸಿಲ್ಲ ಎಂದು ಯೂಟ್ಯೂಬ್ ಅನ್ನು ಪ್ರಶ್ನಿಸಬಹುದಿತ್ತು ಎಂದಿದ್ದರು.

ದರ್ಶನ್ ಪರ ವಕೀಲ ಪ್ರಥಮ್ ಅವರು ಮಾಧ್ಯಮಗಳನ್ನು ನಿಯಂತ್ರಿಸಲು ಕೇಂದ್ರ ಸರ್ಕಾರದ ಬಳಿ ಅಧಿಕಾರವಿದೆ. ಎಕ್ಸ್ ಕಾರ್ಪ್ ವರ್ಸಸ್ ಭಾರತ ಸರ್ಕಾರ ಪ್ರಕರಣದಲ್ಲಿ ಕೇಂದ್ರದ ನಿಲುವನ್ನು ಹೈಕೋರ್ಟ್ ಎತ್ತಿ ಹಿಡಿದಿದೆ ಎಂದಿದ್ದರು.

ಅಲ್ಲದೇ, ರೇಣುಕಾಸ್ವಾಮಿ ತಾಯಿ ಪ್ರತಿಕೂಲ ಸಾಕ್ಷಿಯಾಗಿದ್ದ ವಿಚಾರವನ್ನು ಟಿವಿ ಚಾನಲ್‌ಗಳು ನಾಲ್ಕು ದಿನ ಪ್ಯಾನಲ್ ಚರ್ಚೆ ಮಾಡಿವೆ. ಪ್ರತಿ ಚಾನಲ್‌ನಲ್ಲಿ 30ಕ್ಕೂ ಹೆಚ್ಚು ಗಂಟೆ ಇದು ಚರ್ಚೆಯ ವಿಷಯವಾಗಿದೆ. ಇಡೀ ಕೃತ್ಯವನ್ನು ಮರುಸೃಷ್ಟಿಸಲಾಗುತ್ತಿದೆ. ಒಂದು ಕೃತಕ ಬುದ್ಧಿಮತ್ತೆ ಫೋಟೊ ಸಾಕಷ್ಟು ವೈರಲ್ ಆಗಿದ್ದು, ಅದು ನಿಜ ಎಂದು ಜನರು ಭಾವಿಸುವ ಸಾಧ್ಯತೆ ಇದೆ. ಸಹ ಆರೋಪಿಗಳ ಪರ ವಕೀಲರು ಪ್ಯಾನಲ್ ಚರ್ಚೆಯಲ್ಲಿ ಭಾಗಿಯಾಗಿ, ಮೆರಿಟ್ ಮೇಲೆ ಚರ್ಚೆ ಮಾಡುತ್ತಾರೆ. ನಿವೃತ್ತ ಪೊಲೀಸ್ ಅಧಿಕಾರಿಗಳು ಹೇಗೆ ತನಿಖೆ ಮಾಡಬೇಕು ಎಂದು ಹೇಳುತ್ತಾರೆ. ದರ್ಶನ್‌ಗೆ ಜಾಮೀನು ಸಿಗುವ ಸಾಧ್ಯತೆಯ ಬಗ್ಗೆ ಮಾತನಾಡುತ್ತಾರೆ. ನ್ಯಾಯಾಲಯ ಹೇಗೆ ವಿಚಾರಣೆ ನಡೆಸಬೇಕು ಎಂದು ಹೇಳುತ್ತಾರೆ ಎಂದಿದ್ದರು.

2024ರ ಜೂನ್ 9ರಂದು ಬೆಂಗಳೂರಿನ ರಾಜಕಾಲುವೆಯಲ್ಲಿ ರೇಣುಕಾಸ್ವಾಮಿ ಮೃತದೇಹ ಪತ್ತೆಯಾಗಿತ್ತು. ಪವಿತ್ರಾ ಗೌಡಗೆ ಅಶ್ಲೀಲ ಸಂದೇಶ ಕಳುಹಿಸಿದ ಆರೋಪದ ಮೇಲೆ ನಟ ದರ್ಶನ್ ಅವರು ಇತರರ ಜೊತೆ ಸೇರಿ ಪಟ್ಟಣಗೆರೆಯ ಶೆಡ್‌ಗೆ ರೇಣುಕಾಸ್ವಾಮಿಯ ಮೇಲೆ ಹಲ್ಲೆ ನಡೆಸಿದ್ದರು. ಆನಂತರ ಮೃತದೇಹವನ್ನು ರಾಜಕಾಲುವೆಗೆ ಎಸೆದಿದ್ದರು.

2024ರ ಅಕ್ಟೋಬರ್ 30ರಂದು ಕರ್ನಾಟಕ ಹೈಕೋರ್ಟ್ ದರ್ಶನ್ ಅವರಿಗೆ ವೈದ್ಯಕೀಯ ಮಧ್ಯಂತರ ಜಾಮೀನು ಮಂಜೂರು ಮಾಡಿತ್ತು. ಡಿಸೆಂಬರ್ 13ರಂದು ಜಾಮೀನನ್ನು ಕಾಯಂಗೊಳಿಸಿತ್ತು. 2025ರ ಆಗಸ್ಟ್ 14ರಂದು ಸುಪ್ರೀಂ ಕೋರ್ಟ್ ದರ್ಶನ್ ಸೇರಿದಂತೆ ಐವರಿಗೆ ಮಂಜೂರಾಗಿದ್ದ ಜಾಮೀನು ರದ್ದುಪಡಿಸಿತ್ತು.




ಬೆಂಗಳೂರಿನಲ್ಲಿ ಬುಧವಾರ ರಾತ್ರಿ ಸುರಿದ ಭಾರೀ ಮಳೆ ಮತ್ತು ಆಲಿಕಲ್ಲು ಮಳೆಯಿಂದಾಗಿ ಕೆ.ಆರ್. ವೃತ್ತದ ಅಂಡರ್‌ಪಾಸ್ ಜಲಾವೃತವಾಯಿತು.

## ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿದ ಜೆಡಿಎಸ್ ನಾಯಕ ಶರವಣ



**ಬೆಂಗಳೂರು, ಏ.30:** ಬೌರಿಂಗ್ ಆಸ್ಪತ್ರೆ ಬಳಿ ಸಂಭವಿಸಿದ ದುರ್ಘಟನೆ ಯಲ್ಲಿ ಮೃತಪಟ್ಟವರ ಮನೆಗಳಿಗೆ ಹಾಗೂ ಆಸ್ಪತ್ರೆಗೆ ವಿಧಾನ ಪರಿಷತ್'ನ ಜೆಡಿಎಸ್ ಶಾಸಕಾಂಗ ಪಕ್ಷದ ಉಪ ನಾಯಕ ಟಿ.ಎ.ಶರವಣ ನೇತೃತ್ವದ ಜೆಡಿಎಸ್ ನಿಯೋಗವು ಗುರುವಾರ ಭೇಟಿ ನೀಡಿತು. ಮೃತರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ ನಿಯೋಗವು, ಗಾಯಾಳುಗಳ ಆರೋಗ್ಯ ವಿಚಾರಿಸಿತು.

ಜೆಡಿಎಸ್ ಪಕ್ಷದಿಂದ ಮೃತರ ಕುಟುಂಬಸ್ಥರಿಗೆ ತಲಾ 1 ಲಕ್ಷ ರೂ.ಗಳಂತೆ 7 ಲಕ್ಷ ರೂ. ಹಾಗೂ ಗಾಯಾಳುಗಳ ಕುಟುಂಬಗಳಿಗೆ ತಲಾ 25 ಸಾವಿರ ರೂ. ಪರಿಹಾರವನ್ನು ಘೋಷಿಸ ಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜೆಡಿಎಸ್ ನಾಯಕ, ಟಿ.ಎ.ಶರವಣ, ಬುಧವಾರ ರಾತ್ರಿ ಸುರಿದ ಮಳೆಗೆ ಕಂಪೌಂಡ್ ಕುಸಿದು ಸಂಭವಿಸಿದ ದುರಂತ ನೋವು ತಂದಿದೆ. ಇದು ಅತ್ಯಂತ ದುಖಃಕರ, ಸಂಗತಿಯಾಗಿದೆ. ಮೃತರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ಮೃತರ ಕುಟುಂಬದ ಜೊತೆಗೆ ಹಾಗೂ ಗಾಯಗೊಂಡವರ ಜೊತೆಗೆ ಜೆಡಿಎಸ್ ನಿಲ್ಲುತ್ತದೆ ಎಂದರು.

ಸರ್ಕಾರ ಹೇಳುವಂತೆ ಇದು ಕೇವಲ ನೈಸರ್ಗಿಕ ದುರಂತವಲ್ಲ. ಘಟನೆಯ ಬಗ್ಗೆ ತನಿಖೆ ನಡೆಸಬೇಕು ಎಂದು ಜೆಡಿಎಸ್ ಒತ್ತಾಯಿಸುತ್ತದೆ ಎಂದರು.

## ರಾಜ್ಯ ಪತ್ರಕರ್ತೆಯರ ಸಂಘಕ್ಕೆ ಅಧ್ಯಕ್ಷೆಯಾಗಿ ಡಾ.ಆರ್. ಪೂರ್ಣಿಮಾ



**ಬೆಂಗಳೂರು, ಏ.30–** ಕರ್ನಾಟಕ ಪತ್ರಕರ್ತೆಯರ ಸಂಘದ ನೂತನ ಅಧ್ಯಕ್ಷೆಯಾಗಿ ಹಿರಿಯ ಪತ್ರಕರ್ತೆ ಡಾ. ಆರ್. ಪೂರ್ಣಿಮಾ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಬೆಂಗಳೂರಿನ ಪ್ರೆಸ್‌ಕ್ಲಬ್‌ನಲ್ಲಿ ಗುರುವಾರ ನಡೆದ ಸಂಘದ ಸರ್ವಸದಸ್ಯರ ಸಭೆಯಲ್ಲಿ 2026–28ನೇ ಸಾಲಿನ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಯಿತು ಎಲ್ಲಾ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ನೂತನ ಪದಾಧಿಕಾರಿಗಳು: ಅಧ್ಯಕ್ಷೆ: ಡಾ. ಆರ್. ಪೂರ್ಣಿಮಾ, ಉಪಾಧ್ಯಕ್ಷೆ: ಎನ್.ವಿ. ಸೌಮ್ಯರಾಣಿ, ಪ್ರಧಾನ ಕಾರ್ಯದರ್ಶಿ ಮಾಲತಿ ಭಟ್, ಜಂಟಿ ಕಾರ್ಯದರ್ಶಿ ಡಿ. ಯಶೋದಾ, ಖಜಾಂಚಿ: ವಾಣಿಶ್ರೀ ಜೆ. ಎನ್., ಸಂಘದ ಕಾರ್ಯಕಾರಿ ಸಮಿತಿಗೆ ಎಂ.ಪಿ. ಸುಶೀಲಾ, ಕೆ.ಎಚ್. ಸಾವಿತ್ರಿ, ಸಿ.ಜಿ. ಮಂಜುಳಾ, ಕಾನ್ಸೆಪ್ಟಾ ಫರ್ನಾಂಡೀಸ್, ಶಮಂತ ಡಿ.ಎಸ್. ಹಾಗೂ ಎ.ಬಿ. ರುದ್ರಮ್ಮ ಸದಸ್ಯರಾಗಿದ್ದಾರೆ ಎಂದು ಸಂಘದ ನಿಕಟಪೂರ್ವ ಪ್ರಧಾನ ಕಾರ್ಯದರ್ಶಿ ಮಂಜುಶ್ರೀ ಎಂ. ಕಡಕೋಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗಡಿಪಾರು ಆದೇಶ ಪ್ರಶ್ನಿಸಿದ್ದ ತಿಮರೋಡಿ ಅರ್ಜಿ ವಜಾ



**ಬೆಂಗಳೂರು, ಏ.30:** ಸಾಮಾಜಿಕ ಹೋರಾಟಗಾರ ಮಹೇಶ್ ಶೆಟ್ಟಿ ತಿಮರೋಡಿ ಅವರ ಗಡಿಪಾರು ಆದೇಶಕ್ಕೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್ ಮಹತ್ವದ ಆದೇಶ ನೀಡಿದ್ದು, ಗಡಿಪಾರು ಆದೇಶವನ್ನು ಪ್ರಶ್ನಿಸಿದ್ದ ಅರ್ಜಿಯನ್ನು ನ್ಯಾಯಾಲಯ ವಜಾಗೊಳಿಸಿದೆ. ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಂ ಅವರಿದ್ದ ಏಕಸದಸ್ಯ ಪೀಠವು ಈ ಪ್ರಕರಣದ ವಿಚಾರಣೆ ನಡೆಸಿತು. ಗಡಿಪಾರು ಆದೇಶವನ್ನು ಪ್ರಶ್ನಿಸಲು ಈಗಾಗಲೇ ಕಾನೂನಿನಲ್ಲಿ ಅವಕಾಶಗಳಿದ್ದು, ಅರ್ಜಿದಾರರು ನೇರವಾಗಿ ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸುವುದು ಊರ್ಜಿತವಲ್ಲ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಈ ಆದೇಶದ ವಿರುದ್ಧ ಸರ್ಕಾರದ ಗೃಹ ಕಾರ್ಯದರ್ಶಿಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿದೆ ಎಂದು ತಿಳಿಸಿದ ನ್ಯಾಯಪೀಠ, ಮುಂದಿನ ಎರಡು ವಾರಗಳ ಕಾಲ ತಿಮರೋಡಿ ವಿರುದ್ಧ ಯಾವುದೇ ಕಠಿಣ ಕ್ರಮ ಕೈಗೊಳ್ಳದಂತೆ ಸರ್ಕಾರಕ್ಕೆ ಸೂಚನೆ ನೀಡಿದೆ.ಇದೇ ವೇಳೆ, ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಮತ್ತು ಅವರ ಕುಟುಂಬದವರ ವಿರುದ್ಧ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಬಳಸಿ ಮಾನಹಾನಿಕರ ಪೋಸ್ಟ್ ಸೃಷ್ಟಿಸುತ್ತಿರುವ ಆಪಾದನೆ ಬಗ್ಗೆ ಹೈಕೋರ್ಟ್ ತೀವ್ರವಾಗಿ ಪ್ರತಿಕ್ರಿಯಿಸಿದೆ. ಹೆಗ್ಗಡೆ ಕುಟುಂಬದವರ ಫೋಟೋಗಳನ್ನು ಎಐ ಮೂಲಕ ತಿರುಚಿ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳಲಾಗುತ್ತಿದೆ ಎಂಬ ದೂರಿನ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಸೇರಿದಂತೆ ಗೂಗಲ್, ಮೆಟಾ (ಫೇಸ್ಬುಕ್), ವಾಟ್ಸಾಪ್ ಮತ್ತು ಇನ್ಸ್ಟಾಗ್ರಾಂ ಸಂಸ್ಥೆಗಳಿಗೆ ನ್ಯಾಯಾಲಯ ನೋಟಿಸ್ ಜಾರಿ ಮಾಡಿದೆ.ಧರ್ಮಸ್ಥಳದ ಪರ ವಕೀಲ ಎಸ್. ರಾಜಶೇಖರ್ ಅವರು ವಾದ ಮಂಡಿಸಿ, ಸೌಜನ್ಯಾ ಪ್ರಕರಣವನ್ನು ಮುಂದಿಟ್ಟುಕೊಂಡು ಕೆಲವರು ಉದ್ದೇಶಪೂರ್ವಕವಾಗಿ ಎಐ ತಂತ್ರಜ್ಞಾನ ಬಳಸಿ ಕುಟುಂಬದ ಘನತೆಗೆ ಕುಂದು ತರುತ್ತಿದ್ದಾರೆ. ಇಂತಹ ಕಂಟೆಂಟ್‌ಗಳನ್ನು ಕೂಡಲೇ ನಿರ್ಬಂಧಿಸಬೇಕು ಎಂದು ಮನವಿ ಮಾಡಿದರು. ಈ ಅರ್ಜಿಯನ್ನು ಪುರಸ್ಕರಿಸಿದ ನ್ಯಾಯಾಲಯವು ಸಂಬಂಧಪಟ್ಟ ಸಂಸ್ಥೆಗಳಿಗೆ ವಿವರಣೆ ಕೋರಿ ನೋಟಿಸ್ ನೀಡಿದೆ.

### ನವೀಕರಿಸಬಹುದಾದ ಇಂಧನ ವಲಯಕ್ಕೆ ತಾತ್ಕಾಲಿಕ ರಿಲೀಫ್

## ಸಿಇಆರ್‌ಸಿ ಡಿವಿಯೇಷನ್ ಸೆಟಲ್ಮೆಂಟ್ ಮೆಕಾನಿಸಂ ಪರಿಷ್ಕೃತ ನಿಯಮಾವಳಿಗೆ ಹೈಕೋರ್ಟ್ ಮಧ್ಯಂತರ ತಡೆಯಾಜ್ಞೆ

**ಬೆಂಗಳೂರು, ಏ.30–** ಇದೇ ಎಪ್ರಿಲ್ 1ರಿಂದ ಜಾರಿಗೆ ಬರುವಂತೆ ಕೇಂದ್ರ ವಿದ್ಯುತ್ ನಿಯಂತ್ರಣ ಆಯೋಗ (ಸಿಇಆರ್‌ಸಿ) 2024ರಲ್ಲಿ ಜಾರಿಗೆ ತಂದಿರುವ ಡಿವಿಯೇಷನ್ ಸೆಟಲ್ಮೆಂಟ್ ಮೆಕಾನಿಸಂ (ಡಿಎಸ್‌ಎಂ) ಪರಿಷ್ಕೃತ ನಿಯಮಾವಳಿಗೆ ಹೈಕೋರ್ಟ್ ಮಧ್ಯಂತರ ತಡೆಯಾಜ್ಞೆ ನೀಡಿ ಆದೇಶ ನೀಡಿದೆ.

ರಾಷ್ಟ್ರೀಯ ಸೌರಶಕ್ತಿ ಫೆಡರೇಷನ್ ಆಫ್ ಇಂಡಿಯಾ, ರಿನ್ಯೂ ವಿಂಡ್ ಎನರ್ಜಿ (ಟಿಎನ್ 2), ಸೆಂಬ್‌ಕಾರ್ಪ್ ಗ್ರೀನ್ ಎನರ್ಜಿ, ಜೆಎಸ್‌ಡಬ್ಲ್ಯೂ ನಿಯೋ ಎನರ್ಜಿ ಮತ್ತಿತರ ಪವನ ವಿದ್ಯುತ್ ಉತ್ಪಾದನಾ ಕಂಪನಿಗಳು ಸಲ್ಲಿಸಿದ್ದ ಅರ್ಜಿಗಳನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಕೆ.ಎಸ್. ಹೇಮಲೇಖಾ ಅವರಿದ್ದ ಏಕಸದಸ್ಯ ಪೀಠ ಈ ಮಧ್ಯಂತರ ಆದೇಶ ನೀಡಿದೆ.

ಈ ಆದೇಶದಿಂದ ನವೀಕರಿಸ ಬಹುದಾದ ಇಂಧನ ವಲಯಕ್ಕೆ ತಾತ್ಕಾಲಿನ ನಿರಾಳತೆ ಸಿಕ್ಕಂತಾಗಿದೆ.

ಅರ್ಜಿಯ ಪರಿಗಣನೆ ಬಾಕಿ ಇದೆ ಮತ್ತು ಅರ್ಜಿದಾರರು ಹಿಂದಿನ ಡಿಎಸ್‌ಎಂ ಪದ್ಧತಿಯಡಿಯಲ್ಲಿ ಮುಂದುವರಿಯಲು ಸಿದ್ಧರಿದ್ದಾರೆ. ಹಾಗಾಗಿ ಸದ್ಯಕ್ಕೆ ಸಿಇಆರ್ಸಿ ಪರಿಷ್ಕೃತ ನಿಯಮಗಳನ್ನು ಜಾರಿಗೊಳಿಸಬಾರದು ಎಂದು ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಿ ವಿಚಾರಣೆಯನ್ನು ಮುಂದೂಡಿತು.

ಇದೇ ವೇಳೆ ಸಿಇಆರ್‌ಸಿ, ಭಾರತೀಯ ಹವಾಮಾನ ಇಲಾಖೆ, ರಾಷ್ಟ್ರೀಯ ಮಧ್ಯಮ ಶ್ರೇಣಿಯ ಹವಾಮಾನ ಮುನ್ಸೂಚನೆ ಮತ್ತು ಭಾರತದ ಗ್ರಿಡ್ ನಿಯಂತ್ರಣ ಕೇಂದ್ರಕ್ಕೆ ನೋಟಿಸ್ ಕಳಿಸಿ ಆಕ್ಷೇಪಣೆ ಸಲ್ಲಿಸಲು ಸೂಚನೆ ನೀಡಿದೆ.ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ನವೀಕರಿಸಬಹುದಾದ ಇಂಧನ ಉತ್ಪಾದನೆ (ಸೌರ/ಪವನ) ಸಾಂಪ್ರದಾಯಿಕ ಮೂಲಗಳಿಗಿಂತ ಭಿನ್ನವಾಗಿ ಹವಾಮಾನ ಅವಲಂಬಿತ ವಾಗಿದೆ ಮತ್ತು ಅದು ನಿಯಂತ್ರಣಕ್ಕೆ ಸಿಗಲಾರದು.

ಆದರೆ ಸಿಇಆರ್‌ಸಿ 2003ರ ವಿದ್ಯುತ್ ಕಾಯ್ದೆಯ ಸೆಕ್ಷನ್ 178 (3)ರ ಅಡಿಯಲ್ಲಿ ಕಡ್ಡಾಯ ಪೂರ್ವ ಪ್ರಕಟಣೆಯನ್ನು ಪಾಲಿಸದೆಯೇ ಆಕ್ಷೇಪಾರ್ಹ ನಿಯಮಗಳು 6 (2) (ಬಿ) ಮತ್ತು 8 (4)ಗಳ ಅಧಿಸೂಚನೆ ಹೊರಡಿಸಲಾಗಿದೆ ಎಂದು ವಿವರಿಸಿದರು.

ಅಲ್ಲದೆ, ಎಪ್ರಿಲ್ 1 ರಿಂದ ಜಾರಿಗೆ ಬಂದ ಸಿಇಆರ್ಸಿಯ ಹೊಸದಾಗಿ ಡಿಎಂಸಿ ಅಡಿಯಲ್ಲಿ, ಪ್ರತಿ ಪೂಲಿಂಗ್ ಸ್ಟೇಷನ್ ಅಥವಾ ಪ್ರತಿ ಉತ್ಪಾದನಾ ಕೇಂದ್ರಕ್ಕೆ ಮುಂದಿನ ದಿನ ಮತ್ತು ಮುಂದಿನ ವಾರ ನವೀಕರಿಸ ಬಹುದಾದ ವಿದ್ಯುತ್ ಉತ್ಪಾದನೆ ಯನ್ನು ಪಾಲುದಾರರು ಮುಂಚಿತವಾಗಿ ಘೋಷಿಸಬೇಕು. ಡಿಎಸ್‌ಎಂ ಪದ್ಧತಿಯಡಿ ಘೋಷಿತ ಮೌಲ್ಯದಿಂದ ಕೊರತೆ ಅಥವಾ ಹೆಚ್ಚುವರಿ ವಿದ್ಯುತ್ ಸರಬರಾಜಿಗೆ ಸಂಬಂಧಿಸಿದಂತೆ ಕಠಿಣ ವಿಚಲನ ಬಾಂಡ್‌ಗಳನ್ನು ವಿಧಿಸುತ್ತದೆ ಮತ್ತು ಹೆಚ್ಚಿನ ದಂಡಗಳನ್ನು ಸಹ ಒಳಗೊಂಡಿದೆ ಎಂದು ನ್ಯಾಯಪೀಠಕ್ಕೆ ತಿಳಿಸಿದರು.

ವಾದ ಆಲಿಸಿದ ನ್ಯಾಯಪೀಠ, ಹೊಸ ನಿಯಮಗಳಿಗೆ ಮಂದ್ಯಂತರ ತಡೆ ನೀಡಿ ವಿಚಾರಣೆಯನ್ನು

### ಇಂದು ಕಾರ್ಮಿಕರ ದಿನಾಚರಣೆ: ಇಎಸ್‌ಐಸಿ ಸೌಲಭ್ಯ ವ್ಯಾಪ್ತಿಗೆ ಅತ್ತೆ, ಮಾವ ಸೇರ್ಪಡೆ

## ಕಾರ್ಮಿಕರ ಆದಾಯ ಮಿತಿ 30 ಸಾವಿರಕ್ಕೆ ಹೆಚ್ಚಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸು

**ಬೆಂಗಳೂರು, ಏ.30:** ವಿವಿಧ ಕಾರ್ಖಾನೆಗಳು, ಅಂಗಡಿ, ಮುಂಗಟ್ಟು ಮತ್ತಿತರೆ ಕಡೆಗಳಲ್ಲಿ ಕಾರ್ಯನಿರ್ವಹಿಸು ತ್ತಿರುವ ಕಾರ್ಮಿಕರು ಇಎಸ್‌ಐಸಿ ಸಾಮಾಜಿಕ ಭದ್ರತಾ ಯೋಜನೆಯಡಿ ಸೌಲಭ್ಯ ಪಡೆಯಲು ಇರುವ ಆದಾಯ ಮಿತಿಯನ್ನು 21 ಸಾವಿರದಿಂದ 30 ಸಾವಿರಕ್ಕೆ ಹೆಚ್ಚಿಸುವಂತೆ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಲಾಗಿದೆ.

ಇದೇ ರೀತಿ ಇಎಸ್‌ಐಸಿ ಸೌಲಭ್ಯ ಪಡೆಯಲು ಕಾರ್ಮಿಕನ ತಂದೆ, ತಾಯಿ ಜೊತೆಗೆ ಅತ್ತೆ ಮಾವನಿಗೂ ಅವಕಾಶ ಕಲ್ಪಿಸಿದ್ದು, ಇದೀಗ ನೋಂದಣಿ ಪ್ರಕ್ರಿಯೆ ಆರಂಭವಾಗಿದೆ. ಮೇ 1ರಂದು ಎಲ್ಲೆಡೆ ಕಾರ್ಮಿಕರ ದಿನ ಆಚರಿಸುತ್ತಿದ್ದು, ಈ ಸಂದರ್ಭದಲ್ಲಿ ಈ ಎರಡು ಉಪಕ್ರಮಗಳು ಕಾರ್ಮಿಕ ವಲಯಕ್ಕೆ ಅತ್ಯಂತ ಮಹತ್ವದ್ದಾಗಿದ್ದು, ಬಹುದಿನಗಳ ಬೇಡಿಕೆ ಈಡೇರುತ್ತಿ ರುವುದು ವಿಶೇಷವಾಗಿದೆ.

ರಾಜ್ಯದಲ್ಲಿ ಪ್ರಸ್ತುತ ಇಎಸ್‌ಐಸಿ ಯೋಜನೆಯಡಿ 35.33 ಲಕ್ಷ ಕಾರ್ಮಿಕರು ನೋಂದಣಿಯಾಗಿದ್ದು, ಇಎಸ್‌ಐಸಿ ಸೌಲಭ್ಯ ಪಡೆಯಲು ಕಾರ್ಮಿಕನ ಇಬ್ಬರು ಮಕ್ಕಳ ಜೊತೆ ತಂದೆ, ತಾಯಿಗೂ ಸೌಲಭ್ಯ ಕಲ್ಪಿಸಲಾಗುತ್ತಿದೆ. ಈ ವ್ಯಾಪ್ತಿಗೆ ಇದೀಗ ಅತ್ತೆ, ಮಾವನನ್ನು ಸಹ ಸೇರಿಸಲಾಗಿದೆ.

ಇದರಿಂದ ರಾಜ್ಯದಲ್ಲಿ ಒಟ್ಟು 2.5 ಕೋಟಿ ಇಎಸ್‌ಐಸಿ ಸೌಲಭ್ಯ ಪಡೆಯಲು ಅರ್ಹತೆ ಪಡೆಯಲಿದ್ದಾರೆ. ಅಂದರೆ ರಾಜ್ಯದ ಒಟ್ಟಾರೆ ಜನ ಸಂಖ್ಯೆಯ ಶೇ 40 ರಷ್ಟು ಮಂದಿ ಇ.ಎಸ್.ಐ.ಸಿ ವ್ಯಾಪ್ತಿಗೆ ಒಳಪಡಲಿದ್ದಾರೆ.

ಇಎಸ್‌ಐಸಿ ಸೌಲಭ್ಯ ವ್ಯಾಪ್ತಿಗೆ ಅತ್ತೆ, ಮಾವ ಅವರನ್ನು ನೋಂದಣಿ ಮಾಡುವ ಕಾರ್ಯ ನಡೆಯುತ್ತಿದೆ. ಬಹುದಿನಗಳ ಈ ಬೇಡಿಕೆಗೆ ಕೇಂದ್ರ ಸರ್ಕಾರ ಇತ್ತೀಚೆಗೆ ಅನುಮತಿ ನೀಡಿದೆ. ಇದನ್ನು ದುರುಪಯೋಗ ಪಡಿಸಿಕೊಂಡು ಎರಡು ಕಡೆಗಳಲ್ಲಿ ನೋಂದಣಿಯಾಗು ವುದನ್ನು ತಪ್ಪಿಸಲು ಆಧಾರ್ ಸಂಖ್ಯೆಯನ್ನು ಕಡ್ಡಾಯ ಗೊಳಿಸಿದ್ದು, ಇದಕ್ಕಾಗಿ ವ್ಯಾಪಕ ನಿಗಾ ವ್ಯವಸ್ಥೆಯನ್ನು ಅಳವಡಿಸಲಾಗಿದೆ.

ಒಬ್ಬ ಕಾರ್ಮಿಕನಿಗೆ 60 ವರ್ಷದವರೆಗೆ ಈ ವೈದ್ಯಕೀಯ ಮತ್ತು ಇತರ ಸೌಲಭ್ಯಗಳು ದೊರೆಯಲಿವೆ. ನಂತರ ಇಎಸ್‌ಐಸಿಯ 125 ಆಸ್ಪತ್ರೆಗಳಲ್ಲಿ ಆರೋಗ್ಯ ಸೌಲಭ್ಯ ಮಾತ್ರ ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಇದಕ್ಕಾಗಿ ವಾರ್ಷಿಕ 120 ರೂ. ವಂತಿಕೆ ಪಾವತಿಸ ಬೇಕಾಗುತ್ತದೆ. ಆದರೆ ಹಿರಿಯ ನಾಗರಿಕರು ವಿವಿಧ ಭತ್ಯೆಗಳಿಗೆ ಅವರು ಅರ್ಹರಲ್ಲ.

ಈ ಸಂಬಂಧ ಕೇಂದ್ರದ ಮೇಲೆ ಒತ್ತಡ ಹೇರಿದ್ದು, ಶೀಘ್ರದಲ್ಲಿ ಇದು ಅನುಷ್ಠಾನಕ್ಕೆ ಬರುವ ನಿರೀಕ್ಷೆ ಇದೆ.

## ಸಂತ್ರಸ್ತೆ ಅಪಹರಣ ಪ್ರಕರಣ ರದ್ದು ಕೋರಿದ್ದ ಅರ್ಜಿ ಹಿಂದಕ್ಕೆ ಪಡೆದ ಎಚ್.ಡಿ.ರೇವಣ್ಣ



**ಬೆಂಗಳೂರು, ಏ.30:** ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರಿಂದ ಅತ್ಯಾಚಾರಕ್ಕೆ ಒಳಗಾದ ಸಂತ್ರಸ್ತೆಯನ್ನು ಅಪಹರಿಸಿದ ಆರೋಪ ಸಂಬಂಧ ತಮ್ಮ ವಿರುದ್ಧದ ವಿಚಾರಣೆಯನ್ನು ಮುಂದುವರಿಸು ವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ನಿರ್ದೇಶನ ನೀಡಿರುವ ಹಿನ್ನೆಲೆಯಲ್ಲಿ ಶಾಸಕ ಎಚ್.ಡಿ. ರೇವಣ್ಣ ಅವರು ಪ್ರಕರಣ ರದ್ದು ಕೋರಿದ್ದ ಅರ್ಜಿಯನ್ನು ಹಿಂಪಡೆದುಕೊಂಡಿದ್ದಾರೆ.

ಪ್ರಕರಣ ಸಂಬಂಧ ಮೈಸೂರು ಜಿಲ್ಲೆಯ ಕೆ.ಆರ್. ಪೇಟೆ ಠಾಣೆಗೆ ಸಂತ್ರಸ್ತೆಯ ಪುತ್ರ ನೀಡಿದ್ದ ದೂರಿನ ತನಿಖೆ ನಡೆಸಿದ್ದ ಸಿಐಡಿ ಪೊಲೀಸರು, ತಮ್ಮ ವಿರುದ್ಧ ವಿಚಾರಣಾ ನ್ಯಾಯಾಲಯಕ್ಕೆ ಸಲ್ಲಿಸಿರುವ ಆರೋಪಪಟ್ಟಿ ರದ್ದು ಕೋರಿ ಹೆಚ್.ಡಿ. ರೇವಣ್ಣ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸುನೀಲ್ ದತ್ ಯಾದವ್ ಅವರಿದ್ದ ನ್ಯಾಯಪೀಠ ಕಾನೂನು ರೀತಿಯಲ್ಲಿ ವಿಚಾರಣೆ ಮುಂದುವರೆಸುವಂತೆ ಆದೇಶ ನೀಡಿತ್ತು.ಅರ್ಜಿಗೆ ಸಂಬಂಧಿಸಿದಂತೆ ವಿಚಾರಣೆ ವೇಳೆ ರೇವಣ್ಣ ಪರ ವಕೀಲರು, ವಾದ ಮಂಡನೆಗೆ ಕಾಲಾವಕಾಶ ನೀಡಬೇಕು ಎಂದು ಕೋರಿದ್ದರು. ಇದಕ್ಕೆ ಆಕ್ಷೇಪಿಸಿದ್ದ ಸರ್ಕಾರಿ ಅಭಿಯೋಜಕರು, ಪ್ರಕರಣದಲ್ಲಿ ದೋಷಾರೋಪ ಹೊರಿಸುವ ಪ್ರಕ್ರಿಯೆಗೆ ಈ ಹಿಂದೆ ನೀಡಲಾಗಿದ್ದ ತಡೆಯಾಜ್ಞೆಯನ್ನು ತೆರವುಗೊಳಿಸಿ ಹೈಕೋರ್ಟ್ 2026ರ ಫೆಬ್ರುವರಿ 5ರಂದು ಆದೇಶಿಸಿತ್ತು. ಆದ್ದರಿಂದ ಈಗಾಗಲೇ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ವಿಚಾರಣೆ ಆರಂಭಿಸಿದೆ ಎಂದು ನ್ಯಾಯಪೀಠಕ್ಕೆ ತಿಳಿಸಿದರು.

ಅದಕ್ಕೆ ಪ್ರತಿಕ್ರಿಯಿಸಿದ್ದ ಪೀಠ, ದೋಷಾರೋಪ ನಿಗದಿ ಪ್ರಕ್ರಿಯೆ ನಡೆಸುವುದಕ್ಕೆ ನೀಡಲಾಗಿದ್ದ ತಡೆಯಾಜ್ಞೆ ತೆರವುಗೊಳಿಸಿ, ಕಾನೂನು ಪ್ರಕಾರ ವಿಚಾರಣೆ ಮುಂದುವರಿಯಬಹುದಾಗಿದೆ ಎಂದು ಸೂಚಿಸಿತ್ತು.

ಈ ಹಿನ್ನೆಲೆಯಲ್ಲಿ ರೇವಣ್ಣ ಪರ ವಕೀಲರು ಅರ್ಜಿಯನ್ನು ಹಿಂಪಡೆದಿದ್ದಾರೆ. ಪ್ರಕರಣದ ಹಿನ್ನೆಲೆ: ಪ್ರಜ್ವಲ್ ರೇವಣ್ಣ ಅವರಿಂದ ಅತ್ಯಾಚಾರಕ್ಕೆ ಒಳಗಾಗಿರುವ ಆರೋಪ ಮಾಡಿದ್ದ ಮನೆಕೆಲಸದ ಮಹಿಳೆಯನ್ನು ಹೆಚ್.ಡಿ. ರೇವಣ್ಣ, ಅವರ ಪತ್ನಿ ಭವಾನಿ ಸೇರಿದಂತೆ 9 ಮಂದಿ ಆರೋಪಿಗಳು ಅಪಹರಿಸಿದ್ದಾರೆ ಎಂದು ಸಂತ್ರಸ್ತೆಯ ಪುತ್ರ ನೀಡಿದ್ದ ದೂರಿನ ಅನ್ವಯ ಮೈಸೂರಿನ ಕೆ.ಆರ್. ಪೇಟೆ ಪೊಲೀಸ್ ಠಾಣೆಯಲ್ಲಿ 2025ರ ಮೇ.2ರಂದು ಎಫ್‌ಐಆರ್ ದಾಖಲಾಗಿತ್ತು.ಪೊಲೀಸರು ಪ್ರಕರಣ ಸಂಬಂಧ ತನಿಖೆ ನಡೆಸಿ ವಿಶೇಷ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

2024ರ ಆಗಸ್ಟ್ 17ರಂದು ಕಾಗ್ನಿಜೆನ್ಸ್ ಸ್ವೀಕರಿಸಿದ್ದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ, ಆರೋಪಿಗಳ ವಿರುದ್ಧ ದೋಷಾರೋಪ ನಿಗದಿ ಮಾಡಲು ನಿರ್ಧರಿಸಿತ್ತು. ಈ ಪ್ರಕ್ರಿಯೆ ಮುಂದೂಡುವಂತೆ ವಿಶೇಷ ನ್ಯಾಯಾಲಯಕ್ಕೆ ಹೈಕೋರ್ಟ್ ಸೂಚಿಸಿ, 2025ರ ಜನವರಿ 17ರಂದು ಮಧ್ಯಂತರ ಆದೇಶ ಮಾಡಿತ್ತು. ಅದನ್ನು 2026ರ ಫೆ. 5ರಂದು ಹೈಕೋರ್ಟ್ ತೆರವುಗೊಳಿಸಿತ್ತು.


# ಪರ್ಷಿಯನ್ ಕೊಲ್ಲಿ ಇರಾನಿನ ಪ್ರತಿರೋಧದ ಸಂಕೇತ: ಅಕ್ರಮ ನೌಕಾ ದಿಗ್ಬಂಧನದ ಬಗ್ಗೆ ಅಮೆರಿಕಕ್ಕೆ ಎಚ್ಚರಿಕೆ ನೀಡಿದ ಪೆಜೆಶ್ಕಿಯಾನ್



**ಟೆಹ್ರಾನ್, ಏ.30:** ಅಮೆರಿಕಕ್ಕೆ ಬಲವಾದ ಸಂದೇಶವನ್ನು ನೀಡಿರುವ ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಗುರುವಾರ, ಪರ್ಷಿಯನ್ ಕೊಲ್ಲಿಯಲ್ಲಿ ಇರಾನ್‌ನ ಕಡಲ ಸಾರ್ವಭೌಮತ್ವವನ್ನು ದುರ್ಬಲಗೊಳಿಸುವ ಅಥವಾ ನಿರ್ಬಂಧಗಳನ್ನು ವಿಧಿಸುವ ಯಾವುದೇ ಪ್ರಯತ್ನವು ಪ್ರಾದೇಶಿಕ ಮತ್ತು ಅಂತರರಾಷ್ಟ್ರೀಯ ಸ್ಥಿರತೆಗೆ ಗಂಭೀರ ಪರಿಣಾಮಗಳನ್ನು ಬೀರುತ್ತದೆ ಎಂದು ಹೇಳಿದ್ದಾರೆ. ಪರ್ಷಿಯನ್ ಕೊಲ್ಲಿ ಇರಾನಿಯನ್ನರ ರಾಷ್ಟ್ರೀಯ ಗುರುತಿನ ಬೇರ್ಪಡಿಸಲಾಗದ ಸ್ತಂಭವಾಗಿದೆ ಮತ್ತು ಹಳೆಯ ಮತ್ತು ಹೊಸ ವಸಾಹತುಶಾಹಿಗಳ ವಿರುದ್ಧ ಮಹಾನ್ ಇರಾನಿನ ರಾಷ್ಟ್ರದ ಪ್ರತಿರೋಧದ ಪ್ರಬಲ ಸಂಕೇತವಾಗಿದೆ ಎಂದು ಪೆಜೆಶ್ಕಿಯಾನ್ ಹೇಳಿದ್ದಾರೆ ಎಂದು ಐಆರ್‌ಎನ್‌ಎ ವರದಿ ಮಾಡಿದೆ. ಪರ್ಷಿಯನ್ ಕೊಲ್ಲಿ ರಾಷ್ಟ್ರೀಯ ದಿನದಂದು, ಈ ವರ್ಷ, ಪರ್ಷಿಯನ್ ಕೊಲ್ಲಿಯ, ವಿಶೇಷವಾಗಿ ಹಾರ್ಮುಜ್ ಜಲಸಂಧಿಯ ಪ್ರಾಮುಖ್ಯ ಅಮೆರಿಕ–ಇಸ್ರೇಲಿ ಹೇರಿದ ಯುದ್ಧದ ಸಮಯದಲ್ಲಿ ಮತ್ತೊಮ್ಮೆ ಜಗತ್ತಿಗೆ ಸ್ಪಷ್ಟವಾಗಿದೆ ಎಂದು ಪೆಜೆಶ್ಕಿಯಾನ್ ಒತ್ತಿ ಹೇಳಿದರು. ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಟೆಹ್ರಾನ್ ತನ್ನ ಪರಮಾಣು ಕಾರ್ಯಕ್ರಮವನ್ನು ತ್ಯಜಿಸುವವರೆಗೆ ಅದರ ಮೇಲೆ ಕಟ್ಟುನಿಟ್ಟಾದ ಕಡಲ ಒತ್ತಡವನ್ನು ಕಾಯ್ದುಕೊಳ್ಳಲು ಯೋಜಿಸುತ್ತಿರುವುದಾಗಿ ಹೇಳಿದ ನಂತರ ಅವರ ಹೇಳಿಕೆಗಳು ಬಂದಿವೆ. ಪೆಜೆಶ್ಕಿಯನ್ ಈ ಕ್ರಮವನ್ನು ಅಂತರರಾಷ್ಟ್ರೀಯ ಕಾನೂನಿನ ಉಲ್ಲಂಘನೆ ಮತ್ತು ಜಾಗತಿಕ ಶಾಂತಿ ಮತ್ತು ಸ್ಥಿರತೆಗೆ ಬೆದರಿಕೆ ಎಂದು ಟೀಕಿಸಿದರು, ಇದನ್ನು ನೇರ ಮಿಲಿಟರಿ ಕ್ರಮಕ್ಕಿಂತ ಹೆಚ್ಚಾಗಿ ಆರ್ಥಿಕ ಮುಖಾಮುಖಿಯತ್ತ ವಿಶಾಲವಾದ ಬದಲಾವಣೆಯ ಭಾಗವಾಗಿ ರೂಪಿಸಿದರು. "ನೌಕಾ ದಿಗ್ಬಂಧನ ಮತ್ತು ನಿರ್ಬಂಧಗಳನ್ನು ವಿಧಿಸುವ ಯಾವುದೇ ಪ್ರಯತ್ನವು ಅಂತರರಾಷ್ಟ್ರೀಯ ಕಾನೂನನ್ನು ಉಲ್ಲಂಘಿಸುತ್ತದೆ, ಪ್ರದೇಶದ ಜನರು ಮತ್ತು ದೇಶಗಳ ಹಿತಾಸಕ್ತಿಗಳಿಗೆ ಹಾಗೂ ಶಾಂತಿ ಮತ್ತು ಜಾಗತಿಕ ಸ್ಥಿರತೆಗೆ ಅಪಾಯವನ್ನುಂಟುಮಾಡುತ್ತದೆ ಮತ್ತು ವಿಫಲಗೊಳ್ಳುತ್ತದೆ" ಎಂದು ಇರಾನ್‌ನಲ್ಲಿ ಪರ್ಷಿಯನ್ ಕೊಲ್ಲಿ ದಿನದ ಸಂದರ್ಭದಲ್ಲಿ ಪೆಜೆಶ್ಕಿಯನ್ ಹೇಳಿದರು. "ಇರಾನಿನ ನೌಕಾ ಪಡೆಗಳ ಧೈರ್ಯವು ಈ ಪ್ರಮುಖ ಜಲಮಾರ್ಗವು ಇಂಧನ ಸಾಗಣೆಯಲ್ಲಿ ಅದರ ಕಾರ್ಯತಂತ್ರದ ಕಾರ್ಯದ ಜೊತೆಗೆ ರಾಷ್ಟ್ರೀಯ ಸಾರ್ವಭೌಮತ್ವದ ಸಂಕೇತವಾಗಿದೆ ಮತ್ತು ಪ್ರದೇಶ ಮತ್ತು ಪ್ರಪಂಚದ ಭದ್ರತೆಯನ್ನು ಖಾತ್ರಿಪಡಿಸುವಲ್ಲಿ ಇರಾನ್ನ ನಿರಾಕರಿಸಲಾಗದ ಪಾತ್ರವನ್ನು ಪ್ರತಿಬಿಂಬಿಸುತ್ತದೆ" ಎಂದು ಅಧ್ಯಕ್ಷರು ಹೇಳಿದ್ದನ್ನು IRNA ಉಲ್ಲೇಖಿಸಿದೆ. ನೌಕಾ ದಿಗ್ಬಂಧನದ ತಂತ್ರ ಮತ್ತು ಇರಾನ್ನ ಕಡಲ ವ್ಯಾಪಾರದ ಮೇಲೆ ನಿರ್ಬಂಧಗಳನ್ನು ಹೇರುವುದು ಅಂತರರಾಷ್ಟ್ರೀಯ ಕಾನೂನಿಗೆ ವಿರುದ್ಧವಾಗಿದೆ ಎಂದು ಅಧ್ಯಕ್ಷರು ವಿವರಿಸಿದರು, ಪರ್ಷಿಯನ್ ಕೊಲ್ಲಿಯಲ್ಲಿನ ಯಾವುದೇ ಅಭದ್ರತೆಗೆ ಜವಾಬ್ದಾರಿ ಅಮೆರಿಕ ಮತ್ತು ಜಿಯೋನಿಸ್ಟ್ ಆಡಳಿತದ ಮೇಲೆ ಬೀಳುತ್ತದೆ ಎಂದು ಎಚ್ಚರಿಸಿದರು ಎಂದು ಅದು ಹೇಳಿದೆ.

ನೌಕಾಯಾನ ಸ್ವಾತಂತ್ರ್ಯದ ತತ್ವಗಳಿಗೆ ಬದ್ಧವಾಗಿರುವಾಗ, ಇಸ್ಲಾಮಿಕ್ ಗಣರಾಜ್ಯ ಆಫ್ ಇರಾನ್ ಈ ಜಲಮಾರ್ಗದ ಸುಸ್ಥಿರ ಭದ್ರತೆಯು ಕರಾವಳಿ ರಾಜ್ಯಗಳ ಸಾಮೂಹಿಕ ಸಹಕಾರ ಮತ್ತು ಪ್ರದೇಶದಿಂದ ಹೊರಗಿನವರ ವಾಪಸಾತಿಯನ್ನು ಅವಲಂಬಿಸಿದೆ ಎಂದು ಪರಿಗಣಿಸುತ್ತದೆ ಎಂದು ಅವರು ಗಮನಿಸಿದರು. ಹೊರಗಿನವರ ಉಪಸ್ಥಿತಿ ಮತ್ತು ಹಸ್ತಕ್ಷೇಪಗಳು ಪ್ರಾದೇಶಿಕ ಭದ್ರತೆಯನ್ನು ಹೆಚ್ಚಿಸುವಲ್ಲಿ ವಿಫಲವಾಗುವುದಲ್ಲದೆ, ಉದ್ವಿಗ್ನತೆಯ ಮೂಲವಾಗಿಯೂ ಕಾರ್ಯನಿರ್ವಹಿಸುತ್ತವೆ, ಪರ್ಷಿಯನ್ ಕೊಲ್ಲಿಯಲ್ಲಿ ಸುಸ್ಥಿರ ಶಾಂತಿಯನ್ನು ಭಂಗಗೊಳಿಸುತ್ತವೆ ಎಂದು ಅವರು ಗಮನಸೆಳೆದರು.

## ದಿಗ್ಬಂಧನವು ಅದ್ಭುತವಾಗಿದೆ, ಇದು 100 ಪ್ರತಿಶತ ಮೂರ್ಖತನದಿಂದ ಮುಕ್ತವಾಗಿದೆ: ಟ್ರಂಪ್



ಇರಾನ್ ವಿರುದ್ಧ ನಡೆಯುತ್ತಿರುವ ಯುಎಸ್ ನೌಕಾ ದಿಗ್ಬಂಧನವನ್ನು "ಪ್ರತಿಭೆ" ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬಣ್ಣಿಸಿದರು, ಟೆಹ್ರಾನ್ ತನ್ನ ಪರಮಾಣು ಮಹತ್ವಾಕಾಂಕ್ಷೆಗಳನ್ನು ಕೈಬಿಡದ ಹೊರತು ಯಾವುದೇ ಒಪ್ಪಂದವನ್ನು ತಳ್ಳಿಹಾಕುವಾಗ ಸೋಲನ್ನು ಒಪ್ಪಿಕೊಳ್ಳಬೇಕಾಗುತ್ತದೆ ಎಂದು ಪ್ರತಿಪಾದಿಸಿದರು. "ದಿಗ್ಬಂಧನವು ಅದ್ಭುತವಾಗಿದೆ. ದಿಗ್ಬಂಧನವು 100 ಪ್ರತಿಶತ ಮೂರ್ಖತನದಿಂದ ಮುಕ್ತವಾಗಿದೆ. ನಮ್ಮ ನೌಕಾಪಡೆ ಎಷ್ಟು ಉತ್ತಮವಾಗಿದೆ ಎಂಬುದನ್ನು ಇದು ತೋರಿಸುತ್ತದೆ, ನಾನು ನಿಮಗೆ ಹೇಳಬಲ್ಲೆ. ಯಾರೂ ಆಟವಾಡಲು ಹೋಗುವುದಿಲ್ಲ. ನಾವು ವಿಶ್ವದ ಶ್ರೇಷ್ಠ ಮಿಲಿಟರಿಯನ್ನು ಹೊಂದಿದ್ದೇವೆ, ಮತ್ತು ನನ್ನ ಮೊದಲ ಅವಧಿಯಲ್ಲಿ ನಾನು ಅದರಲ್ಲಿ ಹೆಚ್ಚಿನದನ್ನು ನಿರ್ಮಿಸಿದ್ದೇನೆ ಮತ್ತು ನಾವು ಅದನ್ನು ನಿರ್ಮಿಸುತ್ತಿದ್ದೇವೆ ಮತ್ತು ವಿಶ್ವದ ಎಲ್ಲಿಯಾದರೂ ಶ್ರೇಷ್ಠವಾಗಿದೆ, ಯಾರೂ ಹತ್ತಿರವೂ ಇಲ್ಲ" ಎಂದು ಟ್ರಂಪ್ ಹೇಳಿದರು. "ಅದು ವೆನೆಜುವೆಲಾ ಆಗಿರಲಿ, ಅವರು ವೆನೆಜುವೆಲಾದಲ್ಲಿ ಉತ್ತಮ ಮಿಲಿಟರಿಯನ್ನು ಹೊಂದಿದ್ದರು, ಆದರೆ ಅದು ಒಂದು ದಿನದಲ್ಲಿ ಮುಗಿದುಹೋಯಿತು, ಅದು ವಾಸ್ತವವಾಗಿ ಸುಮಾರು 48 ನಿಮಿಷಗಳಲ್ಲಿ ಮುಗಿದುಹೋಯಿತು. ಇರಾನ್, ಅದೇ ವಿಷಯ, ನನ್ನ ಪ್ರಕಾರ ಮಿಲಿಟರಿ ದೃಷ್ಟಿಯಿಂದ ನಾವು ಅವರನ್ನು ಅಳಿಸಿಹಾಕಿದ್ದೇವೆ, ಅವರ ಬಳಿ ಯಾವುದೇ ಮಿಲಿಟರಿ ಉಳಿದಿಲ್ಲ, ಸಮುದ್ರದ ತಳದಲ್ಲಿರುವ ಅವರ ನೌಕಾಪಡೆ, ವಾಯುಪಡೆ ಮತ್ತೆ ಎಂದಿಗೂ ಹಾರಾಟ ನಡೆಸುವುದಿಲ್ಲ." ಅವರು ಹೇಳಿದರು, ಹಾರ್ಮುಜ್ ಜಲಸಂಧಿಯಲ್ಲಿ ಷರತ್ತುಬದ್ಧ ಕದನ ವಿರಾಮವನ್ನು ಇರಾನ್ ಪ್ರಸ್ತಾಪಿಸಿದೆ, ಅಮೆರಿಕ ದಿಗ್ಬಂಧನವನ್ನು ತೆಗೆದುಹಾಕಿ ಯುದ್ಧವನ್ನು ಕೊನೆಗೊಳಿಸಿದರೆ ಮಿಲಿಟರಿ ಕಾರ್ಯಾಚರಣೆಯನ್ನು ನಿಲ್ಲಿಸುವುದಾಗಿ ಹೇಳಿದೆ.

# ಇರಾನ್ ತನ್ನ ಪರಮಾಣು – ಕ್ಷಿಪಣಿ ಸಾಮರ್ಥ್ಯ ಎಂದಿಗೂ ಬಿಟ್ಟುಕೊಡದು ಅಮೆರಿಕಕ್ಕೆ ಮೊಜ್ತಬಾ ಖಮೇನಿ ನೇರ ಎಚ್ಚರಿಕೆ




**ಟೆಹ್ರಾನ್, ಏ.30:** ಫೆಬ್ರವರಿ 28 ರಿಂದ ಕ್ಷಿಪಣಿಗಳ ಮೂಲಕ ಹೊರತುಪಡಿಸಿ, ಇರಾನ್ನ ಹೊಸ ಸರ್ವೋಚ್ಚ ನಾಯಕ ಮೊಜ್ತಬಾ ಅಲಿ ಖಮೇನಿ ಅವರನ್ನು ಉಲ್ಲೇಖಿಸಿರುವ ಹೇಳಿಕೆಯು, ಟೆಹ್ರಾನ್ ತನ್ನ ಪರಮಾಣು ಮತ್ತು ಕ್ಷಿಪಣಿ ಸಾಮರ್ಥ್ಯಗಳನ್ನು ತ್ಯಜಿಸಲು ನಿರಾಕರಿಸಿದೆ ಮತ್ತು ಇಸ್ಲಾಮಿಕ್ ಗಣರಾಜ್ಯದ ವಾಷಿಂಗ್ಟನ್ನೊಂದಿಗಿನ ಹಗೆತನ ತೀವ್ರಗೊಳ್ಳುತ್ತಿದ್ದಂತೆ ಅಮೆರಿಕದ ಎಲ್ಲಾ ಒತ್ತಡ ತಂತ್ರಗಳ ವಿರುದ್ಧ ಕಠಿಣ ನಿಲುವನ್ನು ಹೊಂದಿದೆ ಎಂದು ದೃಢಪಡಿಸಿದೆ. ದೂರದರ್ಶನದ ಭಾಷಣದಲ್ಲಿ ಓದಿದ ಖಮೇನಿ ಅವರ ಸಂದೇಶವು, ಇರಾನ್ನ ತಾಂತ್ರಿಕ ಮತ್ತು ಮಿಲಿಟರಿ ಸಾಮರ್ಥ್ಯಗಳು ರಾಷ್ಟ್ರೀಯ ಸ್ವತ್ತುಗಳು' ಆಗಿದ್ದು, ಅವುಗಳನ್ನು ದೇಶದ ಭೂಪ್ರದೇಶದ ಜೊತೆಗೆ ರಕ್ಷಿಸಲಾಗುತ್ತದೆ ಎಂದು ಹೇಳಿದೆ. 'ದೇಶದ ಒಳಗೆ ಮತ್ತು ಹೊರಗೆ ಇರುವ ಇರಾನಿಯನ್ನರು ನ್ಯಾನೊತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನದಿಂದ ಪರಮಾಣು ಮತ್ತು ಕ್ಷಿಪಣಿ ಸಾಮರ್ಥ್ಯಗಳವರೆಗೆ ಇರಾನ್‌ನ ಎಲ್ಲಾ ಗುರುತಿನ ಆಧಾರಿತ, ಆಧ್ಯಾತ್ಮಿಕ, ಮಾನವ, ವೈಜ್ಞಾನಿಕ, ಕೈಗಾರಿಕಾ ಮತ್ತು ತಾಂತ್ರಿಕ ಸಾಮರ್ಥ್ಯಗಳನ್ನು ರಾಷ್ಟ್ರೀಯ ಸ್ವತ್ತುಗಳಾಗಿ ಪರಿಗಣಿಸುತ್ತಾರೆ ಮತ್ತು ಅವರು ದೇಶದ ನೀರು, ಭೂಮಿ ಮತ್ತು ವಾಯುಪ್ರದೇಶವನ್ನು ರಕ್ಷಿಸುವಂತೆಯೇ ಅವುಗಳನ್ನು ರಕ್ಷಿಸುತ್ತಾರೆ' ಎಂದು ಹೇಳಿಕೆ ತಿಳಿಸಿದೆ. ಇರಾನ್ ವಿರುದ್ಧ ನೌಕಾ ದಿಗ್ಬಂಧನವನ್ನು ಉಳಿಸಿಕೊಳ್ಳುವ ಸಾಧ್ಯತೆಗಳ ಬಗ್ಗೆ ಅಮೆರಿಕ ಅಧ್ಯಕ್ಷ ಟ್ರಂಪ್ ಸಾಕಷ್ಟು ಆಶಾವಾದಿಯಾಗಿದ್ದಾರೆ, ಇಸ್ಲಾಮಿಕ್ ಗಣರಾಜ್ಯದ ಬಂದರುಗಳ ವಿರುದ್ಧ ನಿರಂತರ ಒತ್ತಡವು ಟೆಹ್ರಾನ್ ತನ್ನ ಪರಮಾಣು ಕಾರ್ಯಕ್ರಮವನ್ನು ಹೆಚ್ಚಾಗಿ ತ್ಯಜಿಸುವುದು ಮತ್ತು ಪುಷ್ಟೀಕರಿಸಿದ ಯುರೇನಿಯಂ ದಾಸ್ತಾನುಗಳನ್ನು ಹಸ್ತಾಂತರಿಸುವುದನ್ನು ಒಳಗೊಂಡಿರುವ ಶಾಂತಿ ಒಪ್ಪಂದವನ್ನು ಒಪ್ಪಿಕೊಳ್ಳುವಂತೆ ಒತ್ತಾಯಿಸುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ – ಇರಾನ್ ಸಾರ್ವಜನಿಕವಾಗಿ ಇದನ್ನು ಮಾಡಲು ತಿರಸ್ಕರಿಸಿದೆ.

ಪರಮಾಣು ಸಮಸ್ಯೆಯ ಜೊತೆಗೆ, ಹೇಳಿಕೆಯು ಪ್ರಾದೇಶಿಕ ಶಕ್ತಿಯ ಸಮತೋಲನವನ್ನು ಸಹ ಮುಟ್ಟಿತು. ಪರ್ಷಿಯನ್ ಕೊಲ್ಲಿಯಲ್ಲಿ ಅಮೆರಿಕ ಪಡೆಗಳ ಉಪಸ್ಥಿತಿಯು ಅಸ್ಥಿರತೆಯ ಪ್ರಾಥಮಿಕ ಮೂಲವಾಗಿದೆ ಎಂದು ಖಮೇನಿ ಹೇಳಿದರು ಮತ್ತು ಈ ಪ್ರದೇಶದಲ್ಲಿ ಭದ್ರತೆಯನ್ನು ತನ್ನದೇ ಆದ ದೇಶಗಳು ನಿರ್ವಹಿಸಬೇಕು ಎಂದು ಒತ್ತಾಯಿಸಿದರು.

ಹಾರ್ಮುಜ್ ಜಲಸಂಧಿಯ ಮೇಲಿನ ಇರಾನ್ನ ನಿಯಂತ್ರಣವನ್ನು ಸ್ಥಿರಗೊಳಿಸುವ ಅಂಶವಾಗಿ ಅವರು ಸೂಚಿಸಿದರು, 'ಅದರ ನೀರಿನ ತಳದಲ್ಲಿ ಹೊರತುಪಡಿಸಿ' ವಿದೇಶಿ ಶಕ್ತಿಗಳಿಗೆ ಈ ಪ್ರದೇಶದಲ್ಲಿ ಯಾವುದೇ ಸ್ಥಾನವಿಲ್ಲ ಎಂದು ಹೇಳಿದರು.

# ಅಮೆರಿಕ ಮಿಲಿಟರಿ ಕ್ರಮವನ್ನು ತೀವ್ರಗೊಳಿಸಿದರೆ ತ್ವರಿತ ಕ್ರಮದ ಬಗ್ಗೆ ಇರಾನ್ ಕಮಾಂಡರ್ ಎಚ್ಚರಿಕೆ

**ಟೆಹ್ರಾನ್, ಏ.30:** ಈ ಪ್ರದೇಶದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ, ಅಮೆರಿಕದ ಪಡೆಗಳು ಮತ್ತಷ್ಟು ಮುನ್ನಡೆದರೆ "ತ್ವರಿತ ಕ್ರಮ"ವನ್ನು ಪ್ರಾರಂಭಿಸುವುದಾಗಿ ಇರಾನ್ನ ಹಿರಿಯ ನೌಕಾ ಕಮಾಂಡರ್ ಗುರುವಾರ ಅಮೆರಿಕಕ್ಕೆ ಎಚ್ಚರಿಕೆ ನೀಡಿದ್ದಾರೆ. ತ್ವರಿತ ಗೆಲುವಿನ ಅಮೆರಿಕದ ನಿರೀಕ್ಷೆಗಳನ್ನು ಸಂಪೂರ್ಣವಾಗಿ ತಿರಸ್ಕರಿಸಿದ ಕಮಾಂಡರ್ ಶಹರಾಮ್ ಇರಾನಿ, "ಶತ್ರು ಕೆಲವೇ ದಿನಗಳಲ್ಲಿ ಇರಾನ್ ವಿರುದ್ಧ ಯುದ್ಧವನ್ನು ಮುಕ್ತಾಯಗೊಳಿಸಬಹುದು ಎಂದು ನಂಬಿದ್ದರು, ಆದರೆ ಆ ಊಹೆಯು ಈಗ ಮಿಲಿಟರಿ ವಲಯಗಳಲ್ಲಿ ಅಪಹಾಸ್ಯಕ್ಕೆ ಗುರಿಯಾಗಿದೆ" ಎಂದು ಹೇಳಿದರು.

ಯಾವುದೇ ಉಲ್ಲಂಘನೆಕ್ಕೆ ಪ್ರತಿಕ್ರಿಯೆಯಾಗಿ ನಿರ್ಣಾಯಕವಾಗಿ ಕಾರ್ಯನಿರ್ವಹಿಸಲು ಅವರು ಸಿದ್ಧರಾಗಿದ್ದಾರೆ ಎಂದು ಹೇಳುವ ಮೂಲಕ ಇರಾನ್ ಪಡೆಗಳು ಸಂಪೂರ್ಣವಾಗಿ ಬದ್ಧವಾಗಿವೆ ಎಂದು ಅವರು ಹೇಳಿದರು. ಇರಾನ್ನ ಇದುವರೆಗಿನ ಸಂಯಮವು ರಾಜತಾಂತ್ರಿಕತೆಗೆ ಬಾಗಿಲು ತೆರೆದಿಡುವ ಗುರಿಯನ್ನು ಹೊಂದಿದೆ, ಸಂಘರ್ಷವನ್ನು ಕೊನೆಗೊಳಿಸಲು ಟೆಹ್ರಾನ್ನ ಷರತ್ತುಗಳನ್ನು ಒಪ್ಪಿಕೊಳ್ಳಲು ವಾಷಿಂಗ್ಟನ್‌ಗೆ ಸಮಯವನ್ನು ನೀಡುತ್ತದೆ ಎಂದು ಅಧಿಕಾರಿ ಹೇಳಿದರು. ಆದಾಗ್ಯೂ, ಅಮೆರಿಕವು "ಹಠಮಾರಿತನ" ಎಂದು ವಿವರಿಸಿದ್ದನ್ನು ಮುಂದುವರಿಸಿದರೆ, ಅದು ಗಮನಾರ್ಹವಾಗಿ "ವಿಭಿನ್ನ ಪ್ರತಿಕ್ರಿಯೆ"ಗೆ ಸಿದ್ಧರಾಗಿರಬೇಕು ಎಂದು ಎಚ್ಚರಿಕೆಯಲ್ಲಿ ಸೇರಿಸಲಾಗಿದೆ. ಏತನ್ಮಧ್ಯೆ, ಅಮೆರಿಕ ಮಿಲಿಟರಿ ತನ್ನ ದಿಗ್ಬಂಧನ ತಂತ್ರದ ಪರಿಣಾಮಕಾರಿತ್ವವನ್ನು ಎತ್ತಿ ತೋರಿಸಿದೆ. ದಿಗ್ಬಂಧನವನ್ನು ಭೇದಿಸಲು ಪ್ರಯತ್ನಿಸುತ್ತಿದ್ದ 42ನೇ ವಾಣಿಜ್ಯ ಹಡಗನ್ನು ಅಮೆರಿಕದ ಪಡೆಗಳು ತಡೆದು ಮರುನಿರ್ದೇಶಿಸಿವೆ ಎಂದು ಯುನೈಟೆಡ್ ಸ್ಟೇಟ್ಸ್ ಸೆಂಟ್ರಲ್ ಕಮಾಂಡ್‌ನ ಕಮಾಂಡರ್ ಬ್ರಾಡ್ ಕೂಪರ್ ಹೇಳಿದ್ದಾರೆ. ಸುಮಾರು 69 ದಶಲಕ್ಷ ಬ್ಯಾರೆಲ್ ಕಚ್ಚಾ ತೈಲವನ್ನು ಹೊತ್ತ 41 ತೈಲ ಟ್ಯಾಂಕರ್‌ಗಳು ಮಾರುಕಟ್ಟೆಗಳನ್ನು ತಲುಪಲು ಸಾಧ್ಯವಾಗುತ್ತಿಲ್ಲ ಎಂದು ಅವರು ಗಮನಿಸಿದರು, ಇದು ಇರಾನ್‌ಗೆ ಅಂದಾಜು 600 ಕೋಟಿ ಡಾಲರ್ ಆದಾಯವನ್ನು ಪ್ರತಿನಿಧಿಸುತ್ತದೆ.

# 86 47 ಎಂದು ಟ್ರಂಪ್ ಟ್ವೀಟ್ ಮಾಡಿದ್ದು, ಮಾಜಿ ಎಫ್‌ಬಿಐ ನಿರ್ದೇಶಕರು ಅವರನ್ನು ಕೊಲ್ಲಲು ಸಂಕೇತಿಸಿದ ಸಂದೇಶ

**ನವದೆಹಲಿ, ಏ.30:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಗುರುವಾರ ತಮ್ಮ ಸಾಮಾಜಿಕ ಮಾಧ್ಯಮ ವೇದಿಕೆಯಲ್ಲಿ 86 47 ಅವರನ್ನು ಎಂದು ಹೇಳುವ ವಿಶಿಷ್ಟ ಸಂದೇಶವನ್ನು ಪೋಸ್ಟ್ ಮಾಡಿದ್ದಾರೆ. 86 ಎಂದರೆ ಅವರನ್ನು ಕೊಲ್ಲು ಎಂಬುದಕ್ಕೆ 86 ಎಂಬ ಪದಗುಚ್ಛವು ಒಂದು ಗುಂಪು. ಅವರು 86 ಅವರನ್ನು ಹೇಳುತ್ತಾರೆ! 86 47 ಎಂದರೆ ಅಧ್ಯಕ್ಷ ಟ್ರಂಪ್ ಅವರನ್ನು ಕೊಲ್ಲು ಎಂದು ಟ್ರಂಪ್ ಟ್ವೀಟ್ ಮಾಡಿದ್ದಾರೆ. ಮಾಜಿ ಎಫ್‌ಬಿಐ ನಿರ್ದೇಶಕ ಜೇಮ್ಸ್ ಕೊಮಿ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್ ನಂತರ "86 47" ಎಂಬ ಪದಗುಚ್ಛವು ಇತ್ತೀಚೆಗೆ ರಾಜಕೀಯ ವಿವಾದ ಮತ್ತು ಕಾನೂನು ಕ್ರಮಕ್ಕೆ ಒಳಗಾಯಿತು. 1930 ರ ದಶಕದ ಹಿಂದಿನ 86 ಸಂಖ್ಯೆಯು ಆತಿಥ್ಯ ಉದ್ಯಮದಲ್ಲಿ ಪ್ರಾಥಮಿಕವಾಗಿ ಬಳಸಲಾಗುವ ಸಾಮಾನ್ಯ ಅಮೇರಿಕನ್ ಗ್ರಾಮ್ಯ ಪದವಾಗಿದ್ದು, ಅದರ ಅರ್ಥ ಮೆನುವಿನಿಂದ ಐಟಂ ಸ್ಟಾಕ್ ಇಲ್ಲದ ಕಾರಣ ಅದನ್ನು ತೆಗೆದುಹಾಕುವುದು ಅಥವಾ ಅಶಿಸ್ತಿನ ಗ್ರಾಹಕನಿಗೆ ಸೇವೆಯನ್ನು ಹೊರಹಾಕುವುದು/ ನಿರಾಕರಿಸುವುದು ಇದನ್ನು ಹೆಚ್ಚಾಗಿ "ತೊಡೆದುಹಾಕಿ", "ರದ್ದುಗೊಳಿಸಿ" ಅಥವಾ "ತ್ಯಜಿಸಿ" ಎಂದು ಅರ್ಥೈಸಲು ಹೆಚ್ಚು ವಿಶಾಲವಾಗಿ ಬಳಸಲಾಗುತ್ತದೆ. 47 ಡೊನಾಲ್ಡ್ ಟ್ರಂಪ್ ಅವರನ್ನು ಅಮೆರಿಕ 47ನೇ ಅಧ್ಯಕ್ಷ ಎಂದು ಉಲ್ಲೇಖಿಸುತ್ತದೆ. ಅಧ್ಯಕ್ಷ ಟ್ರಂಪ್ ತಮ್ಮ ಟ್ವೀಟ್‌ನಲ್ಲಿ ಇದನ್ನು ಹತ್ಯೆ ಅಥವಾ ಕೊಲೆಗೆ "ಮಾಬ್ ಪದ" ಎಂದು ಬಣ್ಣಿಸಿದ್ದಾರೆ. ಟ್ರಂಪ್ ಈ ಪೋಸ್ಟ್ ಅನ್ನು ಸಾರ್ವಜನಿಕವಾಗಿ ತಮ್ಮ ಹತ್ಯೆಗೆ ಗುಪ್ತ ಕರೆ ಎಂದು ಲೇಬಲ್ ಮಾಡಿದ್ದಾರೆ, ಇದನ್ನು "ಮಾಬ್ ಪದ" ಎಂದು ಉಲ್ಲೇಖಿಸಿದ್ದಾರೆ.

# ಕೊಹಿನೂರ್ ವಜ್ರ ಭಾರತಕ್ಕೆ ಹಿಂದಿರುಗಿಸಿ ಬ್ರಿಟನ್ ದೊರೆಗೆ ಮೇಯರ್ ಮಮ್ದಾನಿ ಆಗ್ರಹ



**ಲಂಡನ್, ಏ.30:** ಬ್ರಿಟನ್ ದೊರೆ ಮೂರನೇ ಚಾರ್ಲ್ಸ್ ಅವರೊಂದಿಗೆ ಪ್ರತ್ಯೇಕವಾಗಿ ಮಾತನಾಡಲು ಅವಕಾಶ ಸಿಕ್ಕರೆ, ಭಾರತದ ಐತಿಹಾಸಿಕ ಕೋಹಿನೂರ್ ವಜ್ರವನ್ನು ಹಿಂದಿರುಗಿಸುವಂತೆ ಒತ್ತಾಯಿಸುತ್ತೇನೆ ಎಂದು ನ್ಯೂಯಾರ್ಕ್ ನಗರದ ಮೇಯರ್, ಭಾರತೀಯ ಮೂಲದ ಜೊಹ್ರಾನ್ ಮಮ್ದಾನಿ ಹೇಳಿದ್ದಾರೆ.

ಅಮೆರಿಕ ಪ್ರವಾಸದಲ್ಲಿರುವ ಬ್ರಿಟನ್ ದೊರೆ ಚಾರ್ಲ್ಸ್ ಅವರು ನ್ಯೂಯಾರ್ಕ್‌ನಲ್ಲಿ ಸೆಪ್ಟೆಂಬರ್ 11ರ (9/11) ಉಗ್ರರ ದಾಳಿಯಲ್ಲಿ ಮೃತಪಟ್ಟವರ ಸ್ಮರಣಾರ್ಥ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಆಗಮಿಸಿದ್ದರು. ಈ ಕಾರ್ಯಕ್ರಮಕ್ಕೂ ಕೆಲವೇ ಗಂಟೆಗಳ ಮುನ್ನ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಮ್ದಾನಿ, ಈ ವಿಚಾರವನ್ನು ಪ್ರಸ್ತಾಪಿಸಿದ್ದಾರೆ.

ದೊರೆಯವರೊಂದಿಗೆ ಪ್ರತ್ಯೇಕವಾಗಿ ಮಾತನಾಡಲು ನನಗೆ ಅವಕಾಶ ದೊರೆತರೆ, ಖಂಡಿತವಾಗಿಯೂ ಕೊಹಿನೂರ್ ವಜ್ರವನ್ನು ಭಾರತಕ್ಕೆ ಮರಳಿಸುವಂತೆ ಅವರನ್ನು ಪ್ರೋತ್ಸಾಹಿಸುತ್ತೇನೆ ಎಂದು ಅವರು ತಿಳಿಸಿದ್ದಾರೆ. ಸ್ಮಾರಕ ಕಾರ್ಯಕ್ರಮದ ವೇಳೆ ದೊರೆ ಚಾರ್ಲ್ಸ್ ಅವರು ಮಮ್ದಾನಿ ಅವರೊಂದಿಗೆ ಕೆಲಕಾಲ ಮಾತುಕತೆ ನಡೆಸಿದ್ದಾರೆ. ಆದರೆ, ಈ ವೇಳೆ ವಜ್ರದ ವಿಚಾರ ಪ್ರಸ್ತಾಪವಾಯಿತೇ ಎಂಬ ಬಗ್ಗೆ ಬಕಿಂಗ್ ಹ್ಯಾಮ್ ಅರಮನೆ ಹಾಗೂ ಮೇಯರ್ ಕಚೇರಿ ಯಾವುದೇ ಪ್ರತಿಕ್ರಿಯೆ ನೀಡಿಲ್ಲ ಎಂದು ಪತ್ರಿಕಾ ವರದಿ ತಿಳಿಸಿದೆ.

105.6 ಕ್ಯಾರೆಟ್ ತೂಕದ ಕೊಹಿನೂರ್ ವಜ್ರವನ್ನು ಬ್ರಿಟಿಷ್ ವಸಾಹತುಶಾಹಿ ಆಳ್ವಿಕೆಯ ಶೋಷಣೆಯ ಸಂಕೇತವೆಂದು ಪರಿಗಣಿಸಲಾಗಿದೆ. 1849ರಲ್ಲಿ ಪಂಜಾಬನ್ನು ವಶಪಡಿಸಿಕೊಂಡ ನಂತರ, ಈಸ್ಟ್ ಇಂಡಿಯಾ ಕಂಪನಿಯು ಲಾಹೋರ್ ಒಪ್ಪಂದದ ಮೂಲಕ ಈ ವಜ್ರವನ್ನು ತನ್ನ ಸುಪರ್ದಿಗೆ ತೆಗೆದುಕೊಂಡಿತ್ತು. ಬಳಿಕ 1850ರಲ್ಲಿ ಇದನ್ನು ಬ್ರಿಟನ್ನಿನ ರಾಣಿ ವಿಕ್ಟೋರಿಯಾ ಅವರಿಗೆ ಹಸ್ತಾಂತರಿಸಲಾಯಿತು. ಪ್ರಸ್ತುತ ಈ ವಜ್ರವು ಲಂಡನ್‌ನ ಟವರ್‌ನಲ್ಲಿರುವ ಬ್ರಿಟಿಷ್ ರಾಜಮನೆತನದ ಕಿರೀಟದಲ್ಲಿದೆ.

ವಸಾಹತುಶಾಹಿ ಆಳ್ವಿಕೆಯಲ್ಲಿ ತಮ್ಮಿಂದ ಕಿತ್ತುಕೊಳ್ಳಲಾದ ಈ ಬೆಲೆಬಾಳುವ ಐತಿಹಾಸಿಕ ಕಲಾಕೃತಿಯನ್ನು ಮರಳಿಸುವಂತೆ ಭಾರತವು ಈ ಹಿಂದಿನಿಂದಲೂ ಬ್ರಿಟನ್‌ನನ್ನು ನಿರಂತರವಾಗಿ ಆಗ್ರಹಿಸುತ್ತಾ ಬಂದಿದೆ.

# ಜಮ್ಮು–ಕಾಶ್ಮೀರವನ್ನು ಪಾಕಿಸ್ತಾನದ ಭಾಗ ಎಂದು ತೋರಿಸಿದ ನೇಪಾಳ ಏರ್‌ಲೈನ್ಸ್

## ಆಕ್ರೋಶದ ಬೆನ್ನಲ್ಲೇ ನಕ್ಷೆಯಲ್ಲಿನ ಲೋಪ ಎಂದು ಕ್ಷಮೆ

**ಕಠ್ಮಂಡು, ಏ.30:** ನೇಪಾಳದ ಸರಕಾರಿ ಒಡೆತನದ ವಿಮಾನ ಯಾನ ಸಂಸ್ಥೆ ನೇಪಾಳ ಏರ್‌ಲೈನ್ಸ್ ತನ್ನ ವೈಮಾನಿಕ ಜಾಲದ ನಕ್ಷೆಯಲ್ಲಿ ಜಮ್ಮು ಮತ್ತು ಕಾಶ್ಮೀರವನ್ನು ಪಾಕಿಸ್ತಾನದ ಭಾಗ ಎಂದು ತಪ್ಪಾಗಿ ತೋರಿಸಿದೆ. ಈ ಕುರಿತು ಆಕ್ರೋಶ ವ್ಯಕ್ತವಾದ ಬೆನ್ನಲ್ಲೇ ನಕ್ಷೆಯಲ್ಲಿನ ಲೋಪ ಎಂದು ವಿಮಾನ ಯಾನ ಸಂಸ್ಥೆ ಕ್ಷಮೆಯಾಚಿಸಿದೆ.

ಬುಧವಾರ ನೇಪಾಳ ಸರಕಾರಿ ಒಡೆತನದ ವಿಮಾನ ಸಂಸ್ಥೆ ತನ್ನ ಸಾಮಾಜಿಕ ಮಾಧ್ಯಮ ಖಾತೆಯಲ್ಲಿ ಕೇಂದ್ರಾಡಳಿತ ಪ್ರದೇಶಗಳಾದ ಜಮ್ಮು ಮತ್ತು ಕಾಶ್ಮೀರ ಹಾಗೂ ಲಡಾಖ್ ಅನ್ನು ಪಾಕಿಸ್ತಾನದ ಪ್ರಾಂತ್ಯಗಳು ಎಂದು ತೋರಿಸುವ ಮಾರ್ಗ ನಕ್ಷೆಯನ್ನು ಹಂಚಿಕೊಂಡ ಬೆನ್ನಿಗೇ ಈ ವಿವಾದ ಭುಗಿಲೆದ್ದಿತ್ತು. ತಕ್ಷಣವೇ ಈ ಮಾರ್ಗ ನಕ್ಷೆಯ ಪೋಸ್ಟ್ ಎಕ್ಸ್ ಹಾಗೂ ಫೇಸ್ ಬುಕ್ ನಲ್ಲಿ ವೈರಲ್ ಆಗಿದ್ದು, ಭಾರತೀಯ ಬಳಕೆದಾರರು ವಿಮಾನಯಾನ ಸಂಸ್ಥೆಯನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ತಕ್ಷಣವೇ ಬೈಕಾಟ್ ನೇಪಾಳ ಏರ್‌ಲೈನ್ಸ್ ಎಂಬ ಹ್ಯಾಶ್ ಟ್ಯಾಗ್ ಟ್ರೆಂಡಿಂಗ್ ಆಗಿದ್ದು, ಈ ಲೋಪದ ವಿರುದ್ಧ ನೇಪಾಳದೊಂದಿಗೆ ರಾಜತಾಂತ್ರಿಕ ಪ್ರತಿಭಟನೆಯನ್ನು ದಾಖಲಿಸಬೇಕು ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹಾಗೂ ವಿಮಾನಯಾನ ಸಚಿವಾಲಯವನ್ನು ಸಾಮಾಜಿಕ ಮಾಧ್ಯಮ ಬಳಕೆದಾರರು ಆಗ್ರಹಿಸಿದ್ದರು.

ಭಾರತವು ನೇಪಾಳದ ಲಕ್ಷಾಂತರ ಮಂದಿಗೆ ಉದ್ಯೋಗ, ಇಂಧನ ನೀಡಿದೆ. ವ್ಯಾಪಾರಕ್ಕೆ ಅವಕಾಶ ಮಾಡಿಕೊಟ್ಟಿದೆ. ವಿಪತ್ತು ಪರಿಹಾರವನ್ನು ಒದಗಿಸುವ ಮೂಲಕ ನೆರವು ನೀಡಿದೆ ಎಂದು ಹಲವಾರು ಸಾಮಾಜಿಕ ಮಾಧ್ಯಮ ಬಳಕೆದಾರರು ಗಮನ ಸೆಳೆದಿದ್ದಾರೆ.

ಸಾಮಾಜಿಕ ಮಾಧ್ಯಮ ಬಳಕೆದಾರರ ಆಕ್ರೋಶ ತೀವ್ರಗೊಳ್ಳುತ್ತಿದ್ದಂತೆಯೇ ಈ ಪೋಸ್ಟ್ ಅನ್ನು ಅಳಿಸಿ ಹಾಕಿರುವ ನೇಪಾಳ ವಿಮಾನ ಯಾನ ಸಂಸ್ಥೆ, ಇದು ನೇಪಾಳದ ಅಥವಾ ನೇಪಾಳ ವಿಮಾನ ಯಾನ ಸಂಸ್ಥೆಯ ಅಧಿಕೃತ ನಿಲುವಲ್ಲ ಎಂದು ಕ್ಷಮೆ ಕೋರಿದೆ. ನಾವು ವೈಮಾನಿಕ ಜಾಲದ ನಕ್ಷೆಯಲ್ಲಿನ ತಪ್ಪಿಗೆ ಪ್ರಾಮಾಣಿಕವಾಗಿ ಕ್ಷಮೆ ಕೋರುತ್ತೇವೆ. ಈ ನಕ್ಷೆಯಲ್ಲಿ ಅಂತಾರಾಷ್ಟ್ರೀಯ ಗಡಿಗಳಿಗೆ ಸಂಬಂಧಿಸಿದಂತೆ ನಕ್ಷೆಯ ಲೋಪ ಕಂಡು ಬಂದಿದೆ ಎಂದು ಎಕ್ಸ್ ನಲ್ಲಿ ಪೋಸ್ಟ್ ಮಾಡಿದೆ.

# ಆರ್‌ಸಿಬಿ ಬ್ಯಾಟಿಂಗ್ ವೈಫಲ್ಯ, ಗುಜರಾತ್ ಟೈಟನ್ಸ್‌ಗೆ ಭರ್ಜರಿ ಗೆಲುವು




**ಅಹಮದಾಬಾದ್, ಏ.30:** ಇಲ್ಲಿನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಗುರುವಾರ ರಾತ್ರಿ ನಡೆದ ಐಪಿಎಲ್ ಟೂರ್ನಿಯ 42ನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು 4 ವಿಕೆಟ್ ಗಳಿಂದ ಗುಜರಾತ್ ಟೈಟನ್ಸ್ ಸೋಲಿಸಿದೆ.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಆರ್ ಸಿಬಿ ಆರಂಭಿಕ ಆಟಗಾರರಾದ ಜಾಕೋಬ್ ಬೆಥೆಲ್ ಕೇವಲ 5 ರನ್ ಗಳಿಸಿದಾಗ ಮೊಹಮ್ಮದ್ ಸಿರಾಜ್ ಬೌಲಿಗ್ ನಲ್ಲಿ ರಶೀದ್ ಖಾನ್‌ಗೆ ಕ್ಯಾಚ್ ನೀಡಿ ನಿರ್ಗಮಿಸಿದರು.

ಬಳಿಕ ವಿರಾಟ್ ಕೊಹ್ಲಿ ಕೂಡಾ 28 ರನ್ ಗಳಿಸಿದಾಗ ರಶೀದ್ ಖಾನ್ ಗೆ ಕ್ಯಾಚ್ ನೀಡಿ ಪೆವಿಲಿಯನ್ ಗೆ ತೆರಳಿದರು. ದೇವದತ್ತ ಪಡಿಕ್ಕಲ್ 24 ಎಸೆತಗಳಲ್ಲಿ 40 ರನ್ ಗಳಿಸುವ ಮೂಲಕ ಗಮನ ಸೆಳೆದರಾದರೂ ರಶೀದ್ ಖಾನ್ ಬೌಲಿಂಗ್ ನಲ್ಲಿ ಔಟ್ ಆದರು.

ನಾಯಕ ರಜತ್ ಪಾಟಿದಾರ್ 19 ರನ್ ಗಳಿಸಿದಾಗ ಹೋಲ್ಡರ್ ಗೆ ಕ್ಯಾಚ್ ನೀಡಿದರೆ, ಜಿತೇಶ್ ಶರ್ಮಾ ಕೇವಲ 1 ರನ್ ಗಳಿಗೆ ಔಟ್ ಆದರು. ಟೀಮ್ ಡೇವಿಡ್ ಕೂಡಾ ಕೇವಲ 9 ರನ್ ಗಳಿಗೆ ರಶೀದ್ ಬೌಲಿಂಗ್ ನಲ್ಲಿ ಔಟ್ ಆದರೆ, ಕೃಣಾಲ್ ಪಾಂಡ್ಯ ಅರ್ಷದ್ ಖಾನ್ ಬೌಲಿಂಗ್ ನಲ್ಲಿ ಹೋಲ್ಡರ್‌ಗೆ ಕ್ಯಾಚ್ ನೀಡಿ ನಿರ್ಗಮಿಸಿದರು.

ನಂತರ ರೊಮರಿಯೊ ಕೂಡಾ ನಿಂತು ಆಡಲಿಲ್ಲ. 17ರನ್ ಗಳಿಗೆ ಔಟ್ ಆದರೆ, ವೆಂಕಟೇಶ್ ಅಯ್ಯರ್ 12, ರನ್ ಗಳಿಸಾದಗ ಅರ್ಷದ್ ಖಾನ್ ಬೌಲಿಂಗ್ ನಲ್ಲಿ ಸಾಯಿ ಸುದರ್ಶನ್ ಗೆ ಕ್ಯಾಚ್ ನೀಡಿ ಔಟ್ ಆದರು. ಭುವನೇಶ್ವರ್ ಕುಮಾರ್ 15 ರನ್ ಗಳಿಸಿದರೆ ಹೇಜಲ್ ವುಡ್ ಶೂನ್ಯಕ್ಕೆ ರನೌಟ್ ಆದರು. ಹೀಗಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ 19.2 ಓವರ್ ಗಳಲ್ಲಿ ಮೊದಲ ಸಲ ಆಲೌಟ್ ಆಗುವ ಮೂಲಕ ಕೇವಲ 155 ರನ್ ಗಳಿಸಲಷ್ಟೇ ಶಕ್ತವಾಯಿತು.

ಗುಜರಾತ್ ಟೈಟನ್ಸ್ ಪರ ಮೊಹಮ್ಮದ್ ಸಿರಾಜ್, ರಬಾಡ ತಲಾ 1 ವಿಕೆಟ್ ಪಡೆದರೆ, ಅರ್ಷದ್ ಖಾನ್ 3, ರಶೀದ್ ಖಾನ್ ಹಾಗೂ ಹೋಲ್ಡರ್ ತಲಾ 2 ವಿಕೆಟ್ ಪಡೆದರು. ಆರ್ ಸಿಬಿ ನೀಡಿದ 156 ರನ್ ಗಳ ಗೆಲುವಿನ ಗುರಿ ಬೆನ್ನಟ್ಟಿದ್ದ ಗುಜರಾತ್ ಟೈಟನ್ಸ್ ತಂಡ ಇನ್ನೂ 25 ಎಸೆತಗಳು ಇರುವಂತೆಯೇ 4 ವಿಕೆಟ್ ಗಳಿಂದ ಗೆಲುವಿನ ನಗೆ ಬೀರಿತು.

ನಾಯಕ ಶುಭಮನ್ ಗಿಲ್ 43, ಜೋಸ್ ಬಟ್ಲರ್ 39, ವಾಷಿಂಗ್ಟನ್ ಸುಂದರ್ 12, ಎಂ ಶಾರುಖ್ ಖಾನ್ 8, ರಾಹುಲ್ ತೇವಾಟಿಯಾ 27, ಜಾಸನ್ ಹೋಲ್ಡರ್ 12, ರಶೀದ್ ಖಾನ್ 7 ರನ್ ಗಳಿಸುವುದರೊಂದಿಗೆ 15.5 ಓವರ್ ಗಳಲ್ಲಿ 6 ವಿಕೆಟ್ ನಷ್ಟಕ್ಕೆ 158 ರನ್ ಗಳಿಸುವುದರೊಂದಿಗೆ ಗುಜರಾತ್ ಭರ್ಜರಿ ಗೆಲುವು ದಾಖಲಿಸಿತು.

# ಸರಣಿ ಸೋಲಿನಿಂದ ಮುಖಭಂಗ: ಮುಂಬೈ ತಂಡದ ನಾಯಕ ಪಾಂಡ್ಯ ವಿದಾಯ?

**ಮುಂಬೈ, ಏ. 30:** 19ನೇ ಆವೃತ್ತಿಯ ಐಪಿಎಲ್‌ನಲ್ಲಿ ಅದ್ಯಾಕೋ ಏನೋ ಐದು ಬಾರಿ ಚಾಂಪಿಯನ್ಸ್ ತಂಡ ಮುಂಬೈ ಇಂಡಿಯನ್ಸ್ ಗೆಲುವಿನ ಲಯಕ್ಕೆ ಮರಳಲು ಸಾಧ್ಯವಾಗುತ್ತಿಲ್ಲ. ಅತ್ತ ಟೀಮ್ ಬ್ಯಾಕ್ ಟು ಬ್ಯಾಕ್ ಸೋಲುತ್ತಿದ್ದರೆ, ಇತ್ತ ನಾಯಕನಾಗಿ ಹಾಗೂ ವೈಯಕ್ತಿಕ ಪ್ರದರ್ಶನ ನೀಡುವಲ್ಲಿ ಹಾರ್ದಿಕ್ ಪಾಂಡ್ಯ ಎಡವುತ್ತಿರುವುದು ಸದ್ಯ ಮಾಜಿ ಕ್ರಿಕೆಟಿಗರ ಕೆಂಗಣ್ಣಿಗೆ ಗುರಿಯಾಗಿದೆ.

ಮುಂಬೈ ಇಂಡಿನ್ಸ್ ಸ್ಟಾರ್ ಆಲ್‌ರೌಂಡರ್ ಆಗಿರುವ ಹಾರ್ದಿಕ್ ಪಾಂಡ್ಯ, ತಮ್ಮ ಕ್ಯಾಪ್ಟನ್ಸಿಯನ್ನು ಅಚ್ಚುಕಟ್ಟಾಗಿ ಮುಂದುವರಿಸಿಕೊಂಡು ಹೋಗುವಲ್ಲಿ ಸಂಪೂರ್ಣವಾಗಿ ಮುಗ್ಗರಿಸಿದ್ದಾರೆ. ಐಪಿಎಲ್ ಅಂಕಪಟ್ಟಿಯಲ್ಲಿ ಕೆಳ ಸ್ಥಾನದಲ್ಲಿರುವ ಎಂಐ, ಟಾಪ್ 5ಕ್ಕೆ ಬರಲು ಅಂತಹ ಉತ್ತಮ ಪ್ರದರ್ಶನ ನೀಡುತ್ತಿಲ್ಲ ಎಂಬುದೇ ಕ್ರಿಕೆಟ್ ಪ್ರೇಮಿಗಳ ಬೇಸರ. ಅತ್ಯುತ್ತಮ ಬೌಲರ್‌ಗಳು ಮತ್ತು ಬ್ಯಾಟರ್‌ಗಳನ್ನು ಹೊಂದಿರುವ ಮುಂಬೈ ಇಂಡಿಯನ್ಸ್, ಗೆಲುವಿನ ಲಯಕ್ಕೆ ಮರಳಲು ಏಕಿಷ್ಟು ಪರದಾಡುತ್ತಿದೆ ಎಂಬುದು ತಿಳಿಯದಂತಾಗಿದೆ.

ಇಲ್ಲಿಯವರೆಗೆ ಆಡಿರುವ ಎಂಟು ಪಂದ್ಯಗಳಲ್ಲಿ 6ರಲ್ಲಿ ಎಂಐ ಸೋತಿದೆ. ಈ ಹಿಂದೆ, ಗುಜರಾತ್ ಟೈಟನ್ಸ್ ತಂಡಕ್ಕೆ ಗೆಲುವಿನ ಕಿರೀಟ ತೊಡಿಸಿದ್ದ ಪಾಂಡ್ಯ, ಮುಂಬೈ ಇಂಡಿಯನ್ಸ್‌ಗೆ ಮರಳಿದ ಬೆನ್ನಲ್ಲೇ ನಾಯಕನ ಸ್ಥಾನ ಪಡೆದರು. ಆದರೆ, ಅಲ್ಲಿ ಮಾಡಿದ ಮ್ಯಾಜಿಕ್, ಇಲ್ಲಿ ಮಾಡಲು ಸಾಧ್ಯವಾಗಿಲ್ಲ. ರೋಹಿತ್ ಶರ್ಮಾ ಅವರಿಂದ ನಾಯಕತ್ವ ಕಸಿದುಕೊಂಡ ಎಂಬ ಅಭಿಮಾನಿಗಳ ಟೀಕೆಗಳನ್ನು ಇಂದಿಗೂ ಎದುರಿಸುತ್ತಿರುವ ಹಾರ್ದಿಕ್, ತಮ್ಮ ತಂಡವನ್ನು ಪ್ಲೇಆಫ್ಗೆ ಕೊಂಡೊಯ್ಯುವುದು ಬಹುತೇಕ ಅನುಮಾನ ಎಂಬ ಮಾತುಗಳು ಕೇಳಿಬರುತ್ತಿವೆ.

ಹಾರ್ದಿಕ್ ಪಾಂಡ್ಯ ಮತ್ತು ತಂಡದ ಕಳಪೆ ಪ್ರದರ್ಶನದ ವಿರುದ್ಧ ಸಾಕಷ್ಟು ಟೀಕೆಗಳ ಬೆನ್ನಲ್ಲೇ ಮುಂದಿನ ವರ್ಷ ಮುಂಬೈ ತಂಡದಲ್ಲಿ ಬದಲಾವಣೆಗಳನ್ನು ಮಾಡಲು ಬಯಸಿದರೆ, ಮೊದಲು ನಾಯಕತ್ವವನ್ನು ನಿರ್ಧರಿಸಬೇಕು ಎಂದು ಮಾಜಿ ಕ್ರಿಕೆಟಿಗ ಸೈಮನ್ ಡೌಲ್ ಅಚ್ಚರಿ ಹೇಳಿಕೆಯನ್ನು ನೀಡಿದ್ದಾರೆ. ಹಾರ್ದಿಕ್ ಪಾಂಡ್ಯ ಅವರನ್ನು ಕ್ಯಾಪ್ಟನ್ ಸ್ಥಾನದಿಂದ ಕಿತ್ತುಬಿಸಾಡಬೇಕಾದರೆ, ಅವರನ್ನು ಮೊದಲು ತಂಡದಿಂದ ರಿಲೀಸ್ ಮಾಡುವುದು ಉತ್ತಮ. ನಾಯಕತ್ವದ ಜವಾಬ್ದಾರಿ ಕಳೆದುಕೊಂಡ ಅದೇ ತಂಡದಲ್ಲಿ ಸಾಮಾನ್ಯ ಆಟಗಾರನಾಗಿ ಅವರು ಎಷ್ಟು ಉತ್ತಮವಾಗಿ ಪ್ರದರ್ಶನ ನೀಡಬಲ್ಲರು ಎಂದು ನೋಡಬಹುದು ಎಂದರು. ಇದು ಕ್ರಿಕೆಟ್ ಲೋಕದಲ್ಲಿ ಭಾರೀ ಚರ್ಚೆಗೆ ಗ್ರಾಸವಾಗಿದೆ.

# ಇ–ಸಿಗರೇಟ್ ಸೇದಿದ ಪರಾಗ್‌ಗೆ ದಂಡ



**ಮುಂಬೈ, ಏ.30:** ಮಂಗಳವಾರ (ಏ. 28) ನಡೆದ ಪಂಜಾಬ್ ಕಿಂಗ್ಸ್ ಹಾಗೂ ರಾಜಸ್ಥಾನ್ ರಾಯಲ್ಸ್ ನಡುವಿನ ಐಪಿಎಲ್ ಪಂದ್ಯದ ವೇಳೆ ರಾಜಸ್ಥಾನ್ ತಂಡದ ನಾಯಕ ರಿಯಾನ್ ಪರಾಗ್ ಇ–ಸಿಗರೇಟ್ ಸೇದಿದ ವಿಡಿಯೋ ಎಲ್ಲಾ ಕಡೆ ವೈರಲ್ ಆಗಿ ಆಕ್ರೋಶಕ್ಕೆ ಕಾರಣವಾಗಿತ್ತು. ಈ ಬಗ್ಗೆ ಕ್ರಮ ಕೈಗೊಂಡಿರುವ ಬಿಸಿಸಿಐ ರಿಯಾನ್ ಪರಾಗ್‌ಗೆ ಅಂದಿನ ಪಂದ್ಯದ ಶುಲ್ಕದ ಶೇ.25 ರಷ್ಟು ಮೊತ್ತವನ್ನು ದಂಡದ ರೂಪದಲ್ಲಿ ಭರಿಸುವಂತೆ ತಿಳಿಸಿದೆ.

ಪರಾಗ್ ಐಪಿಎಲ್‌ನ ನೀತಿ ಸಂಹಿತೆಯನ್ನು ಮುರಿದ್ದಿದ್ದಾರೆ, ಆದರೆ ಇದು ಕೇವಲ ಮೊದಲ ಹಂತದ ಉಲ್ಲಂಘನೆಯಾದ ಕಾರಣ ಕೇವಲ 25% ದಂಡವನ್ನು ಮಾತ್ರ ವಿಧಿಸಲಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ. ಏಪ್ರಿಲ್ 28 ರಂದು, ಪಂಜಾಬ್‌ನ ಪಿಸಿಎ ಕ್ರೀಡಾಂಗಣದಲ್ಲಿ ನಡೆದ 19ನೇ ಸಾಲಿನ ಐಪಿಎಲ್‌ನ 40ನೇ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ತಂಡ, ಪಂಜಾಬ್ ಕಿಂಗ್ಸ್ ತಂಡವನ್ನು ಸೋಲಿಸುವ ಮೂಲಕ ಪಂಜಾಬ್ನ ಗೆಲುವಿನ ಓಟಕ್ಕೆ ಬ್ರೇಕ್ ಹಾಕಿತು.

ಆದರೆ ಇದೇ ಪಂದ್ಯಾವಳಿಯಲ್ಲಿ ರಾಜಸ್ಥಾನ್ ರಾಯಲ್ಸ್ ತಂಡದ ನಾಯಕ ರಿಯಾನ್ ಪರಾಗ್ ಡ್ರೆಸಿಂಗ್ ರೂಮ್‌ನಲ್ಲಿ ವೇಪ್ (ಇಲೆಕ್ಟ್ರಾನಿಕ್ ಸಿಗರೇಟ್) ಸೇದುತ್ತಿರುವ ದೃಶ್ಯವೊಂದು ಕ್ಯಾಮರಾದ ಕಣ್ಣಿನಲ್ಲಿ ಸೆರೆಯಾಗಿದ್ದು, ಈ ವಿಡಿಯೋ ಸೋಷಿಯಲ್ ಮೀಡಿಯಾನಲ್ಲಿ ದೊಡ್ಡ ಚರ್ಚೆಗೆ ವೇದಿಕೆಯಾಗಿದೆ.

ಭಾರತ ಸರ್ಕಾರವು 2019ರಲ್ಲಿ ಎಲೆಕ್ಟ್ರಾನಿಕ್ ಸಿಗರೇಟ್ ನಿಷೇಧ ಕಾಯ್ದೆ ಅಡಿಯಲ್ಲಿ ಇ–ಸಿಗರೇಟ್ ಮತ್ತು ವೇಪ್ಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಈ ಕಾಯ್ದೆಯ ಪ್ರಕಾರ, ಇ–ಸಿಗರೇಟ್ ಮತ್ತು ವೇಪ್‌ಗಳ ಉತ್ಪಾದನೆ ಮತ್ತು ತಯಾರಿಕೆ, ಆಮದು ಮತ್ತು ರಫ್ತು, ಸಂಗ್ರಹಣೆ ಮತ್ತು ಮಾರಾಟ ಅಂತೆಯೇ ಯಾವುದೇ ರೀತಿಯ ಜಾಹೀರಾತನ್ನು ಮಾಡುವಂತಿಲ್ಲ ಎಂಬ ನಿಯಮವಿದೆ.